ಸಂಪುಟ: 13 Volume | ಸಂಚಿಕೆ: 296 Issue | ಪುಟಗಳು 08 Pages | ಮಂಗಳವಾರ 13 ಜನವರಿ 2026 | ₹6 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಶರೀರ ಕೃಷಿ ಭೂಮಿಯಾಗಿದೆ. ಮನಸ್ಸು ಕೃಷಿಯಾಗಿದೆ. ಪಾಪ ಪುಣ್ಯಗಳು ಬೀಜಗಳಾಗಿವೆ. ಯಾವ ಬೀಜವನ್ನು ಬಿತ್ತುತ್ತಾನೋ ಅದನ್ನು ಕೊಯ್ಯುತ್ತಾನೆ.

–ತುಳಸೀದಾಸರು

ಶಾಸಕರಿಂದ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ 6

ಒಳ್ಳೆಯ ಮನುಷ್ಯನಾಗುವುದೇ ದೊಡ್ಡ ಸಾಧನೆ 7

6 ದಶಕಗಳಿಂದ ಜನಸೇವೆ ಮಾಡಿದ ಜನನಾಯಕ 8

## ಚುನಾವಣೆ ನಡೆಸಲು ಸೂಚನೆ



**ನವದೆಹಲಿ:** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳಿಗೆ ಚುನಾವಣೆಯನ್ನು ಜೂನ್ ಅಂತ್ಯದ ಒಳಗೆ ನಡೆಸುವಂತೆ ಸುಪ್ರೀಂ ಕೋರ್ಟ್ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ. ನೂತನವಾಗಿ ರಚನೆಯಾಗಿರುವ ಗ್ರೇಟರ್ ಬೆಂಗಳೂರು ಪ್ರಾಧಿಕಾರ'ದ ಅಡಿಯಲ್ಲಿ ಬರುವ ಐದು ನಗರ ಪಾಲಿಕೆಗಳ ಚುನಾವಣಾ ಪ್ರಕ್ರಿಯೆಯನ್ನು ಜೂನ್ 30ರೊಳಗೆ ಪೂರ್ಣಗೊಳಿಸುವಂತೆ ಸುಪ್ರೀಂ ಕೋರ್ಟ್ನ ಸಿಜೆಐ ಪೀಠವು ರಾಜ್ಯ ಸರ್ಕಾರಕ್ಕೆ ಮತ್ತು ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಿದೆ.

## PS3 ಉಡಾವಣೆ ಹಂತದಲ್ಲಿ ವೈಫಲ್ಯ



**ಶ್ರೀಹರಿಕೋಟಾ:** ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಬಹುನಿರೀಕ್ಷಿತ ಅನ್ವೇಷ ಹೆಸರಿನ PSLV–C62 ಉಡಾವಣೆ PS3 ಹಂತದ ಅಂತಿಮ ಹಂತದಲ್ಲಿ ವಿಫಲಗೊಂಡಿದೆ. ಇಸ್ರೋ ಸಂಸ್ಥೆ ಸೋಮವಾರ ಶ್ರೀಹರಿಕೋಟಾದಿಂದ ಲಾಂಚ್ ಮಾಡಿದ್ದ PSLV-C62 ರಾಕೆಟ್ 14 ವಾಣಿಜ್ಯ ಉಪಗ್ರಹಗಳನ್ನು ಹೊತ್ತೊಯ್ಯುತ್ತಿತ್ತು. ಮೊದಲ ಎರಡು ಹಂತಗಳನ್ನು ಪಾರು ಮಾಡಿದ ಉಡಾವಣೆ ಮೂರನೇ ಹಂತದಲ್ಲಿ ಅಸಂಗತತೆಯನ್ನು ಎದುರಿಸಿದೆ ಎಂದು ಇಸ್ರೋ ಧೃಡಪಡಿಸಿದೆ. ಈ ಕುರಿತು ಇಸ್ರೋ ತನ್ನ ಅಧಿಕೃತ X ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದು, PSLV-C62 -C62 ಮಿಷನ್ PS3 ಹಂತದ ಅಂತ್ಯದಲ್ಲಿ ತೊಂದರೆ ಎದುರಿಸಿತು. ಈ ಕುರಿತು ವಿವರವಾದ ದತ್ತಾಂಶ ವಿಶ್ಲೇಷಣೆ ಆರಂಭಿಸಲಾಗಿದೆ ಎಂದು ತಿಳಿಸಿದೆ.

## ಫಲಪುಷ್ಪ ಪ್ರದರ್ಶನಕ್ಕೆ ಅರ್ಹರ ಆಹ್ವಾನ

**ಬೆಂಗಳೂರು:** ಲಾಲ್‌ಬಾಗ್ ಸಸ್ಯ ಶಾಸ್ತ್ರೀಯ ತೋಟದಲಿ, ಜನವರಿ–2026 ರ ಗಣರಾಜ್ಯೋತ್ಸವದ ಅಂಗವಾಗಿ ಆಯೋಜಿಸಲಾಗುತ್ತಿರುವ ತೇಜಸ್ವಿ–ವಿಸ್ಮಯ; ಕೆ. ಪಿ. ಪೂರ್ಣಚಂದ್ರ ತೇಜಸ್ವಿ ಅವರ ಬದುಕು–ಬರಹ ವಿಷಯಾಧಾರಿತ 219ನೇ ಫಲಪುಷ್ಪ ಪ್ರದರ್ಶನಕ್ಕೆ ಪೂರಕವಾಗಿ, ವಿವಿಧ ಪುಷ್ಪಾಧಾರಿತ ಕಲೆಗಳ (ಇಕೆಬಾನ ಜಾನೂರ್, ಥಾಯ್ ಆರ್ಟ್, ತರಕಾರಿ ಕೆತ್ತನೆ ಹಾಗೂ ಪುಷ್ಪ ರಂಗೋಲಿ) ಪ್ರದರ್ಶನ ಹಾಗೂ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಈ ಸ್ಪರ್ಧೆಗಳಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತರು ತೋಟಗಾರಿಕೆ ಅಪರ ನಿರ್ದೇಶಕರ ಕಚೇರಿ (ಯೋಜನೆ), ಲಾಲ್‌ಬಾಗ್, ಬೆಂಗಳೂರು ಇಲ್ಲಿ ಅರ್ಜಿ ಪಡೆದು, ಪ್ರತಿ ಅರ್ಜಿಗೆ ರೂ. 100 ಶುಲ್ಕ ಪಾವತಿಸಿ 2026 ನೇ ಜ. 14 ರ ಒಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದು.

## ಮ್ಯಾಗ್ನೆಟ್‌ಗಳ ಉತ್ಪಾದನೆಗೆ ಉತ್ತೇಜನ

• ಮಲ್ಲಮ್ಮ ನುಡಿ ವಾರ್ತೆ ಹೊಸದಿಲ್ಲಿ



ಭೂಮಿಯಲ್ಲಿನ ಅಪರೂಪದ ಶಾಶ್ವತ ಮ್ಯಾಗ್ನೆಟ್‌ಗಳ ಉತ್ಪಾದನೆ ಉತ್ತೇಜಿಸಿ ಬಳಸುವ ಯೋಜನೆಯ (REPM) ಪಾಲುದಾರರ ಜತೆ ಸಚಿವಾಲಯದ ಕಚೇರಿಯಲ್ಲಿ ಮಹತ್ವದ ಸಮಾಲೋಚನೆ ನಡೆಸಲಾಯಿತು. ಅಪರೂಪದ ಮ್ಯಾಗ್ನೆಟ್‌ಗಳನ್ನು ದೇಶಿಯವಾಗಿ ಉತ್ಪಾದಿಸುವ ಸಮಗ್ರ ಉತ್ಪಾದನ ಪೂರಕ ವ್ಯವಸ್ಥೆ ನಿರ್ಮಿಸುವ ಗುರಿ ಹೊಂದಿರುವ 7,280 ಕೋಟಿ ಮೊತ್ತದ ಯೋಜನೆಯನ್ನು ಪ್ರಧಾನಮಂತ್ರಿ ಅವರ ನೇತೃತ್ವದಲ್ಲಿ ರೂಪಿಸಲಾಗಿದೆ. ಆತ್ಮನಿರ್ಭರ ಭಾರತದ ದೃಷ್ಟಿಕೋನಕ್ಕೆ ನಿಕಟವಾಗಿ ಈ ಯೋಜನೆ ಕಾರ್ಯಗತವಾಗುತ್ತದೆ. ಈ ಸಭೆಯಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಜೊತೆ 20ಕ್ಕೂ ಹೆಚ್ಚು ಉದ್ಯಮ ಪಾಲುದಾರರು ಭಾಗಿಯಾಗಿದ್ದರು.

## ಯುವ ದಿನ ಅಭಿಯಾನಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು




ಸಮರ್ಥ ಭಾರತದ ವತಿಯಿಂದ ಸ್ವಾಮಿ ವಿವೇಕಾನಂದ ಜಯಂತಿ ಮತ್ತು ರಾಷ್ಟ್ರೀಯ ಯುವ ದಿನದ ಅಂಗವಾಗಿ ಆಯೋಜಿಸಲಾಗಿರುವ 12ನೇ ವರ್ಷದ ಬಿ ಗುಡ್ ಡು ಗುಡ್ ಯುವ ಅಭಿಯಾನವನ್ನು ಉದ್ಘಾಟಿಸಲಾಯಿತು.

ಕರ್ನಾಟಕ ಸರ್ಕಾರದ ಪಶುಸಂಗೋಪನಾ ಇಲಾಖೆಯ ಸಹ ನಿರ್ದೇಶಕ ಡಾ. ಎಂ ಜಯಪ್ರಕಾಶ್, ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ರಮೇಶ್ ಬಿ, ಮಾಜಿ ಕುಲಪತಿ ಪ್ರೊ.ನರಸಿಂಹಮೂರ್ತಿ, ಸಿಂಡಿಕೇಟ್ ಸದಸ್ಯ ಸುಪ್ರಿತ್, ಭಾರತೀಯ ಶಿಕ್ಷಣ ಮಂಡಲ ಕರ್ನಾಟಕ ದಕ್ಷಿಣ ಪ್ರಾಂತ ಸಹ ಕಾರ್ಯದರ್ಶಿ ಹಾಗೂ ಸಮರ್ಥ ಭಾರತದ ಸದಸ್ಯೆ ಚೇತನಾ ರಾಜೇಂದ್ರ ಜ್ಞಾನಜ್ಯೋತಿ ಸಭಾಂಗಣದಲ್ಲಿ ಸಮಾರಂಭಕ್ಕೆ ಚಾಲನೆ ನೀಡಿದ್ದಾರೆ.

# ಸಮ ಸಮಾನತೆಗಾಗಿ ಶ್ರಮ

### ಹೈ–ಕದನಲ್ಲಿ ಪ್ರಗತಿ | ಹತ್ತು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕದಲ್ಲಿ ಅಸಮಾನತೆಯ ಅಳಿವು: ಸಿಎಂ ಸಿದ್ದರಾಮಯ್ಯ

• ಅಶೋಕ್ ದೊಡ್ಡಮನಿ, ಕಲಬುರಗಿ





ಹತ್ತು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕದಲ್ಲಿ ಅಸಮಾನತೆ ಹೋಗಿ ಸಮಾನತೆ ಬರಲಿದೆ ಎಂಬ ವಿಶ್ವಾಸವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವ್ಯಕ್ತಪಡಿಸಿದ್ದಾರೆ.

ಅವರು ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಕಲಬುರಗಿ ಇವರ ಸಮುಕ್ತಶ್ರಯದಲ್ಲಿ ಕೆಪಿಎಸ್ ಶಾಲಾ ಆವರಣ ಯಡ್ರಾಮಿಯಲ್ಲಿ ಆಯೋಜಿಸಿದ್ದ ಪ್ರಜಾಸೌಧ. ಕೆಪಿಎಸ್ ಶಾಲೆ ಹಾಗೂ ವಿವಿಧ ಇಲಾಖೆಗಳ ಕಾಮಗಾರಿಗಳ ಶಂಕುಸ್ಥಾಪನೆ, ಫಲಾನುಭವಿಗಳಿಗೆ ಸೌಲಭ್ಯಗಳ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ನೂತನವಾಗಿ ಘೋಷಣೆಯಾಗಿರುವ ಯಡ್ರಾಮಿ ತಾಲೂಕಿನಲ್ಲಿ, ಜೇವರ್ಗಿ ಮತಕ್ಷೇತ್ರದಲ್ಲಿ 87 ಕಾಮಗಾರಿಗಳ ಕಾಮಗಾರಿಗಳನ್ನು 867.49 ಕೋಟಿ ವೆಚ್ಚದ , 38.29 ಕೋಟಿ ವೆಚ್ಚ ಕಾಮಗಾರಿಗಳಿಗೆ ಉದ್ಘಾಟನೆ ಮಾಡಲಾಗಿದೆ. 906 ಕೋಟಿ ರೂ.ಗಳ ವೆಚ್ಚದಲ್ಲಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಾಗಿದೆ ಎಂದು ತಿಳಿಸಿದ್ದಾರೆ.

**ರಾಜಕಾರಣಕ್ಕಾಗಿ ಸುಳ್ಳು:** ಪ್ರತಿಪಕ್ಷದವರು ರಾಜಕಾರಣಕ್ಕಾಗಿ ಸುಳ್ಳನ್ನೇ ಹೇಳುತ್ತಿದ್ದಾರೆ. ಗ್ಯಾರಂಟಿ ಯೋಜನೆಗಳಿಂದ ಮೂಲಸೌಕರ್ಯ ಕಾಮಗಾರಿಗಳಿಗೆ ಸರ್ಕಾರದಲ್ಲಿ ಅನುದಾನವಿಲ್ಲ ಎಂದು ಎಲ್ಲೆಡೆ ಅಪಪ್ರಚಾರ ಮಾಡುತ್ತಿದ್ದಾರೆ. ಸರ್ಕಾರ ದಿವಾಳಿಯಾಗಿದ್ದರೆ ಜೇವರ್ಗಿ ಮತಕ್ಷೇತ್ರ ಒಂದರಲ್ಲಿ 906 ಕೋಟಿಗಳನ್ನು ವೆಚ್ಚ ಮಾಡಲಾಗುತ್ತಿರಲಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

- ಯಡ್ರಾಮಿ ತಾಲೂಕಿನಲ್ಲಿ 906 ಕೋಟಿ ರೂ.ಗಳ ವೆಚ್ಚದಲ್ಲಿ ಕಾಮಗಾರಿಗಳಿಗೆ ಶಂಕುಸ್ಥಾಪನೆ
- ಹತ್ತು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕದಲ್ಲಿ ಅಸಮಾನತೆ ತೊಲಗಲು ಸಮಾನತೆ ತರಲು ಶ್ರಮ
- ಯಡ್ರಾಮಿ ತಾಲೂಕಿನಲ್ಲಿ ಹಾಗೂ ಜೇವರ್ಗಿ ಮತಕ್ಷೇತ್ರದಲ್ಲಿ 87 ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಚಾಲನೆ
- ಗ್ಯಾರಂಟಿ ಯೋಜನೆಗಳಿಂದ ಮೂಲಸೌಕರ್ಯ ಕಾಮಗಾರಿಗಳಿಗೆ ಅನುದಾನವಿಲ್ಲ ಎಂದು ಬಿಜೆಪಿ, ಜೆಡಿಎಸ್ ಪಕ್ಷಗಳಿಂದ ಅಪಪ್ರಚಾರ: ಸಿಎಂ

### ಕೊಟ್ಟ ಮಾತು, ಇಟ್ಟ ಗುರಿ ತಪ್ಪಿಲ್ಲ

1 ಲಕ್ಷದ 12 ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಅನುದಾನ ವೆಚ್ಚ ಮಾಡಲಾಗಿದೆ. ಚುನಾವಣೆ ಪೂರ್ವದಲ್ಲಿ ನೀಡಿದ್ದ ಆಶ್ವಾಸನೆಯಂತೆ ಅಧಿಕಾರಕ್ಕೆ ಬಂದ ಒಂದೇ ವರ್ಷದಲ್ಲಿ ಎಲ್ಲಾ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ. ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಿದೆ ಎನ್ನುವುದನ್ನು ಜನ ಅರ್ಥ ಮಾಡಿಕೊಳ್ಳಬೇಕು. ನಮ್ಮ ಸರ್ಕಾರ ನುಡಿದಂತೆ ನಡೆದಿದೆ ಎಂದಿದ್ದಾರೆ ಸಿಎಂ.

### 49 ತಾಲೂಕುಗಳಲ್ಲೂ ಪ್ರಜಾಸೌಧ

ರಾಜ್ಯದಲ್ಲಿ 63 ಹೊಸ ತಾಲೂಕುಗಳನ್ನು ಘೋಷಣೆ ಮಾಡಲಾಗಿತ್ತು. 2018ರಿಂದ 2023ರವರೆಗೆ ನೂತನ ತಾಲೂಕುಗಳಿಗೆ ಬಿಜೆಪಿ ಸೌಲಭ್ಯ ಒದಗಿಸಿದ್ದು ಕೇವಲ 14 ತಾಲೂಕು ಗಳಲ್ಲಿ ಮಾತ್ರ ಮಾಡಿದ್ದರು. 2023ರಲ್ಲಿ ಅಧಿಕಾರಕ್ಕೆ ಬಂದ ಬಳಿಕ 49 ತಾಲೂಕುಗಳಲ್ಲೂ ಪ್ರಜಾಸೌಧಗಳನ್ನು ಮಂಜೂರು ಮಾಡಿದ್ದು, ನಿರ್ಮಾಣ ಮಾಡಲಾಗುವುದು ಎಂದಿದ್ದಾರೆ ಸಿಎಂ.

### 371ಜೆ ಜಾರಿಯಲ್ಲಿ ಬಿಜೆಪಿ ಪಾತ್ರವಿಲ್ಲ

371 ಜೆ ಜಾರಿಯಾಗಿದ್ದರೆ ಅದಕ್ಕೆ ಕಾರಣ ಮಲ್ಲಿಕಾರ್ಜುನ ಖರ್ಗೆ, ಧರ್ಮಸಿಂಗ್ ಅವರು ಕಾರಣ. ಇದರಲ್ಲಿ ಬಿಜೆಪಿಯ ಪಾತ್ರವಿಲ್ಲ. ಅಸಮಾನತೆ ಹೋಗಲಾಡಿಸಲು ನಂಜುಂಡಪ್ಪ ಅವರ ವರದಿಯನ್ನು ಆಧರಿಸಿ ಶಿಫಾರಸು ಜಾರಿಗೊಳಿಸಲಾಗಿದೆ. ಇದರ ಪರಿಣಾಮಗಳ ಬಗ್ಗೆ ವರದಿ ಸಲ್ಲಿಸಲು ಗೋವಿಂದ ರಾವ್ ಸಮಿತಿ ರಚಿಸಲಾಗಿದೆ ಎಂದಿದ್ದಾರೆ.

## ಖರ್ಗೆ, ಡಿ.ಸಿಎಂ ಡಿಕೆಶಿ ಭೇಟಿಯ ಕುತೂಹಲ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಅಧಿಕಾರ ಹಂಚಿಕೆಯ ಗೊಂದಲಗಳು ತ್ರಿಶಂಕುಸ್ಥಿತಿಯಲ್ಲಿರುವ ನಡುವೆಯೇ ಕೆಪಿಸಿಸಿ ಅಧ್ಯಕ್ಷ ಹಾಗೂ ಡಿ.ಸಿಎಂ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿರುವುದು ಕುತೂಹಲ ಕೆರಳಿಸಿದೆ.

ರಾಜ್ಯ ಕಾಂಗ್ರೆಸ್ ಉಸ್ತುವಾರಿ ನಾಯಕ ರಣದೀಪ್ ಸಿಂಗ್ ಸುರ್ಜೇವಾಲ ಬೆಂಗಳೂರಿಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಡಿ.ಕೆ.ಶಿವಕುಮಾರ್ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರ ಭೇಟಿ ಭಾರಿ ಬದಲಾವಣೆ ತರ್ಕಕ್ಕೆ ಮುನ್ಸೂಚನೆ ನೀಡಿದೆ.

### ಅಗತ್ಯ ಬಿದ್ದಾಗ ದೆಹಲಿಗೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ಅಗತ್ಯವಿದ್ದಾಗ ಚರ್ಚೆಗಾಗಿ ದೆಹಲಿಗೆ ಕರೆಯಲಾಗುವುದು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

## ಅಕ್ರಮ ತೆರವಿಗೆ ಬಿಜೆಪಿ ಸತ್ಯ ವರದಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ರಾಜ್ಯದಲ್ಲಿ ಭಾರೀ ವಿವಾದಕ್ಕೆ ಒಳಗಾದ ಕೋಗಿಲು ಬಡಾವಣೆ ಅಕ್ರಮ ತೆರವು ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಸತ್ಯಶೋಧನಾ ಸಮಿತಿ ವರದಿ ಸಲ್ಲಿಕೆ ಮಾಡಿದೆ. 108 ಪುಟಗಳ ವರದಿಯಲ್ಲಿ ಐದು ಶಿಫಾರಸುಗಳನ್ನು ಮಾಡಲಾಗಿದೆ. ಈ ಪ್ರಕರಣದ ತನಿಖೆಯನ್ನು ಎನ್ ಐ ಎ ಗೆ ನೀಡುವಂತೆ ಆಗ್ರಹಿಸಿದೆ.

ಬಿಜೆಪಿ ಶಾಸಕ ಎಸ್ ಆರ್ ವಿಶ್ವನಾಥ್, ಎಸ್ ಮುನಿರಾಜು, ಕೆ ಎಸ್ ನವೀನ್, ಮಾಳವಿಕಾ ಅವಿನಾಶ್, ತಮ್ಮೇಶ್ ಗೌಡ, ಎಸ್ ಹರೀಶ್, ಭಾಸ್ಕರ್ ರಾವ್ ನೇತೃತ್ವದಲ್ಲಿ ಸಮಿತಿ ರಚನೆ ಮಾಡಲಾಗಿತ್ತು. ಈ ಸಮಿತಿ ಸೋಮವಾರ ವರದಿ ಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರಿಗೆ ಸಲ್ಲಿಸಿದೆ. ವರದಿ ಸಲ್ಲಿಕೆ ಸಂದರ್ಭದಲ್ಲಿ ಮಾತನಾಡಿದ ಶಾಸಕ ಎಸ್ ಆರ್ ವಿಶ್ವನಾಥ್, ಕೋಗಿಲು ಬಡಾವಣೆಯಲ್ಲಿ ಅಕ್ರಮವಾಗಿ ಬಾಂಗ್ಲಾ ವಲಸಿಗರು ತಾತ್ಕಾಲಿಕ ಮನೆ ಕಟ್ಟಿ ವಾಸವಾಗಿದ್ದರು ಎಂದು ವಿವರಿಸಿದ್ದಾರೆ.

## ಯಮಾಹಾ ಇಸಿ–06 ಬೈಕ್ ಹಸ್ತಾಂತರ



• ಮಲ್ಲಮ್ಮ ನುಡಿ ವಾರ್ತೆ ಹೊಸಕೋಟೆ

ಸ್ಥಳೀಯವಾಗಿ ಉತ್ಪಾದನೆಯನ್ನು ಸಾಧ್ಯವಾಗಿಸುವ ಕೈಗಾರಿಕಾ ಸಹಭಾಗಿತ್ವದ ಅಡಿ ಕರ್ನಾಟಕ ಮೂಲದ ರಿವರ್ ಮೊಬಿಲಿಟಿ ಕಂಪನಿ ತಯಾರಿಸಿರುವ ಯಮಾಹಾ ಇಸಿ–06 ವಿದ್ಯುತ್ ಚಾಲಿತ ಬೈಕ್ ಅನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ, ಜಾಗತಿಕ ಮಟ್ಟದಲ್ಲಿ ಹೆಸರು ಮಾಡಿರುವ ಯಮಾಹಾ ಕಂಪನಿಗೆ ಇಲ್ಲಿನ ತಯಾರಿಕಾ ಘಟಕದಲ್ಲಿ ಹಸ್ತಾಂತರಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಗರ ಸಂಚಾರವನ್ನು ಪರಿಸರಸ್ನೇಹಿ, ಸುಗಮ ಮತ್ತು ಸುಸ್ಥಿರಗೊಳಿಸುವಂತಹ ಇಂತಹ ದ್ವಿಚಕ್ರ ವಾಹನ ತಯಾರಿಕೆ ಸ್ಥಳೀಯವಾಗಿಯೇ ಆಗತೊಡಗಿರುವುದು ರಾಜ್ಯದ ಕೈಗಾರಿಕಾ ಬೆಳವಣಿಗೆಯಲ್ಲಿ ಒಂದು ಉಜ್ವಲ ಅಧ್ಯಾಯವಾಗಿದೆ. ಇದು ರಾಜ್ಯವು ಭವಿಷ್ಯದ ಸಂಚಾರ ವ್ಯವಸ್ಥೆಯ ನಿರ್ಮಾಣದ ಸರಿಯಾದ ಪಥದಲ್ಲಿ ಸಾಗುತ್ತಿರುವುದಕ್ಕೆ ಅತ್ಯುತ್ತಮ ನಿದರ್ಶನವಾಗಿದೆ ಎಂದು ಬಣ್ಣಿಸಿದ್ದಾರೆ. ಇದೇ ವೇಳೆಯಲ್ಲಿ ಅವರು ಕಂಪನಿಯ ತಯಾರಿಕಾ ವ್ಯವಸ್ಥೆ ಮತ್ತಿತರ ಸೌಲಭ್ಯಗಳನ್ನು ವೀಕ್ಷಿಸಿದ್ದಾರೆ.

## ಹ್ಯಾಟ್ರಿಕ್ ವಿಕೆಟ್ ಪಡೆದ ಮೊದಲ ವೇಗಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮಹಿಳಾ ಪ್ರೀಮಿಯರ್ ಲೀಗ್‌ನಲ್ಲಿ ಹ್ಯಾಟ್ರಿಕ್ ವಿಕೆಟ್ ಪಡೆದ ಮೊದಲ ಭಾರತೀಯ ವೇಗಿ ಎಂಬ ಹೆಗ್ಗಳಿಕೆಗೆ ನಂದನಿ ಶರ್ಮಾ ಪಾತ್ರರಾಗಿದ್ದಾರೆ. ನವಿ ಮುಂಬೈನ ಡಿವೈ ಪಾಟೀಲ ಕ್ರೀಡಾಂಗಣದಲ್ಲಿ ನಡೆದ ಗುಜರಾತ್ ಜೈಂಟ್ಸ್ ವಿರುದ್ಧದ ಪಂದ್ಯದಲ್ಲಿ 24 ವರ್ಷದ ಡೆಲ್ಲಿ ಕ್ಯಾಪಿಟಲ್ಸ್ ತಾರೆ ಈ ಅದ್ಭುತ ಸಾಧನೆ ಮಾಡಿ ಇತಿಹಾಸ ಬರೆದಿದ್ದಾರೆ. 33 ರನ್ ನೀಡಿ 5 ವಿಕೆಟ್ ಪಡೆದ ನಂದನಿ, ಘಕಐ ಹ್ಯಾಟ್ರಿಕ್ ವಿಕೆಟ್ ಪಡೆದ ಬೌಲರ್‌ಗಳ ಪಟ್ಟಿಯಲ್ಲಿ ಇಸ್ಸಿ ವಾಂಗ್ (ಮುಂಬೈ ಇಂಡಿಯನ್ಸ್), ಗ್ರೇಸ್ ಹ್ಯಾರಿಸ್ (ವಾರಿಯರ್ಸ್) ಮತ್ತು ದೀಪ್ತಿ ಶರ್ಮಾ (ವಾರಿಯರ್ಸ್) ತಮ್ಮ ಹೆಸರನ್ನು ಸೇರಿಸಿಕೊಂಡರು. ಇನಿಂಗ್ಸ್‌ನ 20ನೇ ಓವರ್‌ನಲ್ಲಿ, ನಂದನಿ ಅವರು ಕನಿಕಾ ಅಹುಜಾ, ರಾಜೇಶ್ವರಿ ಗಾಯಕ್ವಾಡ್ ಮತ್ತು ರೇಣುಕಾ ಸಿಂಗ್ ಅವರನ್ನು ಔಟ್ ಮಾಡಿದ್ದಾರೆ.

**ನಂದನಿ ಶರ್ಮಾ ಯಾರು?:** ನಂದನಿ ಚಂಡೀಗಢದ ಪ್ರತಿಭಾನ್ವಿತ ಕ್ರಿಕೆಟಿಗರಾಗಿದ್ದು, ವೇಗದ ಬೌಲಿಂಗ್ಗೆ ಹೆಸರುವಾಸಿಯಾಗಿದ್ದಾರೆ.



## ನಿಷ್ಕ್ರಿಯ ಆಡಳಿತ, ನಿರಾಸೆ ವಿದಾಯ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ವಿಶ್ವವಿದ್ಯಾಲಯದ ಪ್ರಥಮ ಕುಲಪತಿಯಾದ ಬಿಕೆ ರವಿ ಅವರು ನಿರಾಶಾಯದಾಯಕವಾಗಿ ವಿದಾಯ ಹೇಳಿದ್ದು ಕೊಪ್ಪಳದ ನಿಷ್ಕ್ರಿಯ ಆಡಳಿತ ವ್ಯವಸ್ಥೆಯ ದ್ಯೋತಕ ಎಂದು ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸದಸ್ಯ ಸಿವಿ ಚಂದ್ರಶೇಖರ್ ಕಿಡಿ ಕಾರಿದ್ದಾರೆ.



ಬಿ ಕೆ ರವಿ ಸಮರ್ಥ ಆಡಳಿತಗಾರರು. ಮುಖ್ಯಮಂತ್ರಿ ಅವರ ಜೊತೆಗೆ ಆಪ್ತವಾಗಿ ಕೆಲಸ ಮಾಡಿದವರು. ಎರಡೂವರೆ ವರ್ಷಗಳಲ್ಲಿ ಅವರಿಗೆ ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ಉಸಿರುಗಟ್ಟುವ ವಾತಾವರಣ ಇತ್ತು. ಈ ಭಾಗಕ್ಕೆ ಕೊಡುಗೆ ಕೊಡಬೇಕೆಂದು ಅಪಾರ ನಿರೀಕ್ಷೆ ಹೊಂದಿದ್ದರು. ಸ್ಥಳೀಯ ಆಡಳಿತದ ನಿಷ್ಕ್ರಿಯತೆಯಿಂದ ಭ್ರಮ ನಿರಸನಗೊಂಡಿದ್ದರು. ಸ್ವಂತ ಕಟ್ಟಡ, ಕನಿಷ್ಠ ಸಿಬ್ಬಂದಿ ವರ್ಗ, ಸರಿಯಾದ ಹಣಕಾಸು ವ್ಯವಸ್ಥೆ ಇಲ್ಲದೆ ರವಿಯವರು ಪರದಾಡಬೇಕಾಯಿತು. ಶಾಸಕರ ಮತ್ತು ಸಂಸದರ ಮರೆ ಹೋದರೂ ಕೂಡ ಪ್ರಯೋಜನವಾಗಲಿಲ್ಲ. ವಿಶ್ವವಿದ್ಯಾಲಯ ಪ್ರಗತಿಗಾಗಿ ಕಾರಣಕ್ಕೂ ಸರಕಾರದ ಮೇಲೆ ಜನಪ್ರತಿನಿಧಿಗಳು ಒತ್ತಡ ತಂದು ಕೆಲಸ ಮಾಡಬಹುದಿತ್ತು. ಆದರೆ ಅದನ್ನು ಮಾಡಲಿಲ್ಲ. ಪೂರಕ ವಾತಾವರಣವಿದ್ದರೆ ಸಮರ್ಥ ಆಡಳಿತಗಾರನನ್ನು ಕೊಪ್ಪಳ ವಿವಿ ಕಳೆದುಕೊಳ್ಳುವ ಪರಿಸ್ಥಿತಿ ಬರುತ್ತಿರಲಿಲ್ಲ ಎಂದು

ಆರೋಪಿಸಿದ್ದಾರೆ. ನೂತನವಾಗಿ ಅಧಿಕಾರವಹಿಸಿಕೊಂಡಿರುವ ಡಾ. ಎಸ್ ವಿ ಡಾಣಿ ರವಿ ಅವರಷ್ಟೇ ಸಮರ್ಥರು. ಜನಪ್ರತಿನಿಧಿಗಳು ಕೊಪ್ಪಳ ವಿವಿ ಜವಾಬ್ದಾರಿ ವಹಿಸಿಕೊಂಡ ಡಾಣಿಯವರಿಗೆ ಸಹಕಾರ ನೀಡಬೇಕು. ಸರಕಾರದ ಮೇಲೆ ಒತ್ತಡ ತಂದು ವಿವಿ ಅಭಿವೃದ್ಧಿಗಾಗಿ ಆಗಬೇಕಿರುವ ಕೆಲಸವನ್ನು ಮಾಡಬೇಕು ಎಂದು ತಿಳಿಸಿದ್ದಾರೆ.

## ಮೈಸೂರು ಪ್ರಾಂತ್ಯ ಅಭಿವೃದ್ಧಿ ಆದಂತೆ ಕಲ್ಯಾಣ ಕರ್ನಾಟಕ ಪ್ರಗತಿಯಾಗಬೇಕು: ಮಲ್ಲಿಕಾರ್ಜುನ ಖರ್ಗೆ

# ಶಿಕ್ಷಕರ ತರಬೇತಿ ಶಿಬಿರಕ್ಕೆ ಚಾಲನೆ

## ದೇಶಕಂಡ ಅಪ್ರತಿಮ ಸನ್ಯಾಸಿ ಸ್ವಾಮಿ ವಿವೇಕಾನಂದರು : ಕಾಮಣ್ಣ




ಭಾಲ್ಕಿ: ವೀರಸನ್ಯಾಸಿ ಸ್ವಾಮಿ ವಿವೇಕಾನಂದರು ದೇಶಕಂಡ ಅಪ್ರತಿಮ ಸ್ವಾಮಿಗಳಾಗಿದ್ದರು ಎಂದು ಅಖಿಲಭಾರತ ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಪ್ರೊ ಶಂಭುಲಿಂಗ ಕಾಮಣ್ಣ ಹೇಳಿದರು.

ಪಟ್ಟಣದ ಸದ್ಗುರು ವಿದ್ಯಾಲಯದಲ್ಲಿ ಸೋಮವಾರ ಸ್ವಾಮಿ ವಿವೇಕಾನಂದರ ಜಯಂತಿ ಮಹೋತ್ಸವ ನಿಮಿತ್ಯ ಆಯೋಜಿಸಿದ್ದ ಶಿಕ್ಷಕರ ತರಬೇತಿ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಭಾರತವನ್ನು ನೆನೆಪಿಸಿಕೊಳ್ಳುವ ದೇಶದ ಅಪ್ರತಿಮ ಸ್ವಾಮೀಜಿ ವಿವೇಕಾನಂದರಾಗಿದ್ದರು. ಅವರ ದೇಶಪ್ರೇಮ ಯುವಕರಿಗೆ ಮಾದರಿಯಾಗಿದೆ. ಯುವಕರ ಕಣ್ಮಣಿಯಾಗಿದ್ದ ಸ್ವಾಮೀಜಿಯವರು ನಮ್ಮ ದೇಶದ ಯುವಕರಿಗೆ ಆದರ್ಶಪ್ರಾಯರಾಗಿದ್ದರು. ಅವರ ಇತಿಹಾಸ ತಿಳಿಯುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು.

ಎಪಿವಿಪಿ ಮುಖಂಡ ಈಶ್ವರ ರುಮ್ಮಾ ಮಾತನಾಡಿ, ಸ್ವಾಮಿ ವಿವೇಕಾನಂದರು ನಮ್ಮ ದೇಶದ ಯುವಕರ ಐಕಾನ್ ಆಗಿದ್ದರು. ನಮ್ಮ ಶಿಕ್ಷಣ ಪದ್ಧತಿಯಲ್ಲಿ ಸ್ವಾಮೀಜಿಯವರ ಇತಿಹಾಸ ತಿಳಿಸುವ ಕಾರ್ಯವಾಗುತ್ತಿಲ್ಲ. ಸ್ವಾಮೀಜಿಯನ್ನು ತಿಳಿದವರು ಎಂದಿಗೂ ಕುಗ್ಗುವುದಿಲ್ಲ. ಇಂತಹ ಮೇರು ಇತಿಹಾಸ ಹೊಂದಿರುವ ಸ್ವಾಮಿ ವಿವೇಕಾನಂದರು ನಮ್ಮೆಲ್ಲರ ಆದರ್ಶಪ್ರಾಯರಾಗಿದ್ದಾರೆ ಎಂದು ಹೇಳಿದರು.

ಅಖಿಲಭಾರತ ವೀರಶೈವ ಮಹಾಸಭಾದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಹಲಮಂಡಗೆ ಮಾತನಾಡಿ, ಶಿಕ್ಷಣ ಪದ್ಧತಿಯಲ್ಲಿ ಸ್ವಾಮಿ ವಿವೇಕಾನಂದರ ಸಂಪೂರ್ಣ ಇತಿಹಾಸ ತಿಳಿಸುವಂತಾಗಬೇಕು. ಅಂದಾಗಮಾತ್ರ ನಮ್ಮ ಯುವಕರಲ್ಲಿ ಸ್ಫೂರ್ತಿ ಉಂಟಾಗುವುದು ಎಂದು ಹೇಳಿದರು.

ಕಸಾಪ ತಾಲೂಕು ಅಧ್ಯಕ್ಷ ನಾಗಭೂಷಣ ಮಾಮಡಿ ಮಾತನಾಡಿ, ಭಾವಿ ಶಿಕ್ಷಕರು ಮಕ್ಕಳಿಗೆ ನಮ್ಮ ದೇಶದ ಆದರ್ಶ ಪುರುಷರ ಇತಿಹಾಸ ತಿಳಿಸುವ ಕಾರ್ಯವಾಗಬೇಕು ಎಂದು ಹೇಳಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟಿ ಮಾತನಾಡಿ, ಸದ್ಗುರು ವಿದ್ಯಾಲಯದಲ್ಲಿ ಹೊಸ, ಹೊಸ ಯೋಜನೆಗಳನ್ನು ರೂಪಿಸುವ ಕಾರ್ಯವಾಗುತ್ತದೆ. ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಮಕ್ಕಳಿಗೆ ತರಬೇತಿ ನೀಡುತ್ತಿದ್ದರೆ, ಸದ್ಗುರು ವಿದ್ಯಾಲಯದಲ್ಲಿ ಮಕ್ಕಳನ್ನು ರೂಪಿಸುವ ಶಿಕ್ಷಕರಿಗೆ ತರಬೇತಿ ನೀಡುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದು ಹೇಳಿದರು.

ಕ್ಷೇತ್ರಸಂಪನ್ಮೂಲವ್ಯಕ್ತಿ ರಾಜಕುಮಾರ ಜೊಳದಪಕೆ, ಶಬನಮ್ ಎಜುಕೇಶನ್ ಟ್ರಸ್ಟ್ ಮುಖ್ಯಸ್ಥೆ ಮುಕ್ತಂಬಿ, ಗಣಪತಿ ಬೋಚರೆ ಮಾತನಾಡಿದರು. ಸದ್ಗುರು ವಿದ್ಯಾಲಯದ ಮುಖ್ಯಸ್ಥ ಅಕ್ಷಯ ಮುದ್ದಾ ಶಿಕ್ಷಕರ ತರಬೇತಿಯ ಕಾರ್ಯಚಟುವಟಿಕೆಗಳ ಬಗ್ಗೆ ತಿಳಿಸಿದರು. ಸದ್ಗುರು ವಿದ್ಯಾಲಯದ ಸಂಸ್ಥಾಪಕ ಅಧ್ಯಕ್ಷ ಸೋಮನಾಥ ಮುದ್ದಾ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ವೀರಣ್ಣ ಪರಸಣೆ, ರಾಜಕುಮಾರ ಮೇತ್ರೆ, ಸುಸ್ಮಿತಾ ಸಹಾನೆ, ಸುಸೇನ ಬಿರಾದಾರ ಮತ್ತಿತರರು ಇದ್ದರು.

# ಕೆಬಿಎನ್ ಪ್ರೀಮಿಯರ ಲೀಗ T20 ಪಂದ್ಯಾವಳಿ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ :

ಕಲ್ಯಾಣ ಕರ್ನಾಟಕ ಭಾಗದಲ್ಲಿನ ಕ್ರೀಡಾಪಟುಗಳಿಗೆ ಒಳ್ಳೆಯ ಅವಕಾಶ ನೀಡುವ ಸಲುವಾಗಿ ಕೆಬಿಎನ್ ಪ್ರಿಮಿಯರ್ ಲೀಗ್ ಆರಂಭಿಸಲಾಗಿದ್ದು ಪ್ರಸಕ್ತ ವರ್ಷದ ಪಂದ್ಯಾವಳಿ ಸಂಗತ್ರಾಸವಾಡಿಯ ಕೆಬಿಎನ್ ಟರ್ಫ್ ಮೈದಾನದಲ್ಲಿ ಹಗಲು ರಾತ್ರಿ ಪಂದ್ಯಗಳು ಶೀಘ್ರ ದಲ್ಲಿಯೇ ನಡೆಯಲಿದೆ.

ಈ ಪಂದ್ಯಾವಳಿಯ ಕ್ರಿಡಾಪಟುಗಳ ಆಯ್ಕೆ ಜನವರಿ 11ರಂದು ನಡೆದಿದ್ದು 6 ತಂಡಗಳು ತಮ್ಮ ಆಟಗಾರರನ್ನು ಆಯ್ಕೆ ಮಾಡಿಕೊಂಡಿದ್ದಾರೆ.

ಹರಾಜು ಪ್ರಕ್ರಿಯೆಯಲ್ಲಿ ಜನಾಬ್ ಡಾ ಸಯ್ಯದ ಮುಹಮ್ಮದ ಅಲಿ ಅಲ ಹುಸ್ನೇನಿ ಎಲ್ಲ ತಂಡದ ಮಾಲಿಕರಿಗೆ ಮತ್ತು ಪ್ರಾಯೋಜಕರಿಗೆ ಅವರ ಪ್ರೋತ್ಸಾಹ ಕ್ಕಾಗಿ ಧನ್ಯವಾದಗಳನ್ನು ತಿಳಿಸಿದರು. ಈ ಭಾಗದ ಪ್ರತಿಭೆ ಗಳನ್ನು ಬೆಳಕಿಗೆ ತರುವುದೇ ಈ ಪಂದ್ಯಾವಳಿಯ ಮುಖ್ಯ ಉದ್ದೇಶ ಎಂದರು. ಖಾಜಾ ಶಿಕ್ಷಣ ಸಂಸ್ಥೆ ಖಾ ಜಾ ಹೌಸ್ ಒಫ್ ಸ್ಪೋರ್ಟ್ಸ್ ಅನ್ನು ಸ್ಥಾಪಿಸಿ ಕ್ರೀಡಾಪಟುಗಳಿಗೆ ತರಬೇತಿ ನೀಡ ಲಾಗುತ್ತಿದೆ. ಇತ್ತೀಚೆಗೆ ತುಂಬಾ ವಿದ್ಯಾರ್ಥಿಗಳು ಹೌಸ್ ಒಫ್ ಸ್ಪೋರ್ಟ್ಸ್ ಸೇರಿ ತರಬೇತಿ ಪಡೆಯುತ್ತಿದ್ದಾರೆ. ನನ್ನ ತಂದೆ ದಿವಂಗತ ಡಾ ಸಯ್ಯದ ಶಾಹ ಖುಸ್ರೋ ಹುಸ್ನೇನಿಯವರ ಮಹದಾಸೆ. ನಾನು ಅವರ ಮಾರ್ಗದರ್ಶನ ದಡಿ ಅವರ ಕನಸನ್ನು ಪೂರ್ತಿ ಮಾಡುತ್ತಿದ್ದೇನೆ ಎಂದರು. ಎಲ್ಲ ಕ್ರೀಡಾ ಪಟುಗಳಿಗೆ ವಿಶ ಮಾಡಿದರು. ಆರ್ ಎಮ್ ಮಡಕಿ, ಐವಾನ ಈ ಶಾಹಿ, ರಾಯಲ್ಸ್, ಗಂಗಾವತಿ ಲಯನ್ಸ್, ಎಂ ಎ ಎಂ, ಸ್ಟೇಷನ್ ಈಗಲ್ಸ್, ಎಂ ಎಸ್ ಬಿ, ರೌಜಾ ಸ್ಟಾರ್ಸ್, ಎಮ್ ಜೆ ಮೊಮೀನ್ ಪುರ ಮಾಸ್ಟರ್ಸ್, ಮಾಮೂಪುರಿ ಮಾರ್ಕೆಟ್ ಸೂಪರ್ ಕಿಂಗ್ಸ್ ತಂಡಗಳು ಭಾಗವಹಿಸಲಿವೆ.




**ಲವಣಿತ್ ಸಿಸೋಡಿಯಾ 1,20,000 ರೂಪಾಯಿಗಳಿಗೆ, ಮಾಧವ ಬಜಾಜ 1,05,000 ಮತ್ತು ಶಿವರಾಜ್ 100000 ರೂಪಾಯಿಗಳಿಗೆ ಬಿಡ ಆದರು.**

### ಚಾಂಪಿಯನಶಿಪಗಾಗಿ

6 ತಂಡಗಳ ನಡುವೆ 30 ಲೀಗ್ ಪಂದ್ಯಗಳು, 3 ಪ್ಲೆ ಆಫ್ ಮತ್ತು 1 ಫೈನಲ್ ಒಟ್ಟು 34 ಪಂದ್ಯಗಳು ನಡೆಯಲಿವೆ. ವಿಜೇತರಿಗೆ ಬಹುಮಾನ ಮತ್ತು ವೈಯಕ್ತಿಕ ಅತ್ಯಾಕರ್ಷಕ ಬಹುಮಾನಗಳನ್ನು ನೀಡಲಾಗುವುದು. ಅಲ್ಲದೇ ಪ್ರೇಕ್ಷಕರ ಮನೋರಂಜನೆಗಾಗಿ ಪತ್ರಿಕೋದ್ಯಮ ವಿಭಾಗದಿಂದ ಪ್ರಕಟವಾಗುವ ಕೆಬಿಎನ್ ನ್ಯೂಸ್ ಲೇಟರ್ ನಲ್ಲಿ ಪಂದ್ಯಾವಳಿಯ ಪ್ರತಿ ಮ್ಯಾಚ್ ಬಗ್ಗೆ ಮಾಹಿತಿ ಹಾಗೂ ರಸಪ್ರಶ್ನೆಗಳನ್ನು ಆಯೋಜಿಸಲಾಗುತ್ತದೆ. www.youtube.com/kbnhouseofsports/live ಲಿಂಕ ಬಳಸಿ ಎಲ್ಲ ಮ್ಯಾಚಗಳ ನೇರ ಪ್ರಸಾರ ವೀಕ್ಷಿಸಬಹುದು.

**ಸೌಲಭ್ಯಗಳು:** ಪ್ರತಿ ಮ್ಯಾಚ್ ನ ನೇರ ಪ್ರಸಾರ, ಮೈದಾನದಲ್ಲಿ ಎಲ್ ಈ ಡಿ ಸ್ಕ್ರೀನ್, ರಿಪ್ಲೇಸ್, ಥರ್ಡ್ ಅಂಪೈರ್ ಸೌಲಭ್ಯ, ಮರುಪಂದ್ಯಗಳು, ರನ್ನಿಂಗ್ ಕಾಮೆಂಟರಿ, DSR ( Decision Review System) ಈ ಪಂದ್ಯಾವಳಿಯಲ್ಲಿ ಅಳವಡಿಸಲಾಗುವುದು.

**ತಂಡಗಳ ಮಾಲೀಕರು :**

1) ರೌಜಾ ಸ್ಟಾರ್ಸ್ ಮೆಗಾ ಸ್ಪೀಡ್ ಬ್ರಾಡ್‌ಬ್ಯಾಂಡ, ಸೈಯದ್ ಮುಹಮ್ಮದ್ ಅಲಿ ಅಲ್ ಹುಸೇನಿ ಸಾಹೇಬ್ ಮತ್ತು ಡಾ ಮುಸ್ತಫಾ ಅಲ್ ಹುಸೇನಿ

**2) ಐವೆನ್ ಇ ಶಾಹಿ ರಾಯಲ್ಸ್**

ಅಲ್ ಸಯ್ಯದ ಟೂರ್ಸ್ ಮತ್ತು ಆರ್ ಎಮ್ ಕನ್ಷಕ್ಷನ್ ಮತ್ತು ಪೆಟ್ರೋಲಿಯಂ

**3) ಸ್ಟೇಷನ್ ಈಗಲ್ಸ್:** ಅಲ್ ಬದರ್ ಗ್ರೂಪ್ ಮತ್ತು ಮರ್ಪವಲಿ ಡೆವಲಪರ್ಸ್

**4) ಮಾರ್ಕೆಟ ಸೂಪರ್ ಕಿಂಗ್ಸ್ :**

ಶ್ರೀ ಆಸಿಫ್ ಮತ್ತು ಡಾ ಖುಸ್ರೋ ಅನ್ಸಾರಿ

**5) ಗಂಗಾವತಿ ಲಯನ್ಸ್**

ಶ್ರೀ ಅಲಿ ಖಾನ್ ಮತ್ತು ಎಂಕೆ ಎಚ್ ಎಚ ಜೀಲಾನಿ, ಹುಸೇನಿ ಭಾಷಾ

6) ಮೋಮಿನ್‌ಪುರ ಮಾಸ್ಟರ್ಸ್

ಎಂಜೆಸಿಸಿ ಗುಂಪು, ಸೌರಭ್ ಭೀಮನ್ ಮತ್ತು ಹಾಶ ಫಾರ್ಮ್ ಪಾರ್ಕ್ ಗ್ರೂಪ್.



# ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿಕಾರಕ:ಬಸವರಾಜ



ಮಲ್ಲಮ್ಮನುಡಿ ಹುಣಸಗಿ: ತಂಬಾಕು ಸೇವನೆಯಿಂದ ಕ್ಯಾನ್ಸರ್‌ನಂತಹ ಮಾರಕ ರೋಗಗಳು ಬರುತ್ತವೆ. ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿಕರಕ ಎಂದು ಕಾಲೇಜಿನ ಸಿ ಡಿ ಸಿ ಅಧ್ಯಕ್ಷರಾದ ಬಸವರಾಜ ಸಜ್ಜನ ಹೇಳಿದರು. ಹುಣಸಗಿ ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜುನಲ್ಲಿ ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. 'ಸಮಾಜಕ್ಕೆ ಮಾರಕವಾಗಿರುವ ತಂಬಾಕು ಸೇವನೆ ಬಗೆಗಿನ ಅಪಾಯಗಳ ಬಗ್ಗೆ ಜನ ಸಾಮಾನ್ಯರಲ್ಲಿ ಜಾಗೃತ ಮೂಡಿಸಬೇಕಿದೆ. ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರು ಶ್ರಮಿಸಬೇಕು' ಹಲ್ಲಿನ ಕಾಯಿಲೆಗಳು ಮತ್ತು ದುರ್ಬಲ ಪ್ರತಿರಕ್ಷಣಾ ವ್ಯವಸ್ಥೆ ಸೇರಿದಂತೆ ದೇಹದ ಬಹುತೇಕ ಎಲ್ಲಾ ಅಂಗಗಳ ಮೇಲೆ ಗಂಭೀರ ದುಷ್ಪರಿಣಾಮಗಳನ್ನು ಬೀರುತ್ತದೆ, ಅಲ್ಲದೆ ಗರ್ಭಿಣಿಯರು ಮತ್ತು ಮಕ್ಕಳ ಆರೋಗ್ಯಕ್ಕೂ ಹಾನಿ ಮಾಡುತ್ತದೆ. ಇದು ಅಕಾಲಿಕ ಸಾವುಗಳಿಗೆ ಪ್ರಮುಖ ಕಾರಣವಾಗಿದೆ ಎಂದರು. ವೇದಿಕೆಯಲ್ಲಿ ಕಾಲೇಜಿನ

ಪ್ರಾಚಾರ್ಯರಾದ ಸಾಯಬಣ್ಣ ಭಜಂತ್ರಿ ಮತ್ತು ಕಾಲೇಜಿನ ಸದಸ್ಯರಾದ ಅಪ್ಪಣ್ಣ ಗೋಗಿ ಹಾಗೂ ದೇವಮ್ಮ ಬಡಿಗೇರ್ ಮತ್ತು ಸರಸ್ವತಿ ಭೀಮಶಂಕರ್ ಮತ್ತು

# ಕಾಶಪ್ಪ ಬಾಲಕಿಲೆ ಅವರ ಅಭಿನಂದನೆ ಕೃತಿ ಬರಲಿ.

• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ:

ಕಾಶಪ್ಪ ಬಾಲಕಿಲೆ ಅವರ ಬದುಕು ಸಾಮಾಜಿಕ ಸೇವೆ ಅನನ್ಯ. ಶತಮಾನದ ಅಂಚಿನಲ್ಲಿರುವ ಅವರ ಬಗೆಗೆ ಅಭಿನಂದನಾ ಕೃತಿ ಬರಬೇಕು ಎಂದು ಕಲಬುರ್ಗಿಯ ನಿವೃತ್ತ ಪ್ರಾಚಾರ್ಯರಾದ ಡಾ. ನೀಲಾಂಬಿಕಾ ಪೋಲಿಸ್ ಪಾಟೀಲ ಹೇಳಿದರು. ಇಲ್ಲಿನ ಬಿಕೆಡಿಬಿ ಯಾತ್ರಿನಿವಾಸದಲ್ಲಿ ಹಮ್ಮಿಕೊಂಡಿದ್ದ ಕಾಶಪ್ಪ ಬಾಲಕಿಲೆ ಅವರು ಬರೆದ 'ದಲಿತೋದ್ಧಾರಕ ಬಸವಣ್ಣನವರು' ಮತ್ತು 'ಕಲ್ಯಾಣದ ಕರ್ಮಭೂಮಿಯಲ್ಲಿ' ಕೃತಿಗಳ ಬಿಡುಗಡೆ ಸಮಾರಂಭದಲ್ಲಿ ಎರಡೂ ಕೃತಿಗಳು ಬಿಡುಗಡೆ ಮಾಡಿ ಮಾತನಾಡಿ ಕಾಶಪ್ಪನವರು ಹಠಮಾರಿ ಜಾಯಮಾನದವರು. ಬಡತನದ ಬೆಂಕಿಯಲ್ಲಿ ಅರಳಿದ ಹೂವು ಎಂದರು. ಪುಸ್ತಕದಲ್ಲಿ ಬರೆದ ಸಂಗತಿಗಳಿಗಿಂತ ಅವರ ಸಂಘರ್ಷದ ಬದುಕು ದೊಡ್ಡದು. ವಾರದ ಬಾಬಾಸಾಹೇಬರು ಬಸವಕಲ್ಯಾಣಕ್ಕೆ ತಂದು ಕೊಟ್ಟ ಅಸ್ಮಿತೆ, ಅಧ್ಯಾಪಕ ವೃತ್ತಿ, ಕಲ್ಯಾಣದಲ್ಲಿ ಬಸವನ ಜಗತ್ತು ತಮ್ಮ ಕಾಲದಲ್ಲಿ ಕಟ್ಟಿದ ಬಗೆ ಕಲ್ಯಾಣದ ಕರ್ಮಭೂಮಿಯಲ್ಲಿ ಕೃತಿಯಲ್ಲಿ ಬರೆದಿದ್ದಾರೆ ಎಂದರು. ಸಮಾನತೆ, ಪ್ರಜಾಪ್ರಭುತ್ವ, ಜಾತ್ಯತೀತ ಸಮಾಜಕ್ಕಾಗಿ ಶ್ರಮಿಸಿದ ಬಸವಣ್ಣವರ ಬಗೆಗೆ ದಲಿತೋದ್ಧಾರಕ ಬಸವಣ್ಣನವರು ಕೃತಿಯಲ್ಲಿದೆ.



ಅಧ್ಯಕ್ಷತೆ ವಹಿಸಿದ್ದ ಹಿರಿಯ ಸಾಹಿತಿ ಡಾ. ಸೋಮನಾಥ ಯಾಳವಾರ ಮಾತನಾಡಿ,

ತಮ್ಮ ಆತ್ಮಕತೆಯ ಸ್ವರೂಪದಲ್ಲಿರುವ ಕಲ್ಯಾಣದ ಕರ್ಮಭೂಮಿಯಲ್ಲಿ ಕೃತಿಯಲ್ಲಿ ತಮ್ಮ ಸೇವಾನುಭವದ ಜೊತೆಗೆ ನೋವಿನ ಅನುಭವವು ಅಡಗಿದೆ. ಶರಣ ಸಾಹಿತ್ಯ ಪರಿಷತ್ತು, ಬಸವ ತತ್ವದ ಲೋಕವನ್ನು ಕಲ್ಯಾಣದಲ್ಲಿ ಕಟ್ಟಿದ ಬಗೆ ದಾಖಲಿಸಿದ್ದಾರೆ.

ಜಗತ್ತಿನಲ್ಲಿ ದಲಿತರನ್ನು ಉದ್ಧಾರಿಸಿದ್ದು ಬಸವಣ್ಣ. ಹಾಗಾಗಿಯೇ ದಲಿತೋದ್ಧಾರಕ ಬಸವಣ್ಣನವರು ಕೃತಿಗೆ ಕಾಶಪ್ಪನವರು ಇಟ್ಟಿದ್ದಾರೆ ಎಂದರು.

ಸಾನಿಧ್ಯ ವಹಿಸಿದ ಹರಳಯ್ಯ ಪೀಠದ ಡಾ. ಗಂಗಾಂಬಿಕಾ ಅಕ್ಕನವರು ಮಾತನಾಡಿ, ಅಪ್ಪಟ ಬಸವ ಅನುಯಾಯಿ ಕಾಶಪ್ಪ ಬಾಲಕಿಲೆ ಅವರು ಶತಮಾನದ ಹೊಸ್ತಿಲಲ್ಲಿ ಇದ್ದಾರೆ. ಅವರನ್ನು ಕುರಿತು ಅಭಿನಂದನಾ ಕೃತಿ ಬರಬೇಕು ಎಂದರು.

ಕಲಬುರ್ಗಿಯ ತಹಸೀಲ್ದಾರ್ ಸಾವಿತ್ರಿ ಶರಣು ಸಲಗರ, ಬೀದರ ವಿಶ್ವವಿದ್ಯಾಲಯದ ನಿವೃತ್ತ ಡೀನ್ ಪ್ರೊ. ಜಗನ್ನಾಥ ಹೆಬ್ಬಾಳೆ, ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಶಂಭುಲಿಂಗ ಕಾಮಣ್ಣ, ಶಿವರಾಜ ಬಾಲಕಿಲೆ , ನಾಗೇಂದ್ರ ರೊಳೆ, ಸತೀಶ ಸಾವಳೆ, ಎಸ್.ಜಿ. ಹುಡೇದ, ಭೀಮಾಶಂಕರ ಬಿರಾದಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಬಸವರಾಜ ಬಾಲಕಿಲೆ ಸ್ವಾಗತಿಸಿದರು. ನಿವೃತ್ತ ಪ್ರಾಂಶುಪಾಲ ಎಸ್. ಜಿ. ಕರಣೆ ಪ್ರಾಸ್ತಾವಿಕ ಮಾತನಾಡಿದರು. ಜ್ಯೋತಿ ತುಗಾವೆ ನಿರೂಪಿಸಿದರು. ಸೌಮ್ಯಾ ಬಾಲಕಿಲೆ ವಂದಿಸಿದರು.

# ಬಬಲಾದ ಶ್ರೀಗಳು ಸಮಾಜದ ದೊಡ್ಡ ಆಸ್ತಿ - ಹಾರಕೂಡ ಶ್ರೀ.

ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ಮೌನ ತಪಸ್ವಿ ಕೃಷಿಋಷಿ ಪೂಜ್ಯ ಡಾ. ಗುರುಪಾದಲಿಂಗ ಮಹಾಸ್ವಾಮಿಗಳು ಸಮಾಜದ ದೊಡ್ಡ ಆಸ್ತಿಯಾಗಿದ್ದಾರೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಆಯೋಜಿಸಿದ ಧರ್ಮಸಭೆಯ ಪಾವನ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ವಿಕೃತಿ ಅಳಿಯಲಿ, ಪ್ರಕೃತಿ ಉಳಿಯಲಿ, ಸಂಸ್ಕೃತಿ ಬೆಳೆಯಲಿ ಎಂಬ ಭಾವದಲ್ಲಿ ಸಮಾಜಮುಖಿಯಾಗಿ ಧರ್ಮ ಮುಖಿಯಾಗಿ ಉತ್ತಮ ಕಾರ್ಯ ಮಾಡುತ್ತಿರುವ ಬಬಲಾದ ಶ್ರೀಗಳಿಗೆ ಕಲಬುರ್ಗಿಯ ಶ್ರೀ ಶರಣಬಸವೇಶ್ವರ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪದವಿ ಪ್ರದಾನಿಸಿದ್ದು ನಮಗೆ ಖುಷಿ ನೀಡಿದೆ. ಡಾ. ಗುರುಪಾದಲಿಂಗ ಮಹಾಸ್ವಾಮಿಗಳು ಮೌನವಾಗಿದ್ದು, ಅವರ ಕೆಲಸ ಕಾರ್ಯಗಳೇ ಸಮಾಜದಲ್ಲಿ ಧರ್ಮ ದೀಪಗಳಾಗಿ ಬೆಳಗುತ್ತಿರುವುದು ಅವರ ತಪೋಸಾಧನೆಯ ಪ್ರತೀಕವಾಗಿದೆ.



ಹಾರಕೂಡ ಹಾಗೂ ಬಬಲಾದ ಮಠಗಳ ಆಧ್ಯಾತ್ಮ ನಂಟು ಬಹಳ ಗಟ್ಟಿಯಾಗಿದ್ದು ಪೂಜ್ಯರಿಗೆ ಹಾರಕೂಡಧೀಶ ಇನ್ನೂ ಹೆಚ್ಚಿನ ಶಕ್ತಿ ಕರುಣಿಸಲಿ ಮತ್ತು ಸರ್ವರಿಗೂ ಶುಭವಾಗಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ ಮೇಘರಾಜ ನಾಗರಾಳೆ, ರಾಜಕುಮಾರ ಬಿರಾದಾರ, ಹಾವಗೆಪ್ಪ ಪಾಟೀಲ, ದಗಡು ಬಿರಾದಾರ, ನಂದಕುಮಾರ ಭುಜರಕೆ, ನೀಲಕಂಠ ಪಾಟೀಲ, ಧರ್ಮರಾಯ ಅಟ್ಟೂರೆ ಪಾಲ್ಗೊಂಡಿದ್ದರು. ಇದೇ ಸಂದರ್ಭದಲ್ಲಿ ಕಲಬುರ್ಗಿಯ ಶ್ರೀ ಶರಣಬಸವೇಶ್ವರ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪದವಿ ಪಡೆದ ಬಬಲಾದಿನ ಶ್ರೀ ಗುರುಪಾದಲಿಂಗ ಮಹಾಸ್ವಾಮಿಗಳಿಗೆ ಹಾರಕೂಡ ಶ್ರೀಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಗೌರವಿಸಿದರು. ಕಾರ್ತಿಕ ಸ್ವಾಮಿ ಯಲ್ಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು. ಸಿದ್ರಾಮ ಪಾಟೀಲ ವಚನ ಗಾಯನ ನಡೆಸಿಕೊಟ್ಟರು. ನವಲಿಂಗ ಪಾಟೀಲ ನಿರೂಪಿಸಿದರು.

# ಬಿಜೆಪಿಯಿಂದ ಬೃಹತ್ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್ :

ಭಾರತೀಯ ಜನತಾ ಪಾರ್ಟಿ ಬೀದರ ದಕ್ಷಿಣ ಮಂಡಲ ವತಿಯಿಂದ ಇತ್ತೀಚಿಗೆ ನಡೆದ ಬೀದರ ಜಿಲ್ಲಾ ಪ್ರಗತಿ ಪರಿಶೀಲನೆ ಸಭೆಯಲ್ಲಿ ಬೀದರ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಕಾಂಗ್ರೆಸ್ ಎಂಎಲ್ ಸಿ ಅವರಿಂದ ಬಿಜೆಪಿ ಶಾಸಕರ ಮೇಲಿನ ನಡೆದ ಹಲ್ಲೆ ಖಂಡಿಸಿ ಜಿಲ್ಲಾಡಳಿತ ಹಾಗೂ ಉಸ್ತುವಾರಿ ಸಚಿವರ ಹಾಗೂ ಹುಬ್ಬಳ್ಳಿಯಲ್ಲಿ ದಲಿತ ಮಹಿಳೆಯನ್ನು ವಿವಸ್ತ್ರಗೊಳಿಸಿ ದೌರ್ಜನ್ಯ ಎಸಗಿರುವುದು ಖಂಡಿಸಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿದರನಲ್ಲಿ ಬೃಹತ್ ಪ್ರತಿಭಟನೆ ಸೋಮವಾರ ನಡೆಯಿತು,

ಪ್ರತಿಭಟನೆಯು ನಗರದ ಗಣೇಶ ಮೈದಾನದಿಂದ ರೋಟರಿ ಕ್ಲಬ್ ವೃತ್ತ ಅಂಬೇಡ್ಕರ ವೃತ್ತ ಮೂಲಕ ಶಿವಾಜಿ ವೃತ್ತದ ವರೆಗೆ ನಡೆಯಿತು,

ಹುಮನಾಬಾದ ಶಾಸಕ ಸಿದ್ದು ಪಾಟೀಲ್ ಮೇಲೆ ಆದ ಹಲ್ಲೆಯನ್ನು ಖಂಡಿಸುತ್ತೇವೆ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಹಾಡ ಹಗಲೆ ಕಳ್ಳತನವಾಗುತ್ತಿದೆ, ಎಟಿಎಂ ದರೋಡೆ ಕೋರರನ್ನು ಇನ್ನೂ ಪತ್ತೆ ಹಚ್ಚುವಲ್ಲಿ ಪೊಲೀಸರು ವಿಫಲವಾಗಿದೆ ಲೇಔಟ್ ನಲ್ಲಿ ಅವ್ಯವಹಾರ ವಾಗಿದ್ದು ಮೇಲ್ನೋಟಕ್ಕೆ ಸಾಬೀತಾಗಿದೆ, ಕಳೆದ ಕೆಡಿಪಿ ಸಭೆಯಲಿ ಧ್ವನಿ ಎತ್ತಿದೆ ಇದರಬಗ್ಗೆ ತನಿಖೆ ನಡೆಸಿ ಅನುಪಾಲನಾ ವರದಿ ಕೇಳಿದಾಗ ನಮ್ಮ ಶಾಸಕರ ಮೇಲೆ ಹಲ್ಲೆಗೆ ವಿಧಾನ ಪರಿಷತ್ ಸದಸ್ಯರಾದ ಭೀಮರಾವ್ ಪಾಟೀಲ ಮುಂದಾಗಿದ್ದಾರೆ,

**ರಘುನಾಥರಾವ್ ಮಲ್ಕಾಪುರೆ,**
**ಮಾಜಿ ವಿಧಾನ ಪರಿಷತ್ ಸಭಾಪತಿಗಳು**

**ಸ್ವಾಭಿಮಾನಕ್ಕೆ ಧಕ್ಕೆ ತಂದ ಪ್ರಯುಕ್ತ ಈ ಹೋರಾಟ ಮಾಡುವುದು ಅನಿವಾರ್ಯವಾಗಿದೆ ಸಾವಿರಾರು ಗ್ರಾಮ ಪಂಚಾಯತ್ ಸದಸ್ಯರು ಆತನನ್ನು ಮತ ಕೊಟ್ಟು ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡಿದ್ದಾರೆ, ಕೆಡಿಪಿ ಸಭೆಯಲಿ ನಡೆದ ಘಟನೆ ಭೀಮರಾವ್ ಪಾಟೀಲ ಅವರಿಗೆ ಮತ ಕೊಟ್ಟಿದಾರೋ ಅವರು ಇಂದು ಕಣ್ಣೀರು ಹಾಕುತ್ತಿದ್ದಾರೆ, ಒಂದು ವೇಳೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಪೂಜಾರಿ ಅವರ ಸಮಯ ಪ್ರಜ್ಞೆಯಿಂದ ಸಿದ್ದು ಪಾಟೀಲ್ ಮೇಲೆ ಹಲ್ಲೆ ಮಾಡಲು ಎಂಎಲ್‌ಸಿ ಭೀಮರಾವ್ ಪಾಟೀಲ ಮುಂದಾಗಿದ್ದಾರೆ, ಏನಾರ ಜಗಳ ವಾಡುವ ಉದೇಶ ಇದ್ರೆ ಹುಮನಾಬಾದ ಥೇರ ಮೈದಾನದಲ್ಲಿ ಸಿದ್ದು ಪಾಟೀಲ್ ಜೋತೆ ಆಡಿ**

# :CITATION:

**IN THE COURT OF THE PRL, CIVIL JUDGE AND JMFC., AT HUMNABAD.**
**CRL. MISC. No.3412/2025.**

**Petitioners :**

**1.Prabhakar Dhakulagikar S/o late.** Manikappa, Age: 55yrs. Occu: Agriculture. R/o H. No.5/13 Dhumansur, Tq. Humnabad.

**2.Shambai W/o Nivarthi,** Age: 57yrs. Occu: House hold. R/o Dhumansur, Now at Kauroor Village. Tq. Bhalki.

**Respondent:**

The Registrar of Birth and Death through The Tahasildar Humnabad. Dist. Bidar.

**Sub: Petition U/Sec. 13(3) of Birth and Death Registration Act-1969**

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Mother of petitioner No.1 and 2 by namely LATE.KALLAMMAW/OLATE.MANIKAPPA, she was died on 15.07.2021 at Village Dhumansur, Tq.Humnabad Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 22.01.2026 at 11.00 AM in person or any authorized pleader to answer such claim otherwise the matter will be heard and determined in your absence as per law.

**Given under my hand and seal of he court, this the 30-12-2025.**
**//By order of the court//**
**Chief Ministerial Officer,**
**Prl. Civil Judge & JMFC Court,**
**Humnabad.**

# ಶರಣರು ಮೆಟ್ಟಿದ ಭೂಮಿ ಪಾವನವಾಗುತ್ತದೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:

ಗುರುಗಳು, ಶರಣರು ನೆಲೆಸುವ ಭೂಮಿ ಪಾವನವಾಗುತ್ತದೆ. ಈ ನಿಟ್ಟಿನಲ್ಲಿ ಹಾವಗಿಲಿಂಗೇಶ್ವರ ಶಿವಾಚಾರ್ಯರು ಹಾಳು ಬಿದ್ದ ಮಠವನ್ನು ತಮ್ಮ ನಿಷ್ಕಲ್ಮಶ, ಶ್ರೇಷ್ಠ ಕಾರ್ಯಗಳ ಮೂಲಕ ಪಾವನ ಭೂಮಿಯನ್ನಾಗಿಸಿದ್ದಾರೆ ಎಂದು

ಕೋಡಿ ಮಠದ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಹೇಳಿದರು. ತಾಲ್ಲೂಕಿನ ಹಲಬರ್ಗಾ ಗ್ರಾಮದಲ್ಲಿ ಭಾನುವಾರ ನಡೆದ ಸಿದ್ಧರಾಮೇಶ್ವರ ನಮ್ಮೂರ ಜಾತ್ರಾ ಮಹೋತ್ಸವ ಸಮಾರೋಪ ಸಮಾರಂಭ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ನಾವು ಪ್ರೀತಿ, ಸಂಸ್ಕಾರ ಮತ್ತು ಸಮಾಧಾನದ ನಡೆಯ ಮೂಲಕ ಜನರ ಮನಸ್ಸನ್ನು ಗೆಲ್ಲಬೇಕು. ಭಕ್ತರು ಮಠಗಳಿಗೆ ಪಾಲಕರಿದ್ದಂತೆ, ಗುರುಗಳು ಅವರ ಮಕ್ಕಳಿದ್ದಂತೆ. ಹಾಗಾಗಿ, ಪಾಲಕರು ಮಕ್ಕಳನ್ನು ತುಂಬಾ ಕಾಳಜಿ, ಕಳಕಳಿಯಿಂದ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಹಂಚಿ ಹೋಗಿದ್ದ ವೀರಶೈವ ಸಮಾಜವನ್ನು ಒಗ್ಗೂಡಿಸಿ, ಗುರುತಿಸಿ, ನೆಲೆ ಕೊಟ್ಟವರು ಭೀಮಣ್ಣ ಖಂಡ್ರೆ ಎಂದರು. ಈಗ ಸಮಾಜಕ್ಕೆ ಮತ್ತೆ ಅಳಿಗಾಲ ಬಂದಿದೆ. ಸಮಾಜ ಹರಿದು ಹಂಚಿ ಹೋಗುತ್ತಿದೆ. ಮತ್ತೆ ಖಂಡ್ರೆ ಅವರಂತಹ ವ್ಯಕ್ತಿ ಬರಬೇಕು. ಈಶ್ವರ ಖಂಡ್ರೆ ಆ ನಿಟ್ಟಿನಲ್ಲಿ ಕಾರ್ಯ ಮಾಡುತ್ತಾರೆ ಎಂದು ಹೇಳಿದರು.

ಭಕ್ತಿ ಶಕ್ತಿಯಾಗುತ್ತದೆ. ಗುರುಗಳ ಮೇಲೆ ಯಾವಾಗಲೂ ಗುರುನಿಷ್ಠೆ, ಭಕ್ತಿಯನ್ನು ಇಟ್ಟುಕೊಂಡು ಮೋಕ್ಷ ಕಂಡುಕೊಳ್ಳಬೇಕು ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮಾತನಾಡಿ, ಯುವಶಕ್ತಿ ದೇಶದ ಅಮೂಲ್ಯ ಸಂಪತ್ತು. ಈ ಸಂಪತ್ತು ಯಾವುದೇ ಕಾರಣಕ್ಕೂ ದುರ್ಬಲವಾಗಬಾರದು. ಯುವಕರು ಮೊಬೈಲ್ ನಲ್ಲಿ ಹೆಚ್ಚು ಕಾಲವನ್ನು ಕಳೆಯದೆ. ಉತ್ತಮ ಸಂಸ್ಕಾರ, ಗುಣಗಳನ್ನು ಮೈಗೂಡಿಸಿಕೊಂಡು ಸಮಾಜದ, ದೇಶದ ಶ್ರೇಷ್ಠ ಪ್ರಜೆಗಳಾಗಿ ಬಾಳಬೇಕು ಎಂದು ಹೇಳಿದರು.

ಜಾತ್ರೆಗಳು ಮನಸ್ಸುಗಳನ್ನು ಒಂದುಗೂಡಿಸುತ್ತವೆ. ಧಾರ್ಮಿಕ ಕಾರ್ಯಗಳು ಮನುಷ್ಯನಲ್ಲಿ ಶ್ರೇಷ್ಠ ಚಿಂತನೆ, ಉತ್ತಮ ನಡೆಯನ್ನ ಮೈಗೂಡಿಸಿಕೊಳ್ಳಲು ನೆರವಾಗುತ್ತವೆ ಎಂದು ತಿಳಿಸಿದರು. ರಾಚೋಟೇಶ್ವರ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರು,

ಹುಲಸೂರಿನ ಶಿವಾನಂದ ಸ್ವಾಮೀಜಿ, ಹವಾ ಮಲ್ಲಿನಾಥ ಮಹಾರಾಜರು ಮಾತನಾಡಿದರು. ಪ್ರಮುಖರಾದ ಮಡಿವಾಳಪ್ಪ ಮಂಗಲಗಿ, ಬಸವರಾಜ ವಂಕೆ, ದತ್ತಾತ್ರಿ ಮೂಲಗೆ, ರಾಜಕುಮಾರ ಚೆಲುವಾ, ರಮೇಶ ಪ್ರಭಾ, ಧನರಾಜ ಪಾಟೀಲ, ರಮೇಶ ಪಾಟೀಲ ಕರಡ್ಯಾಳ, ರೇವಣಪ್ಪ ಮೂಲಗೆ ಸೇರಿದಂತೆ ಇದ್ದರೂ

# ಪ್ರತಿಯೊಬ್ಬರೂ ಗ್ರಾಹಕರ ಹಕ್ಕುಗಳ ಮಹತ್ವ ತಿಳಿದುಕೊಳ್ಳಬೇಕು: ಅಪರ ಜಿಲ್ಲಾಧಿಕಾರಿ.

• ಮಲ್ಲಮ್ಮ ನುಡಿ ವಾರ್ತೆ ಕಾರವಾರ:

ಉತ್ಪಾದಕರು ಕೇವಲ ಲಾಭ ಗಳಿಸುವ ಉದ್ದೇಶದಿಂದ ವಸ್ತುಗಳನ್ನು ಉತ್ಪಾದಿಸಿ ಮಾರಾಟ ಮಾಡುವಂತ ಪರಿಸ್ಥಿತಿ ನಿರ್ಮಾಣಗೊಂಡಿದ್ದು, ಗ್ರಾಹಕರು ಸರಕು, ಸೇವೆಗಳನ್ನು ಪಡೆಯುವಾಗ ಹಿಂದಿಗಿಂತಲೂ ಹೆಚ್ಚು ಜಾಗೃತರಾಗಬೇಕು. ಗ್ರಾಹಕರ ಹಕ್ಕುಗಳ ಮಹತ್ವ, ಕರ್ತವ್ಯವನ್ನು ತಿಳಿದುಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ ಹೇಳಿದರು. ಅವರು ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಅಯೋಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಕಾರವಾರ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆಹಾರ ಸುರಕ್ಷತೆ ಇಲಾಖೆ, ಕರ್ನಾಟಕ ಆಹಾರ ನಿಗಮ, ಹಾಗೂ ಶಿವಾಜಿ ಶಿಕ್ಷಣ ಮಹಾವಿದ್ಯಾಲಯ ಕಾರವಾರ ಇವರ ಸಂಯುಕ್ತ ಆಶ್ರಯದಲ್ಲಿ, ಕಾರವಾರದ ಶಿವಾಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಲಾದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ಆಧುನಿಕ ಕಾಲದಲ್ಲಿ ಯುವ ಜನತೆ ಮನೆಯಲ್ಲಿ ಕುಳಿತು ಆನ್‌ಲೈನ್ ಸೇವೆ ಪಡೆಯುವುದು ಹೆಚ್ಚಾಗಿದ್ದು, ಇದರಲ್ಲೇ ಹೆಚ್ಚಿನ ಮೋಸಕ್ಕೆ ಒಳಗಾಗುತ್ತಿದ್ದಾರೆ. ಯಾವುದೇ ವಸ್ತು ಖರೀಸುವಾಗ ಅದರ ಗುಣಮಟ್ಟ, ಬೆಲೆ ಕುರಿತು ಜಾಗೃತಿ ವಹಿಸಿ ಪರಿಶೀಲಿಸಿದ ನಂತರವೇ ಖರೀದಿಸಬೇಕು. ಅನಾವಶ್ಯಕವಾಗಿ ಹಣವನ್ನು ಖರ್ಚು ಮಾಡಬಾರದು. ಯುವ ಜನತೆಗೆ ಸ್ವಾಮಿ ವಿವೇಕಾನಂದರ , ಏಳಿ, ಎದ್ದೇಳಿ, ಗುರಿ ಮುಟ್ಟುವ ತನಕ ನಿಲ್ಲದ್ದಿರಿ ಎಂಬ ಕರೆಯನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಯಶಸ್ಸು ದೊರೆಯಲಿದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ.ಎಂ ಮಾತನಾಡಿ, ಇಡೀ ವಿಶ್ವವೇ ಒಂದು ಮಾರುಕಟ್ಟೆ, ಮನುಷ್ಯ ಒಬ್ಬ ಗ್ರಾಹಕ. ಮನುಷ್ಯನಿಗೆ ಉಚಿತವಾಗಿ ಸಿಗುವ ನೀರು, ಗಾಳಿ, ಬೆಳಕು, ಪ್ರಕೃತಿಯಲ್ಲಿ ಯಾವುದೇ ಮೋಸವಿಲ್ಲ ಆದರೆ ಇದನ್ನು ಕಲುಷಿತಗೊಳಿಸಲಾಗುತ್ತಿದೆ. ಹಣ ಕೊಟ್ಟು ಖರೀದಿಸುವ ವಸ್ತುಗಳಲ್ಲಿ ಮೋಸ ಹೋಗಲಾಗುತ್ತದೆ. ಗ್ರಾಹಕರು ತಮ್ಮ ಜವಾಬ್ದಾರಿಯನ್ನು ಅರಿತು–ಕೊಂಡಾಗ ಮಾತ್ರ ಅವರ ಹಕ್ಕುಗಳನ್ನು ರಕ್ಷಣೆ ಮಾಡಬಹುದು.

# ಜಿಲ್ಲೆಯ 20 ಗ್ರಾಮದಲ್ಲಿ "ಸ್ಪಂದನ" ಗ್ರಾಮ ಹಿರಿಯರ ಕೇಂದ್ರ: ಲಾಂಛನ ಬಿಡುಗಡೆ ಮಾಡಿದ ಸಚಿವ ಪ್ರಿಯಾಂಕ್ ಖರ್ಗೆ




**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಗ್ರಾಮೀಣ ಭಾಗದಲ್ಲಿ ಹಿರಿಯ ನಾಗರಿಕರಲ್ಲಿ ಸಾಮಾನ್ಯವಾಗಿ ಕಂಡುಬರುವ ನಿರ್ಲಕ್ಷ್ಯತೆ ಮತ್ತು ಪ್ರತ್ಯೇಕತೆಯ ಭಾವನೆ ಉಂಟಾಗದಂತೆ ಅವರನ್ನು ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಅವರ ದೇಹ ಮತ್ತು ಮನಸ್ಸನ್ನು ಸಕ್ರಿಯವಾಗಿಡುವ ಉದ್ದೇಶದಿಂದ ಕಲಬುರಗಿಯಲ್ಲಿ ಪ್ರಾಯೋಗಿಕವಾಗಿ ತೆರೆಯಲಾಗುತ್ತಿರುವ "ಸ್ಪಂದನ" ಗ್ರಾಮ ಹಿರಿಯರ ಕೇಂದ್ರದ ಲಾಂಛನವನ್ನು ರಾಜ್ಯದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಬಿಡಗಡೆ ಮಾಡಿದರು. ರವಿವಾರ ಕಲಬುರಗಿ ನಗರದ ವಾಜಪೇಯಿ ಬಡಾಣೆಯ ಪ್ರಬುದ್ಧ ಅಕಾಡೆಮಿ ಉದ್ಘಾಟನೆ ಕಾರ್ಯಕ್ರಮದಲ್ಲಿ "ಸ್ಪಂದನ" ಕೇಂದ್ರದ ಪೋಸ್ಟರ್ ಅನಾವರಣ ಮಾಡಿದರು. ವಲಸೆ ಮತ್ತು ಹೆಚ್ಚುತ್ತಿರುವ ವಿಭಕ್ತ ಕುಟುಂಬಗಳ ವ್ಯವಸ್ಥೆ ಹಾಗೂ ಡಿಜಿಟಲ್ ಕ್ರಾಂತಿಯಿಂದಾಗಿ ವಿಶೇಷವಾಗಿ ಗ್ರಾಮೀಣ ಪ್ರದೇಶಗಳ ಹಿರಿಯ ನಾಗರಿಕರಲ್ಲಿ ನಿರ್ಲಕ್ಷ್ಯ ಮತ್ತು ಪ್ರತ್ಯೇಕತೆಯ ಭಾವನೆ ಉಂಟಾಗುತ್ತದೆ. ಇದರಿಂದ ಹಿರಿಯ ನಾಗರಿಕರ ಆರೋಗ್ಯ ಮತ್ತು ಯೋಗಕ್ಷೇಮ ಕ್ಷೀಣಿಸುವ ಸಾಧ್ಯತೆ ಇದ್ದು, ಇದನ್ನು ತಪ್ಪಿಸಲೆಂದೇ ಈ ಕೇಂದ್ರಗಳು ತೆರೆದು ಅಲ್ಲಿ ಹಿರಿಯ ನಾಗರಿಕರನ್ನು ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಉದ್ದೇಶ ಹೊಂದಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಕಲಿಕಾ ಸಂಸ್ಥೆಯು ಟಾಟಾ ಟ್ರಸ್ಟ್ ಸಹಯೋಗದೊಂದಿಗೆ ಮುಂದಿನ ಎರಡು ವರ್ಷದಲ್ಲಿ ರಾಜ್ಯದಾದ್ಯಂತ 300 ಅರಿವು ಕೇಂದ್ರದಲ್ಲಿ ಈ ಸ್ಪಂದನಾ ಕೇಂದ್ರಗಳು ತೆರೆಯುತ್ತಿದ್ದು, ಅದರಂತೆ ಕಲಬುರಗಿಯ ಜಿಲ್ಲೆಯಲ್ಲಿ ಪ್ರಸಕ್ತ 2025–26ನೇ ಸಾಲಿನಲ್ಲಿ 20 ಸ್ಪಂದನ ಕೇಂದ್ರಗಳು ಹಿರಿಯರ ಯೋಗಕ್ಷೇಮ ವಿಚಾರಿಸಲು ಆರಂಭವಾಗಲಿವೆ.

ಈ ಕೇಂದ್ರಗಳಲ್ಲಿ ದಿನದ ಮೊದಲಾರ್ಧದಲ್ಲಿ ಮೀಸಲಾದ ಅವಧಿಯಲ್ಲಿ ಹಿರಿಯ ನಾಗರಿಕರಿಗೆ ವಿವಿಧ ಚಟುವಟಿಕೆಗಳನ್ನು ನಡೆಸಲಾಗುತ್ತದೆ. ಜೊತೆಗೆ ಅವರಿಗೆ ವ್ಯಾಯಾಮ, ಆರೋಗ್ಯ ತಪಾಸಣೆ, ಯೋಗಾಸನ ಮಾಡಿಸುವುದರ ಜೊತೆಗೆ ವಿವಿಧ ಸೌಲಭ್ಯಗಳು ಮತ್ತು ಅಗತ್ಯ ಸೇವೆಗಳ ಕುರಿತು ಮಾಹಿತಿ ನೀಡಲಾಗುತ್ತದೆ.

ಎಲೆಲ್ಲಿ ಸ್ಪಂದನ ಕೇಂದ್ರಗಳು?: ಚಿತ್ತಾಪುರ ತಾಲೂಕಿನ ನಾಲವಾರ, ಕೊಲ್ಲೂರ, ಹಲಕಟ್ಟಾ, ಲಾಡ್ಲಾಪುರ, ಸನ್ನತ್ತಿ, ಭಾಗೋಡಿ, ಕಮರವಾಡಿ, ಸಾತನೂರ, ಆಲೂರ(ಬಿ) ಹಾಗೂ ಕಡಬೂರ,

ಸೇಡಂ ತಾಲೂಕಿನ ರಿಬ್ಬನಪಲ್ಲಿ, ಕಾನಗಡ್ಡಾ, ಕೋಡ್ಲಾ, ಇಟ್ಕಲ್, ಮುಧೋಳ, ಲಿಂಗಂಪಲ್ಲಿ, ಕುರಕುಂಟಾ, ನೀಲಹಳ್ಳಿ, ಮಳಖೇಡ ಹಾಗೂ ಬಟಗೇರಾ(ಕೆ) ಗ್ರಾಮದ ಅರಿವು ಕೇಂದ್ರದಲ್ಲಿ ಸ್ಪಂದನ ಕೇಂದ್ರಗಳು ತೆರೆಯಲಿವೆ.

# ಪ್ರಬುದ್ಧ ಅಕಾಡೆಮಿಗೆ ನಗರ ಸಾರಿಗೆ ವ್ಯವಸ್ಥೆ

## ನೂತನ ಬಸ್ ಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಚಾಲನೆ

- **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**



ವಿದ್ಯಾರ್ಥಿಗಳು ನಗರದಿಂದ ವಾಜಪೇಯಿ ಬಡಾವಣೆಯ ಪ್ರಬುದ್ಧ ಅಕಾಡೆಮಿಗೆ ಹೋಗಿ ಬರಲು ಅನಕೂಲವಾಗುವಂತೆ ಕೆ.ಕೆ.ಆರ್.ಟಿ.ಸಿ ಸಂಸ್ಥೆಯಯಿಂದ ಕಲ್ಪಿಸಿರುವ ನೂತನ ನಗರ ಸಾರಿಗೆ ಬಸ್ ಕಾರ್ಯಚರಣೆಗೆ ರವಿವಾರ ಪ್ರಬುದ್ಧ ಅಕಾಡೆಮಿ ಉದ್ಘಾಟನಾ ಕಾರ್ಯಕ್ರಮದಲ್ಲಿ ರಾಜ್ಯದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಚಾಲನೆ ನೀಡಿದರು.

ಕೆ.ಕೆ.ಆರ್.ಟಿ.ಸಿ.ಕಲಬುರಗಿ ವಿಭಾಗ–1 ರಿಂದ ಕಾರ್ಯಚರಣೆಗೊಳ್ಳುವ ಈ ಬಸ್ ಪ್ರತಿ ದಿನ ಸೂಪರ್ ಮಾರ್ಕೆಟ್ ನಿಂದ ಪ್ರಬುದ್ಧ ಅಕಾಡೆಮಿಗೆ 8:05, 8:20, 9:15, 9:30, 15:50, 16:05, 17:00, 17:15ಕ್ಕೆ ಮತ್ತು ಪ್ರಬುದ್ಧ ಅಕಾಡೆಮಿಯಿಂದ ಸೂಪರ್ ಮಾರ್ಕೆಟ್ ಗೆ 8:40, 8:55, 15:05, 15:20, 16:25, 16:40ಕ್ಕೆ ಸಂಚರಿಸಲಿದೆ.

ಅದೇ ರೀತಿ ರೇವಣಸಿದ್ದೇಶ್ವರ ಕಾಲೋನಿಯಿಂದ ಪ್ರಬುದ್ಧ ಅಕಾಡೆಮಿಗೆ 14:15, 14:30ಕ್ಕೆ ಮತ್ತು ಪ್ರಬುದ್ಧ ಅಕಾಡೆಮಿಯಿಂದ ರೇವಣಸಿದ್ದೇಶ್ವರ ಕಾಲೋನಿಗೆ 10:00, 10:15, 17:35, 17:50ಕ್ಕೆ ಸಂಚಾರ ಮಾಡಲಿದೆ.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ, ಶಾಸಕರಾದ ಎಂ.ವೈ.ಪಾಟೀಲ, ಅಲ್ಲಮಪ್ರಭು ಪಾಟೀಲ, ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರು, ಜಗದೇವ ಗುತ್ತೇದಾರ್, ಕೆ.ಕೆ.ಆರ್.ಟಿ.ಸಿ. ಅಧ್ಯಕ್ಷ ಅರುಣಕುಮಾರ ಪಾಟೀಲ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಹರವಾಳ್, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ, ಕೆ.ಕೆ.ಆರ್.ಡಿ.ಬಿ. ಕಾರ್ಯದರ್ಶಿ ನಲಿನ್ ಅತುಲ್, ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.

# ಮಹಾನಗರ ಪಾಲಿಕೆಯ 108.10ಕೋಟಿ ರೂ. ಕಾಮಗಾರಿಗಳಿಗೆ ಅಡಿಗಲ್ಲು

## ಮುಂದಿನ ಎರಡೂವರೆ ವರ್ಷದಲ್ಲಿ ಕಲಬುರಗಿ ನೀಲಿ ನಕ್ಷೆ ಬದಲಾಯಿಸುತ್ತೇವೆ –ಪ್ರಿಯಾಂಕ್ ಖರ್ಗೆ

- **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಮುಂದಿನ 50 ವರ್ಷದಲ್ಲಿ ಕಲಬುರಗಿ ಹೇಗಿರಬೇಕೆಂಬುದು ಸಂಕಲ್ಪ ಹೊಂದಿದ್ದು, ಅದರಂತೆ ಮುಂದಿನ ಎರಡೂವರೆ ವರ್ಷದಲ್ಲಿ ಸುಸ್ಥಿರ ಅಭಿವೃದ್ಧಿ ಯೋಜನೆಗಳನ್ನು ಹಾಕಿಕೊಳ್ಳುವ ಮೂಲಕ ಕಲಬುರಗಿ ನಗರದ ನೀಲಿ ನಕ್ಷೆ ಬದಲಾಯಿಸುತ್ತೇವೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅಭಿಪ್ರಾಯಪಟ್ಟರು.

ರವಿವಾರ ಕಲಬುರಗಿ ನಗರದ ಡಾ.ಎಸ್.ಎಂ.ಪಂಡಿತರಂಗಮಂದಿರದಲ್ಲಿ ನಗರಾಭಿವೃದ್ಧಿ ಇಲಾಖೆ, ಕಲಬುರಗಿ ಜಿಲ್ಲಾಡಳಿತ, ಮಹಾನಗರ ಪಾಲಿಕೆ ಕಲಬುರಗಿ, ಕೆ.ಕೆ.ಆರ್.ಡಿ.ಬಿ ಹಾಗೂ ವಸತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಕಲಬುರಗಿ ಮಹಾನಗರ ಪಾಲಿಕೆಯ ಎನ್.ಜಿ.ಬಿ ಪರಿಸರ ಪರಿಹಾರ ನಿಧಿಯಲ್ಲಿ ಒಳಚರಂಡಿ ಕಾಮಗಾರಿ ಹಾಗೂ ವಿವಿಧ ಅನುದಾನದ ಅಡಿಯಲ್ಲಿ ಒಟ್ಟು ರೂ. 108.82 ಕೋಟಿ ರೂ. ಅಭಿವೃದ್ಧಿ ಕಾಮಗಾರಿಗಳ ಅಡಿಗಲ್ಲು ಸಮಾರಂಭ, ಪಾಲಿಕೆ ಶೇ.24.10 ಯೋಜನೆ ಅಡಿಯಲ್ಲಿ ಪೌರಕಾರ್ಮಿಕರಿಗೆ ನಿವೇಶನ ಖರೀದಿ ಪತ್ರ ವಿತರಣೆ ಹಾಗೂ ಕುಷ್ಠರೋಗದಿಂದ ಗುಣಮುಖ ಹೊಂದಿದವರಿಗೆ ನಿವೇಶನ ಹಕ್ಕು ಪತ್ರ ವಿತರಣಾ ಮತ್ತು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಕಲಬುರಗಿ ವತಿಯಿಂದ 'ರಾಜೀವ್ ಅವಾಸ್ ಯೋಜನೆ' ಅಡಿಯಲ್ಲಿ ಮನೆ ಹಂಚಿಕೆ ಪತ್ರ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತಾನಾಡಿದರು.



ಇಂದಿಲ್ಲಿ ಸುಮಾರು 110 ಕೋಟಿ ರೂ. ವೆಚ್ಚದ ಕಾಮಗಾರಿಗಳಿಗೆ ಅಡಿಗಲ್ಲು ಹಾಕಿದ್ದು, ಮುಂದಿನ ದಿನದಲ್ಲಿ ನಗರದ ನಿವಾಸಿಗಳಿಗೆ ಇನ್ನಷ್ಟು ಮೂಲಸೌಕರ್ಯ ದೊರೆಯಲಿವೆ. ಪ್ರಪ್ರಥಮ ಬಾರಿಗೆ ನಮ್ಮ ಸರ್ಕಾರ ರೋಡ್ ಅಡಿಟ್ ಮಾಡಿಸಿದೆ. ಕಲಬುರಗಿ ನಗರದಲ್ಲಿ ಸುಮಾರು 357 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಸುಧಾರಣೆ ಮಾಡಲಾಗುತ್ತಿದೆ. 400 ಕೋಟಿ ರೂ. ವೆಚ್ಚದಲ್ಲಿ ವಿದ್ಯುತ್ ಕಂಬಗಳನ್ನು ಬದಲಾಯಿಸುತ್ತೇವೆ. ನಗರಾಭಿವೃದ್ಧಿ ಪ್ರಾಧಿಕಾರದಿಂದ 19 ಜಂಕ್ಷನ್, 3 ಕೆರೆ ಅಭಿವೃದ್ಧಿ ಕಾಮಗಾರಿಗಳು ಸಹ ಮಾಡಲಾಗುತ್ತಿದೆ. ಉದ್ಯಾನವನಗಳನ್ನು ಅಭಿವೃದ್ಧಿಪಡಿಸುತ್ತಿದ್ದೇವೆ. ಇವೆಲ್ಲವು ಕಲಬುರಗಿ ಮಹಾನಗರದ ಚಿತ್ರಣ ಬದಲಿಸಲಿದೆ ಎಂದರು.

ಕಲಬುರಗಿ ಜಿಲ್ಲೆಯಲ್ಲಿ 5.67 ಲಕ್ಷ ಮಹಿಳೆಯರು ಮಾಸಿಕ 2,000 ರೂ. ಪಡೆಯುತ್ತಿದ್ದಾ–ರೆ. 6.32 ಲಕ್ಷ ಮನೆಗೆ ಉಚಿತ ವಿದ್ಯುತ್ ನೀಡಲಾಗಿದೆ ಪ್ರತಿನಿತ್ಯ ಜಿಲ್ಲೆಯಲ್ಲಿ 1 ಲಕ್ಷಕ್ಕಿಂತ ಹೆಚ್ಚಿನ ಮಹಿಳೆಯರು ಉಚಿತ ಪ್ರಯಾಣ ಮಾಡುತ್ತಿದ್ದಾರೆ. 30 ಸಾವಿರ ಜನರಿಗೆ ನಿರುದ್ಯೋಗ ಭತ್ಯೆ ನೀಡಿದ್ದೇವೆ. 20 ಲಕ್ಷ ಫಲಾನುಭವಿಗಳಿಗೆ ಉಚಿತ ಅಕ್ಕಿ ನೀಡುವ ಮೂಲಕ ಅವರ ಬದುಕಿಗೆ ಭದ್ರ ಬುನಾದಿ ಹಾಕಿದ್ದೇವೆ. ಈ ಎಲ್ಲಾ ಉಚಿತ ಯೋಜನೆಗಳು ಬಡವರ ಬಾಳಿಗೆ ಬೆಳಕಾಗಿ ಪರಿಣಮಿಸಿದೆ. ಇಡೀ ರಾಷ್ಟ್ರದಲ್ಲಿ 52 ಸಾವಿರ ಕೋಟಿ ರೂ. ನೇರವಾಗಿ ಜನರಿಗೆ ನೀಡುವ ಯಾವುದಾದರು ಸರ್ಕಾರ ಇದಿಯೆ? ಎಂದು ಪ್ರಶ್ನಿಸಿದ ಅವರು, ವಿರೋಧ ಪಕ್ಷವು ಇಂತಹ ಜನಪರ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಬೇಕೆಂದು ಪ್ರತಿಭಟನೆ ಮಾಡುತ್ತಿರುವುದು ಬೇಸರ ತಂದಿದೆ ಎಂದರು.

**ಸುಳ್ಳು ಹೇಳಿ ಓಡಿ ಹೋಗುವವರು ನಾವಲ್ಲ:**

ಇಂದಿಲ್ಲಿ 105 ಪೌರಕಾರ್ಮಿಕರಿಗೆ ನಿವೇಶನ ನೀಡುತ್ತಿದ್ದೇವೆ. ನಾವು ನುಡಿದಂತೆ ಪೌರ ಕಾರ್ಮಿಕರಿಗೆ ಹೊರಗುತ್ತಿಗೆ ರದ್ದು ಮಾಡಿ ನೇರ ಗುತ್ತಿಗೆ ವ್ಯವಸ್ಥೆ ಕಲ್ಪಿಸಿದ್ದೇವೆ. ಬಡವರಿಗೆ ಮನೆ ನೀಡುತ್ತಿದ್ದೇವೆ. ನಾವು ಸುಳ್ಳು ಆಶ್ವಾಸನೆ ನೀಡುವುದಿಲ್ಲ. ಏನು ಮಾಡ್ತೇವೆ ಅದನ್ನೆ ಹೇಳ್ತೇವೆ. ಇನ್ನು ಸುಳ್ಳು ಹೇಳಿ ಹಿಂಬದಿ ಬಾಗಿಲಿನಿಂದ ಓಡಿ ಹೋಗುವ ಜನ ನಾವಲ್ಲ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

**ಪೌರಕಾರ್ಮಿಕರಿಗೆನಿವೇಶನಹಂಚಿಕೆ:**

ಮಹಾನಗರಪಾಲಿಕೆಯಿಂದ 2014–15, 2018–19, 2021–22ನೇ ಸಾಲಿನ ಶೇ.24.10 ಅನುದಾನದಡಿ ಸುಮಾರು 90 ಲಕ್ಷ ರೂ. ಕರ್ನಾಟಕ ಗೃಹ ಮಂಡಳಿಗೆ ಪಾವತಿಸಿದಲಾಗಿದ್ದು, ಇಂದಿಲ್ಲಿ ಕುಸನೂರ, ಕಾಳಗನೂರ ಪ್ರದೇಶದಲ್ಲಿ ನಿವೇಶನ ಪಡೆದ ಆಯ್ದೆ ಕೆಲ ಪೌರ ಕಾರ್ಮಿಕರಿಗೆ ನಿವೇಶನ ಹಕ್ಕು ಪತ್ರ ವಿತರಿಸಲಾಯಿತು.

**ಬಡವರಿಗೆ ಮನೆ ಹಂಚಿಕೆ ಹಕ್ಕು ಪತ್ರ ವಿತರಣೆ:**

ರಾಜೀವ್ ಅವಾಸ್ ಯೋಜನೆ ಅಡಿಯಲ್ಲಿ ಕೆಸರಟಗಿಯ ಸರ್ವೆ ನಂ 51/7 ರಲ್ಲಿ ಜಿ+3 ಮಾದರಿಯ 320 ಮನೆಗಳನ್ನು ನಿರ್ಮಿಸಲಾಗಿದ್ದು, ಇಂದಿಲ್ಲಿ ಆಯ್ಕೆಗೊಳಿಸಿದ ಫಲಾನುಭವಿಗಳ ಪೈಕಿ ಆಯ್ದ ಜನರಿಗೆ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಡಾ.ಶರಣಪ್ರಕಾಶ ಪಾಟೀಲ ಅವರು ಹಕ್ಕು ಪತ್ರ ವಿತರಣೆ ಮಾಡಿದರು. ಇದಲ್ಲದೆ ಕುಷ್ಠರೋಗದಿಂದ ಗುಣಮುಖ ಹೊಂದಿದ ಸುಮಾರು 51 ಜನರಿಗೆ ನಿವೇಶನ ಹಂಚಿಕೆ ಸಹ ಮಾಡಲಾಯಿತು.

**ಒಳಚರಂಡಿಗೆ 700 ಕೋಟಿ ರೂ. ಕೊಡಿ:**

ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್ ಮಾತನಾಡಿ, ನಗರದ ಒಳಚರಂಡಿ ವ್ಯವಸ್ಥೆ 40–50 ವರ್ಷದ ಹಳೆಯದಾಗಿದ್ದು, ಸಂಪೂರ್ಣ ಕೆಟ್ಟುಹೋಗಿದೆ. ಇದಕ್ಕೆ 700 ಕೋಟಿ ರೂ. ಅವಶ್ಯವಿದ್ದು, ರಾಜ್ಯ ಸರ್ಕಾರದ ಮೂಲಕ ಹಣ ಒದಗಿಸಬೇಕು. ಇನ್ನು ನಗರದ ನಿವಾಸಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆಗೆ ನಾರಾಯಣಪುರ ಜಲಾಶಯದಿಂದ ನೀರು ತರುವ ಯೋಜನೆ ರೂಪಿಸಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ ಅವರಲ್ಲಿ ಮನವಿ ಮಾಡಿದರು.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ, ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಕಲಬುರಗಿ ಉತ್ತರ ಶಾಸಕರಾದ ಕನೀಜ್ ಫಾತಿಮಾ, ಎಂ.ವೈ.ಪಾಟೀಲ, ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರು, ಜಗದೇವ ಗುತ್ತೇದಾರ್, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಹರವಾಳ್, ಮೇಯರ್ ವರ್ಷಾ

ರಾಜೀವ ಜಾನೆ, ಮಹಾನಗರ ಪಾಲಿಕೆಯ ಸ್ಥಾಯಿ ಸಮಿತಿ ಅಧ್ಯಕ್ಷರುಗಳಾದ ಅನುಪಮಾ ಕಮಕನೂರ, ಮಹ್ಮದ ಆಯೇಜ್ ಖಾನ್, ಶೇಖ್ ಹುಸೇನಿ, ಆಡಳಿತ ಪಕ್ಷದ ನಾಯಕ ಶೇಖ ಅಫಜಲ ಗೋಳಾ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ, ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನಮ್, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಎಸ್.ಪಿ. ಅಡ್ಡೂರು ಶ್ರೀನಿವಾಸಲು ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು. ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಪ್ರಸ್ತಾವಿಕವಾಗಿ ಮಾತನಾಡಿದರು. ಆಡಳಿತ ವಿಭಾಗದ ಉಪ ಆಯುಕ್ತೆ ಪ್ರಮೀಳಾ ಎಂ.ಕೆ. ಸ್ವಾಗತಿಸಿದರು.

# ಉಪ ಮುಖ್ಯಮಂತ್ರಿಗಳ ಪ್ರವಾಸ

- **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ರಾಜ್ಯದ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಗಳೊಂದಿಗೆ ಬೆಂಗಳೂರಿನಿಂದ ವಿಶೇಷ ವಿಮಾನ ಮೂಲಕ ಜನವರಿ 12 ರಂದು ಸೋಮವಾರ ಬೆಳಿಗ್ಗೆ 11.40 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು.

ಅಂದು ಬೆಳಿಗ್ಗೆ 11.50 ಗಂಟೆಗೆ ಮುಖ್ಯಮಂತ್ರಿಗಳೊಂದಿಗೆ ಕಲಬುರಗಿ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಯಡ್ರಾಮಿಗೆ ಪ್ರಯಾಣಿಸಿ, ಬೆಳಿಗ್ಗೆ 12.50 ಗಂಟೆಗೆ ಯಡ್ರಾಮಿ ಕೆ.ಪಿ.ಎಸ್. ಶಾಲೆಯಲ್ಲಿ ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿರುವ ಪ್ರಜಾಸೌಧಗಳ, ಕೆ.ಪಿ.ಎಸ್. ಶಾಲೆಗಳ ಹಾಗೂ ವಿವಿಧ ಇಲಾಖೆಗಳ ಕಾಮಗಾರಿಗಳ ಶಂಕುಸ್ಥಾಪನೆ, ಉದ್ಘಾಟನೆ ಹಾಗೂ ಫಲಾನುಭವಿಗಳಿಗೆ ಸೌಲಭ್ಯಗಳ ವಿತರಣಾ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು.

ಅಂದು ಮಧ್ಯಾಹ್ನ 2.30 ಗಂಟೆಗೆ ಮುಖ್ಯಮಂತ್ರಿಗಳೊಂದಿಗೆ ಯಡ್ರಾಮಿಯಿಂದ ಹೆಲಿಕಾಪ್ಟರ್ ಮೂಲಕ ಸೇಡಂಗೆ ಪ್ರಯಾಣಿಸಿ, ಮಧ್ಯಾಹ್ನ 3 ಗಂಟೆಗೆ ಸೇಡಂ ತಾಲೂಕು ಕ್ರೀಡಾಂಗಣದಲ್ಲಿ ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿರುವ ಸೇಡಂ ತಾಲ್ಲೂಕಿನಲ್ಲಿ ವಿವಿಧ ಇಲಾಖೆಗಳ ಕಾಮಗಾರಿಗಳ ಶಂಕುಸ್ಥಾಪನೆ, ಉದ್ಘಾಟನೆ ಹಾಗೂ ಫಲಾನುಭವಿಗಳಿಗೆ ಸೌಲಭ್ಯಗಳ ವಿತರಣೆ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಅಂದು ಸಂಜೆ 4.40 ಗಂಟೆಗೆ ಮುಖ್ಯಮಂತ್ರಿಗಳೊಂದಿಗೆ ಕಲಬುರಗಿ ವಿಮಾನದ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ರಾಜ್ಯದ ಕಂದಾಯ ಸಚಿವರ ಪ್ರವಾಸ

- **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ರಾಜ್ಯದ ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು ಮುಖ್ಯಮಂತ್ರಿಗಳೊಂದಿಗೆ ಬೆಂಗಳೂರಿನಿಂದ ವಿಶೇಷ ವಿಮಾನ ಮೂಲಕ ಜನವರಿ 12 ರಂದು ಸೋಮವಾರ ಬೆಳಿಗ್ಗೆ 11.40 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಅಂದು ಮಧ್ಯಾಹ್ನ 12.20 ಗಂ–ಟೆಗೆ ಮುಖ್ಯಮಂತ್ರಿಗಳೊಂದಿಗೆ ಯಡ್ರಾಮಿ ಕೆ.ಪಿ.ಎಸ್. ಶಾಲೆಯಲ್ಲಿ ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಇವರ ಸಂಯುಕ್ತಾಶ್ರಯದಲ್ಲಿ ಪ್ರಜಾಸೌಧಗಳ, ಕೆ.ಪಿ.ಎಸ್. ಶಾಲೆಗಳ ಹಾಗೂ ವಿವಿಧ ಇಲಾಖೆಗಳ ಕಾಮಗಾರಿಗಳ ಶಂಕುಸ್ಥಾಪನೆ, ಉದ್ಘಾಟನೆ ಹಾಗೂ ಫಲಾನುಭವಿಗಳಿಗೆ ಸೌಲಭ್ಯಗಳ ವಿತರಣಾ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಸಂಜೆ 4.40 ಗಂಟೆಗೆ ಕಲಬುರಗಿ ವಿಮಾನದ ನಿಲ್ದಾಣದಿಂದ ಮುಖ್ಯಮಂತ್ರಿಗಳೊಂದಿಗೆ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ಕಣ್ಮರೆಯಾಗುತ್ತಿರುವ ಕಲೆ ಸಾಹಿತ್ಯ ಉಳಿಸಿ ಬೆಳೆಸಿ



- **ಮಲ್ಲಮ್ಮ ನುಡಿ ವಾರ್ತೆ,ಕೆಂಭಾವಿ:**

ಕನ್ನಡಸಾಹಿತ್ಯವನ್ನು ಶ್ರೀಮಂತಗೊಳಿಸಿದ, ಆದ್ಯವಚನಕಾರರು, ಸತ್ಯಶರಣರು, ದಾಸ ಶ್ರೇಷ್ಠರು, ಸೂಫಿ ಸಂತರು, ತತ್ವಪದಕಾರರು, ದಾರ್ಶನಿಕರು, ಹಾಗೂ ಜನಪದರು ಈ ಮಣ್ಣಿನ ಕಣ ಕಣದಲ್ಲಿಯೂ ಕಂಗೊಳಿಸುತ್ತಿದ್ದಾರೆ ಎಂದು ಹಿರಿಯ ಸಾಹಿತಿ ಹಾಗೂ ನಿವೃತ್ತ ಶಿಕ್ಷಕ, ಪ್ರಹ್ಲಾದಚಾರ್ಯ ಜೋಶಿ ಹೇಳಿದರು.

ಪಟ್ಟಣದ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ರವಿವಾರ ಸಂಜೆ ವಲಯ ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ '2024–25 ನೇ ಸಾಲಿನ ವರ್ದಷದ ವ್ಯಕ್ತಿ ಪ್ರಶಸ್ತಿ' ಪ್ರಧಾನ ಸಮಾರಂಭದಲ್ಲಿ ವರ್ಷದ ವ್ಯಕ್ತಿ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಅವರು ಮಾಹಿತಿ ತಂತ್ರಜ್ಞಾನ ಬೆಳೆದಂತೆ ಸಾಹಿತ್ಯ, ಕಲೆ, ಸಂಗೀತ, ನೃತ್ಯ, ನಾಟಕ, ಬಯಲಾಟ, ಡೊಳ್ಳುಕುಣಿತ ಮತ್ತು ವೀರಗಾಸೆ, ಹಂತಿ ಪದಗಳು, ಜನಪದ ಸಂಸ್ಕೃತಿ ಕಣ್ಮರೆಯಾಗುತ್ತಿರುವುದಕ್ಕೆ ಕಳವಳ ವ್ಯಕ್ತಪಡಿಸಿದ ಅವರು ಯುವಪೀಳಿಗೆ ಹಾಗೂ ಸಾಹಿತ್ಯ ಪರಿಷತ್ತು ಮುಂದಿನ ಜನಾಂಗಕ್ಕೆ ಪರಿಚಯಿಸುವ ಮೂಲಕ ಕವಿ ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯ ಮುಂದುವರಿಸಿಕೊಂಡು ಬರುವಲ್ಲಿ ಪ್ರಮುಖ ಪಾತ್ರ ವಹಿಸಬೇಕೆಂದವರು, ಎಲೆಮರೆಯ ಕಾಯಿಯಂತೆ ಇರುವ ನನ್ನನು ಗುರುತಿಸಿ 'ವರ್ಷದ ವ್ಯಕ್ತಿ ಪ್ರಶಸ್ತಿ' ನೀಡಿ ಗೌರವಿಸಿದ್ದು ನನಗೆ ಅತೀವ ಸಂತಸ ತಂದಿದೆ. ತಮ್ಮೆಲ್ಲರ ಪ್ರೀತಿ ಅಭಿಮಾನ ಹಾರೈಕೆ ಹೀಗೆ ಇರಲಿ ಎಂದು ಆಶಿಸಿದರು.

ಪಿಎಲ್ ಡಿ ಬ್ಯಾಂಕ್ ನಿರ್ದೇಶಕ ವಾಮನರಾವ್ ದೇಶಪಾಂಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪಿಎಲ್ ಡಿ ಬ್ಯಾಂಕ್ ನಿರ್ದೇಶಕ ವಾಮನರಾವ್ ದೇಶಪಾಂಡೆ ಪ್ರಶಸ್ತಿ ಪುರಸ್ಕಾರ ಬಿರುದುಗಳು ಮೌಲ್ಯ ಕಳೆದುಕೊಳ್ಳುತ್ತಿರುವ ಸಂದರ್ಭದಲ್ಲಿ ವಲಯ ಕನ್ನಡ ಸಾಹಿತ್ಯ ಪರಿಷತ್ತು ಸೂಕ್ತ ವ್ಯಕ್ತಿಯನ್ನು ಗುರುತಿಸಿರುವುದು ಶ್ಲಾಘನೀಯ, ಹಿರಿಯರ ಮಾರ್ಗದರ್ಶನ ಪಡೆದು ಸಾಹಿತಿಗಳು, ಸಂಶೋಧಕರು ಇಲ್ಲಿಯ ಐತಿಹಾಸಿಕ ಸ್ಥಳಗಳು ಮೇಲೆ ಬೆಳಕು ಚೆಲ್ಲುವ ಕಾರ್ಯಕ್ಕೆ ಮುಂದಾಗಿಲಿ ಎಂದರು.

ವಲಯ ಕಸಾಪ ಅಧ್ಯಕ್ಷ ಮಡಿವಾಳಪ್ಪಗೌಡ ಪಾಟೀಲ ಹೆಗ್ಗನದೊಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರಮುಖರಾದ ಚೆನ್ನಯ್ಯ ಸ್ವಾಮಿ ಚಿಕ್ಕಮಠ, ಪುರಸಭೆ ಸದಸ್ಯ ಸುಧಾಕರರಡ್ಡಿ ಡಿಗ್ಗಾವಿ, ಹಿರಿಯ ಪತ್ರಕರ್ತ ಸಂಜೀವರಾವ್ ಕುಲ್ಕರ್ಣಿ, ನಿವೃತ್ತ ಉಪನ್ಯಾಸಕ ನರಸಿಂಹರಾವ್ ಕುಲ್ಕರ್ಣಿ, ಟಿ ಜಿ ಜೋಷಿ, ರಾಮನಗೌಡ ಪೋಲೀಸ್ ಪಾಟೀಲ್, ನಿಂಗನಗೌಡ ದೇಸಾಯಿ, ನಾಗರತ್ನ ಓಂಕಾರ, ಪಾರ್ವತಿ ಬುದೂರು, ಬಿ ಗುಡಿ ಕಸಾಪ ಅಧ್ಯಕ್ಷ ಶರಣಬಸವ ಸೈದಾಪುರ ಸೇರಿದಂತೆ ಅನೇಕರು ಮಾತನಾಡಿ ಶುಭಹಾರೈಸಿದರು.

ಹಳ್ಳೇರಾವ್ ಕುಲ್ಕರ್ಣಿ ಪ್ರಾಸ್ತಾವಿಕ ಮಾತನಾಡಿದರು, ಬಂದೇನವಾಜ್ ನಾಲತವಾಡ ಸ್ವಾಗತಿಸಿದರು, ಡಾ ಯಂಕನಗೌಡ ಪಾಟೀಲ ನಿರೂಪಿಸಿದರು, ವಿಜಯಾಚಾರ್ಯ ಪುರೋಹಿತ ವಂದಿಸಿದರು. ವಲಯ ಕನ್ನಡ ಸಾಹಿತ್ಯಪರಿಷತ್ತಿನ ಪದಾಧಿಕಾರಿಗಳು, ಕನ್ನಡಾಭಿಮಾನಿಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಇದ್ದರು.

# ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಬದಲಾವಣೆ.

## ಕೇಂದ್ರ ಸರ್ಕಾರ ಬಡವರ ಹಕ್ಕನ್ನು ಕಿತ್ತುಕೊಂಡಿದೆ. ಎಂಎಲ್ಸಿ ಬಾದರ್ಲಿ.

- **ಮಲ್ಲಮ್ಮ ನುಡಿ ವಾರ್ತೆ,ಸಿಂಧನೂರು:**



ಮೊಟ್ಟ ಮೊದಲ ಬಾರಿಗೆ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿ ಇದ್ದಾಗ.ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಜಾರಿಗೆ ತಂದು. ಬಡವರು ಕುಟುಂಬಗಳಿಗೆ ಆಶ್ರಯವಾಗಿತ್ತು. ಆದರೆ ಬಿಜೆಪಿ ಕೇಂದ್ರ ಸರ್ಕಾರ ಬಡವರ ಎಲ್ಲಾ ಯೋಜನೆಗಳು ಬದಲಾವಣೆ ಮಾಡಿ ಬಡ ಕುಟುಂಬಗಳು ಹಕ್ಕುಗಳನ್ನು ಕಿತ್ತುಕೊಂಡಿದೆ ಕೇಂದ್ರ ಸರ್ಕಾರ ನೀತಿ ಖಂಡಿಸಿ ಜ.16 ರಂದು ತಾಲೂಕು ಕಛೇರಿ ಮುಂಭಾಗದಲ್ಲಿ ಒಂದು ದಿನದ ಉಪವಾಸ ಸತ್ಯಾಗ್ರಹ ನಡೆಸಲಾಗುತ್ತಿದೆ.ಎಂದು ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ತಿಳಿಸಿದರು

ನಗರದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕಾಂಗ್ರೆಸ್ ಪಕ್ಷ ಯಾವಾಗಲೂ ಬಡವರಿಗಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದಿರುವ ಹಿನ್ನೆಲೆಯಲ್ಲಿ ರಾಷ್ಟ್ರೀಯ ಪ್ರಧಾನಿ ಮಂತ್ರಿ ಡಾ.ಮನಮೋಹನ್ ಸಿಂಗ್ ಅವರು ಅವಧಿಯಲ್ಲಿ ಬಂದಿರುವ ರಾಷ್ಟ್ರ ಮಹಾತ್ಮ ಗಾಂಧೀಜಿ ಅವರ ಹೆಸರಿನಲ್ಲಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಮುಂದುವರಿಸಬೇಕು. ಎಂದು ಕಾಂಗ್ರೆಸ್ ಪಕ್ಷದ ಆದೇಶದಂತೆ ರಾಜ್ಯಾದ್ಯಂತ ಮನರೋಗ ಬಚಾವ್ ಸಂಗ್ರಾಮ ಎಂದು ಪ್ರತಿಭಟನೆ ಹಮ್ಮಿಕೊಳ್ಳಲಾಗುತ್ತದೆ ಎಂದು ತಿಳಿಸಿದರು

ಜ.18 ರಿಂದ 29 ವರಿಗೆ ಜನ ಸಂಪರ್ಕ ಸಭೆಯನ್ನು ತಾಲೂಕು ಕಾಂಗ್ರೆಸ್ ಸಮಿತಿ ವತಿಯಿಂದ ತಾಲೂಕಿನ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನಡೆಸಲಾಗಿತ್ತು. ಹಾಗೆ ಪಕ್ಷದ ಸಮಿತಿ ವತಿಯಿಂದ 05 ಕಿಮೀ ವರೆಗೆ ಪಾದಯಾತ್ರೆ ನಡೆಸಲಾಗುತ್ತಿದೆ ಎಂದರು.

ಕೇಂದ್ರ ಸರ್ಕಾರದ ಪ್ರಧಾನಿ ಮಂತ್ರಿ ಮೋದಿ ಹಾಗೂ ಗೃಹ ಸಚಿವ ಅಮಿತ್ ಷಾ ಕಾರ್ಪೊರೇಟ್ ಸಂಸ್ಥೆಗಳು ಪರವಾಗಿ ಕೆಲಸ ಮಾಡುವ ಉದ್ದೇಶದಿಂದ ಈ ಕುತಂತ್ರ ರೂಪಿಸಿದ್ದಾರೆ.

ಮಹಾತ್ಮ ಗಾಂಧಿಜೀ ಹೆಸರಿನ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಬಡವರು ತಮ್ಮ ಜೀವವನ್ನು ಸಾಗುತ್ತಿದ್ದರು. ಆದರೆ ಈಗ ಕೇಂದ್ರ ಸರ್ಕಾರ ಬಡವರ ಹಕ್ಕನ್ನು ಕಿತ್ತುಕೊಂಡು. ದೊಡ್ಡದೊಡ್ಡ ಕಂಪನಿಗಳು ಕೈ ಗೊಂಬೆಯಾಗಿ ಕೆಲಸ ಮಾಡುತ್ತದೆ. ವರ್ಷದಲ್ಲಿ 365 ದಿನಗಳಲ್ಲಿ 60 ದಿನಕ್ಕೆ ಅಷ್ಟೇ ಕೆಲಸ ಕೊಡುವ ಹುನ್ನಾರ ನಡೆದಿದ್ದು. ಬಡವರಿಗೆ ಕೆಲಸ ಇಲ್ಲದೆ ದೇಶದಲ್ಲಿ ನಿರುದ್ಯೋಗ ನಿವಾರಣೆ ಮಾಡಲು ಹೇಗೆ ಸಾಧ್ಯ. ಕೇಂದ್ರ ಸರ್ಕಾರದ ವಿರುದ್ಧ ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಕಿಡಿಕಾರಿದರು.

ಈ ಸಂದರ್ಭದಲ್ಲಿ. ಶರಣಯ್ಯಸ್ವಾಮಿ. ಕೋಟೆ. ವೆಂಕಟೇಶ್ ರಾಗಲಪರ್ವಿ. ಅಮರೇಶ ಗಿರಿಜಾಲಿ. ಶಿವಕುಮಾರ್ ಜವಳಿ ಅಬಿಬ್ ಖಾಜಾ ಶಾಬಾಜ್. ಯುಸೋಫ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪ್ರಧಾನಿ ಮೋದಿ ಅವರ ಭಾಷಣ ಟಿ.ವಿಯಲ್ಲಿ ನೋಡಿ ಸಂತಸ



ಮಲ್ಲಮ್ಮನುಡಿವಾರ್ತೆಕಮಲನಗರ: ತಾಲೂಕಿನ ಕೊಟಗ್ಯಾಳ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ರಾಷ್ಟ್ರೀಯ ಯುವ ದಿನದ ಪ್ರಯುಕ್ತ ದೇಶದ ಪ್ರಧಾನಿಗಳಾದ ಶ್ರೀ ನರೇಂದ್ರ ಮೋದಿಯವರ ನೇರ ಪ್ರಸಾರದ ಭಾಷಣ ಮಕ್ಕಳು ದೂರದರ್ಶನ (ಟಿ.ವಿ)ದಲ್ಲಿ ವೀಕ್ಷಣೆ ಮಾಡಿದರು.

ಕಾರ್ಯಕ್ರಮವನ್ನು ಮಕ್ಕಳು ಟಿ.ವಿ ಯಲ್ಲಿ ನೋಡಿ ಸಂತಸ ಪಟ್ಟರು, ನಂತರ ಸಿ. ಆರ್. ಪಿ. ನಾಗೇಶ ಸಂಗಮೇ ಮಾತನಾಡಿ ಸ್ವಾಮಿ ವಿವೇಕಾನಂದ ಅವರ ಜನ್ಮ ದಿನವನ್ನು 'ಯುವ ದಿನ' ವನ್ನಾಗಿ ಪ್ರತಿ ವರ್ಷ ಜನೆವರಿ 12 ರಂದು ಆಚರಣೆ ಮಾಡುತ್ತಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಗುರುಗಳಾದ ಪ್ರಕಾಶ್ ಮಹಾಜನ, ರಾಜಕುಮಾರ್ ನವಾಡೆ, ಸುವರ್ಣ ಮಡಿವಾಳ, ರಾಜೇಂದ್ರ ಪಾಟೀಲ್, ಶ್ರೀರಂಗ ಸಿಂದೆ, ನಾಗೇಶ್ ಸಂಗಮೆ ಉಪಸ್ಥಿತರಿದ್ದರು.

# ವಿವಿಧ ಮೌಲ್ಯದ ವಸ್ತುಗಳು ಜಪ್ತಿ, 15 ಲಕ್ಷ ರೂ. ಮತ್ತು ನಗದು ವಶಕ್ಕೆ: ಎಸ್.ಪಿ. ಪೃಥ್ವಿಕ್ ಶಂಕರ

- ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ಕಳೆದ ಆರು ತಿಂಗಳಲ್ಲಿ ನಡೆದಿರುವ 13 ವಿವಿಧ ಅಪರಾಧ ಪ್ರಕರಣಗಳನ್ನು ಬೇಧಿಸಿರುವ ಜಿಲ್ಲೆಯ ವಿವಿಧ ಪೊಲೀಸ್ ಠಾಣೆ ವ್ಯಾಪ್ತಿಯ ಪೊಲೀನ್ ಅಧಿಕಾರಿ ಮತ್ತು ಸಿಬ್ಬಂದಿ. ನಗದು ಸೇರಿದಂತೆಯೇ ಸುಮಾರು 15 ಲಕ್ಷ ರೂ ಮೌಲ್ಯದ ವಿವಿಧ ವಸ್ತುಗಳು ವಶಪಡಿಸಿಕೊಂಡು, 10 ಆರೋಪಿಗಳನ್ನು ಬಂಧಿಸಿದ್ದಾರೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ತಿಳಿಸಿದ್ದಾರೆ.

ಶುಕ್ರವಾರ ಸಂಜೆ ಜಿಲ್ಲಾ ಪೊಲೀಸ್ ಭವನದಲ್ಲಿ ಕರೆದಿದ್ದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ತಾಪುರ ತಾಲೂಕಿನ ಅಲ್ಲೂರ್ (ಬಿ) ಗ್ರಾಮದ ಬೈಕ್‌ಗಳ ಮಹಾದೇವ ದ್ಯಾವಣ್ಣನೋರ ಎಂಬ ಬೈಕ್‌ಗಳನ್ನು ಬಂಧಿಸಿ ಆತನಿಂದ 1.70 ಲಕ್ಷ ರೂ.ಮೌಲ್ಯದ ಐದು ದ್ವಿಚಕ್ರವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.



ಇದರಲ್ಲಿ ನಾಲ್ಕು ಯಾದಗಿರಿ ನಗರ ಠಾಣೆ ಮತ್ತು ಇನ್ನೊಂದು ಬೆಂಗಳೂರಿನ ಕೊಣನಕುಂಟೆ ಠಾಣೆ ವ್ಯಾಪ್ತಿಯಲ್ಲಿ ಕಳ್ಳತನ ಮಾಡಿದ್ದ ಬೈಕ್‌ಗಳು ಸೇರಿವೆ ಎಂದರು. ನಗರ ಠಾಣೆ ವ್ಯಾಪ್ತಿಯಲ್ಲಿ ಮನೆಗಳನ ಮಾಡಿದ್ದ ಆರೋಪಿ ಅಶೋಕ ಮುಷ್ಯರನ್ನು ಬಂಧಿಸಿ ಆತನಿಂದ 1 49 ಲಕ್ಷ ರೂ. ಮೌಲ್ಯದ ವಿವಿಧ ಬಂಗಾರದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಅದೇ ರೀತಿಯಾಗಿ ನಗರ ಠಾಣೆ ವ್ಯಾಪ್ತಿಯಲ್ಲಿ ಕಳ್ಳತನ ಮಾಡಿದ್ದ ಆಂಧ್ರಪ್ರದೇಶ ಆನಂಶಪುರದ ಮಹೇಶ ಮೊಗ ಆಶನನ್ನು ಬಂಧಿಸಿ ನಗದು 4.80. ಲಕ್ಷ ರೂ., ಹಳ್ಳೆಪ್ಪ ಗೊಂದಲಗೇರಾ ಆಶನಿಂದ 1.01.300 ಲಕ್ಷ ರೂ. ಹಾಗೂ ಬಂಧಿತ ಪ್ರಶಾಂತ ಮತ್ತು ಶಿವಕುಮಾರ ಅವರಿಂದ 1.40 ಲಕ್ಷ ರೂ. ಮೌಲ್ಯದ 20 ಗ್ರಾಂ ಚಿನ್ನ, 80 ಮೌಲ್ಯದ 10 ಗ್ರಾಂ ಚಿನ್ನದ ಬೆಂಡೋಲಿ 15 ಸಾವಿರ ರೂ. ಮೌಲ್ಯದ 20 ಸಾವಿರ ರೂ. ಮೌಲ್ಯದ 20 ಶೋಲೆ ಬೆಳ್ಳಿ ಸಾಮಾನು ವಶಪಡಿಸಿಕೊಳ್ಳಲಾಗಿದೆ ಎಂದು ಎಸ್ ಪಿ ಹೇಳಿದರು. ರಾಯಚೂರಿನ ಆಂಜನೇಯ್ಯ ಎಂಬ ಆರೋಪಿಯನ್ನು ಬಂಧಿಸಿ ಆತನಿಂದ 82 ಸಾವಿರ ರೂ. ಮೌಲ್ಯದ ಒಂದು ಬೈಕ್ ಮತ್ತು 10 ಗ್ರಾಂ ಬಂಗಾರ, ಶಿವಪ್ಪ ಬೇವಿನಹಳ್ಳಿ ಎಂಬ ಆರೋಪಿಯನ್ನು ಬಂಧಿಸಿ ಆತನಿಂದ 95 ಸಾವಿರ ರೂ. ಮೌಲ್ಯದ ಬೆಳ್ಳಿ ಸಾಮಾನುಗಳನ್ನು ಮತ್ತು ಯಾದಗಿರಿ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 1,10 ಲಕ್ಷ ರೂ.

ಮೌಲ್ಯದ 11 ಕುರಿಗಳನ್ನು ಕಳ್ಳತನ ಮಾಡಿದ್ದ ದಶರಥ ಕಟ್ಟಿಮನಿ ಅವರನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದರು. ಹೆಚ್ಚುವರಿ ಎಸ್‌ಪಿ ಧರಣೇಶ, ಡಿಎಸ್‌ಪಿಗಳಾದ ಜಾವಿದ್ ಇನಾಂದಾರ, ಸುರೇಶ ನಾಯಕ್, ಸಿಪಿಐ ಸುನೀಲ್ ಮೂಲಿಮನಿ ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

ಜಾಲ ಬೀಸಿ ಪತ್ತೇ ಹಚ್ಚಿದ ಅಧಿಕಾರಿ, ಸಿಬ್ಬಂದಿ ತಮ್ಮ ಹಾಗೂ ಹೆಚ್ಚವರಿ ಎಸ್‌ಪಿ ಧರಣೇಶ, ಡಿಎಸ್ಪಿ ಸುರೇಶ ನಾಯಕ ಅವರ ಮಾರ್ಗದರ್ಶನದಲ್ಲಿ ಸಿಪಿಐ ಸುನೀಲ್ಲ ಮೂಲಿಮನಿ, ಪಿಎಸ್‌ಐಗಳಾದ ಮಹಬೂಬ್, ಮಂಜನಗೌಡ, ಹಣಮಂತ ಬಂಕಲಗಿ. ನಾಬರೆಡ್ಡಿ ಹಾಗೂ ಪೊಲೀಸ್ ಸಿಬ್ಬಂದಿಗಳಾದ ಮೋನಪ್ಪ, ವಿಷ್ಣುವರ್ಧನ, ಸೈದಪ್ಪ, ಸೈಯದ್‌ಅಲಿ, ಸಾಬರೆಡ್ಡಿ, ಈರಪ್ಪ, ಅಬ್ದುಲ್ ಭಾಷಾ, ದಾವಲಸಾಬ್, ಗೋವಿಂದ, ವೆಂಕಟೇಶ, ಸಂಗನಗೌಡ. ಲಾಲಅಹ್ಮದ್, ವೆಂಕೋಬಾ, ಶರೀಫ್‌ನಾಬ್, ಹರಿನಾಥರೆಡ್ಡಿ, ರಾಘವೇಂದ್ರರೆಡ್ಡಿ, ರಮೇಶ ಮತ್ತು ಕರುಣೇಶ ಅವರುಗಳು ಜಾಲ ಬೀಸಿ ಈ ಎಲ್ಲ ಪ್ರಕರಣಗಳನ್ನು ಪತ್ತೆ ಹಚ್ಚಿಸಿದ್ದಾರೆ. ಅದಕ್ಕಾಗಿ ಇವರಿಗೆಲ್ಲ ಇಲಾಖೆಯಿಂದ ಪ್ರಶಂಸ ಪತ್ರ ನೀಡಿಲಾಗುವುದೆಂದು ಎಸ್‌ಪಿ ಪೃಥ್ವಿಕ್ ಶಂಕರ ಹೇಳಿದರು.

**166 ರಸ್ತೆ ಅಪಘಾತ ನಗರ ಸೇರಿದಂತೆಯೇ ಜಿಲ್ಲೆಯ ಎಲ್ಲಡೆ ಸಂಚಾರಿ ನಿಯಮಗಳನ್ನು ಉಲ್ಲಂಘಿಸಿದವರಿಗೆ ದಂಡ ಹಾಕುವ ಪ್ರಕ್ರಿಯೇ ಮುಂದುವರೆದಿದೆ. 2024ರಲ್ಲಿ ಜಿಲ್ಲೆಯಲ್ಲಿ 157 ಮತ್ತು 2025ರಲ್ಲಿ 166 ರಸ್ತೆ ಅಪಘಾತಗಳು ಸಂಭವಿಸಿವೆ. ಇದರಲ್ಲಿ 85 ಬೈಕ್ ಸವಾರರು ಜೀವ ಕಳೆದುಕೊಂಡಿದ್ದಾರೆ. ಕಾರಣ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿಬೇಕು. ಮೂರು ಜನ ಕುಳಿತುಕೊಂಡು ವಾಹನ ನಡೆಸಬಾರದು ಮತ್ತು ಮೊಬೈಲ್ ಬಳಕೆ ಮಾಡಬಾರದೆಂದ ಎಸ್‌ಪಿ ಪೃಥ್ವಿಕ್ ಶಂಕರ ಅವರು, ಜೀವಕ್ಕಿಂತ ದೊಡ್ಡದು ಯಾವುದು ಇಲ್ಲ ಎಂದರು. ನಗರದ ಸಂಚಾರ ವ್ಯವಸ್ಥೆ ಸುಧಾರಣೆಗೆ ಸಾಕಷ್ಟು ಪ್ರಯತ್ನ ಮಾಡಲಾಗುತ್ತಿದ್ದು, ಜನರು ಸಹ ಸಂಚಾರಿ ನಿಯಮಗಳನ್ನು ಪಾಲಿಸಬೇಕೆಂದರು.**

## ಗುರು ಸಾವಿತ್ರಿ ಪ್ರಶಸ್ತಿ ಪ್ರಧಾನ



- ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ನಗರದ ಕನ್ನಡ ಭವನದಲ್ಲಿ ನಡೆದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಕಲಬುರ್ಗಿ ವತಿಯಿಂದ ನಡೆದ ಅಕ್ಷರದವ್ವ ಸಾವಿತ್ರಿಬಾಯಿ ಫುಲೆ ಜಯಂತಿಯ ಪ್ರಯುಕ್ತ ಗುರು ಸಾವಿತ್ರಿ 2026 ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ, ಸಮಾಜ ಸೇವಕಿ ಮತ್ತು ಡಾ. ಅಮರೇಶ್ವರಿ ಬಾಬುರಾವ್ ಚಿಂಚನಸೂರ್ ರವರಿಗೆ ಗೌರವ ಪ್ರಶಸ್ತಿ ನೀಡಿ ಸನ್ಮಾನಿಸಿದರು.

## ತಂದೆ ತಾಯಿಯರ ಋಣ ಕೃತಿಗೆ ರಾಜ್ಯ ಮಟ್ಟದ ಪ್ರಶಸ್ತಿ.

- ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ಬೆಳಗಾವಿ ಜಿಲ್ಲೆಯ ರಾಯಭಾಗ ತಾಲೂಕಿನ ಹಾರೂಗೇರಿಯಲ್ಲಿ ದಿನಾಂಕ 15-01-2026 ರಂದು ನಡೆಯುವ ಆಜೂರ ತೋಟದ ಮಹಾಮನೆಯಲ್ಲಿ ಆಜೂರ ಪ್ರತಿಷ್ಠಾನದ ವತಿಯಿಂದ ಕೂಡಮಾಡುವ ರಾಜ್ಯ ಮಟ್ಟದ ಪ್ರಶಸ್ತಿಗೆ ಸುರಪುರದ ಸಾಹಿತಿ ಜಾವೀದಹುಸೇನಹವಲ್ದಾರರವರು ರಚಿಸಿರುವ ತಂದೆ ತಾಯಿಯರ ಋಣ ಎಂಬ ಅತ್ಯುನ್ನತ ಕೃತಿ ಆಯ್ಕೆಯಾಗಿದೆ, ಶ್ರೀಯುತರಿಗೆ ಪುಸ್ತಕ ಬಹುಮಾನದ ಜೂತೆಗೆ ರಾಜ್ಯ ಮಟ್ಟದ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತದೆ. ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ನಾಡಿನ ಪರಮ ಪೂಜ್ಯರ ಗೌರವ ಸಾನಿಧ್ಯದಲ್ಲಿ ಈ ಕಾರ್ಯಕ್ರಮ ಜರಗಲಿದೆ ಎಂದು ಈ ಸಂಸ್ಥೆಯ ಅಧ್ಯಕ್ಷರಾದ ಬಿ.ಆರ್.ಆಜೂರ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮತ್ತು ಧಾರವಾಡದ ಹಿರಿಯ ಸಾಹಿತಿ ಆರ್.ಬಿ. ಚಿಲುಮಿ ಹಾಗೂ






ಗೋಕಾಕಿನ ವಿಶ್ವ ದಾಖಲೆಯ ಹಿರಿಯ ಸಾಹಿತಿಗಳಾದ ಡಾ.ಲಕ್ಷ್ಮಣ ಎಸ್ ಚೌರಿ ಸರ್ ರವರು ಅಭಿನಂದಿಸಿ ಶುಭ ಹಾರೈಸಿದ್ದಾರೆ.

## ಡಿ.ಡಿ.ಯು.ಶಾಲೆ ಯಲ್ಲಿ ಸ್ವಾಮಿ ವಿವೇಕಾನಂದರ ಜನ್ಮದಿನ ಆಚರಣೆ.



- ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ನಗರದ ಡಿ ದೇವರಾಜ ಅರಸ್ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ (ಕನ್ನಡ ಮಾಧ್ಯಮ) ಯಾದಗಿರಿಯಲ್ಲಿಂದು ಏಳಿ ಎದ್ದೇಳಿ, ಗುರಿ ಮುಟ್ಟುವತನಕ ನಿಲ್ಲದಿರಿ ಎಂದು ಯುವಜನತೆಯನ್ನು ಬಡಿದೆಬ್ಬಿಸಿದ ಮಹಾನ್ ಚೇತನ, ಯುವಶಕ್ತಿಯ ಆರಾಧ್ಯ ದೈವ, ಭಾರತದ ಆಧ್ಯಾತ್ಮಿಕತೆಯ ಮೇರು ಪರ್ವತ, ಭವ್ಯ ಭಾರತ ನಿರ್ಮಾಣದ ಸಂಕಲ್ಪ ತೊಟ್ಟ ಅದಮ್ಯ ಚೇತನ, ಭಾರತಾಂಬೆಯ ಹೆಮ್ಮೆಯ ಪುತ್ರ, ವಿಶ್ವ ವಿಖ್ಯಾತ ತತ್ವಜ್ಞಾನಿ, ಮಹಾನ್ ವಿಶ್ವ ಸಂತ, ಸಿಡಿಲು ವೀರ ಸನ್ಯಾಸಿ, ಸ್ವಾಮಿ ವಿವೇಕಾನಂದರ ಜನ್ಮದಿನ ಹಾಗೂ ರಾಷ್ಟ್ರೀಯ ಯುವ ದಿನವನ್ನು ಶಾಲೆಯಲ್ಲಿ ಆಚರಿಸಲಾಯಿತು. ಸ್ವಾಮಿ ವಿವೇಕಾನಂದರ ಕುರಿತು ವಿದ್ಯಾರ್ಥಿನಿ ಅಂಕಿತಾ, ಸುನಿತಾ, ಹಾಗೂ ವಿದ್ಯಾರ್ಥಿ ಆಕಾಶ ಮಾತನಾಡಿದರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯಗುರುಗಳಾದ ವೆಂಕಟೇಶ ಪೂಜಾರಿ, ಶಿಕ್ಷಕರಾದ ಕವಿತಾ ಪಾಟೀಲ್, ಹುಚ್ಚಪ್ಪ ದೇವರಗೋನಾಲ, ಅಯ್ಯಣ್ಣ ಕೆ, ಪ್ರಭುಮೈಲಾರಿ, ಸರೀತಾಕುಮಾರಿ, ನಸರೀನ್ ಬೇಗಂ, ಈರಮ್ಮ, ಮಹಮ್ಮದ್ ಸೌದಾಗರ, ಹಾಗೂ ಮಕ್ಕಳು ಮತ್ತು ಯಲ್ಲಮ್ಮ ಇನ್ನಿತರರು ಉಪಸ್ಥಿತರಿದ್ದರು.

## ಮೈಲಾಪುರ ಜಾತ್ರೆಗೆ ಕೆಕೆಆರ್‌ಟಿಸಿ ಸಾರಿಗೆ ಸನ್ನದ್ಧ ಸ್ಥಳ ಪರಿಶೀಲನೆ ನಡೆಸಿದ ಅಧಿಕಾರಿಗಳ ತಂಡ

- ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ಉತ್ತರ ಕರ್ನಾಟಕದ ಪ್ರಸಿದ್ಧ ಮೈಲಾಪುರ ಶ್ರೀ ಮೈಲಾರ್ ಲಿಂಗೇಶ್ವರ ಜಾತ್ರಾಮಹೋತ್ಸವಕ್ಕೆ ಆಗಮಿಸುವ ಭಕ್ತಾದಿಗಳಿಗೆ ಸುಗಮ ಪ್ರಯಾಣ ಕಲ್ಪಿಸಲು ಕೆಕೆಆರ್‌ಟಿಸಿ ಸಜ್ಜಾಗಿದೆ. ಜಾತ್ರೆಯ ನಿಮಿತ್ತ ವಿಶೇಷ ಬಸ್ ಕಾರ್ಯಾಚರಣೆ-ಯ ಪೂರ್ವಸಿದ್ಧತೆಗಳನ್ನು ಪರಿಶೀಲಿಸಲು ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಮಂಜುನಾಥ್ ಅವರು ಮೈಲಾಪುರ ಗ್ರಾಮಕ್ಕೆ ಭೇಟಿ ನೀಡಿದರು.

ಜಾತ್ರೆಯ ಸಮಯದಲ್ಲಿ ಭಕ್ತರ ದಟ್ಟಣೆಯನ್ನು ನಿಯಂತ್ರಿಸುವುದು ಮತ್ತು ಎಲ್ಲರಿಗೂ ಸಾರಿಗೆ ಸೌಲಭ್ಯ ಸಿಗುವಂತೆ ನೋಡಿಕೊಳ್ಳುವ ಉದ್ದೇಶದಿಂದ ಈ ಭೇಟಿ ಆಯೋಜಿಸಲಾಗಿತ್ತು. ಬಸ್ ನಿಲ್ದಾಣದ ವ್ಯವಸ್ಥೆ, ಬಸ್‌ಗಳ ಸಂಚಾರದ ಹಾದಿ ಹಾಗೂ ಪ್ರಯಾಣಿಕರ ಸುರಕ್ಷತೆಯ ಬಗ್ಗೆ ಸ್ಥಳದಲ್ಲೇ ಪರಿಶೀಲನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಕಾರ್ಮಿಕ ಕಲ್ಯಾಣಾಧಿಕಾರಿ ಬಂಗಾರೆಪ್ಪ, ಘಟಕ ವ್ಯವಸ್ಥಾಪಕ ರಮೇಶ್ ತಾಳಿಕೋಟಿ ಹಾಗೂ ಟ್ರಾಫಿಕ್ ಇನ್ಸ್‌ಪೆಕ್ಟರ್ ಮಹಿಮೂದ್ ಕಿಲ್ಲನಕೇರಾ ಉಪಸ್ಥಿತರಿದ್ದು, ಕಾರ್ಯಾಚರಣೆಯ ರೂಪುರೇಷೆಗಳ ಬಗ್ಗೆ ಚರ್ಚಿಸಿದರು.



## ವಿಜ್ಞಾನ ವಸ್ತು ಪ್ರದರ್ಶನ

- ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ಜಿಲ್ಲೆಯ ಪ್ರತಿಷ್ಠಿತ ವಿದ್ಯಾ ಸಂಸ್ಥೆಯಾದ ಆರ್.ವಿ. ವಿದ್ಯಾ ಸಂಸ್ಥೆಯಲ್ಲಿ 2025-26ನೇ ಸಾಲಿನ ಶೈಕ್ಷಣಿಕ ವರ್ಷದ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮ ಶನಿವಾರ ಆಯೋಜಿಸಲಾಗಿತ್ತು. ಈ ವಸ್ತು ಪ್ರದರ್ಶನಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ



ಪುರಸ್ಕೃತರು ಹಾಗೂ ಹೊನಗೇರಾದ ಸರ್ಕಾರಿ ಪ್ರೌಢ ಶಾಲೆ ಸಹ ಶಿಕ್ಷಕಿ ಬ್ರಹ್ಮಲಾಂಬಿಕಾ ಅವರು ಮಾತನಾಡಿ, ಮಕ್ಕಳಿನ ಪ್ರತಿಭೆ ಅನಾವರಣಕ್ಕೆ ಇದೊಂದು ಪ್ರತಿಭಾವಂತ ಮಕ್ಕಳಿಗೆ ಉತ್ತಮ ವೇದಿಕೆ ಎಂದರು.

ರೋಬೋಟಿಕ್ಸ್ ಕಿಟ್‌ಗಳಿಂದ ಆಧುನಿಕ ವಸ್ತು ಪ್ರದರ್ಶನ ಮತ್ತು ಮಕ್ಕಳ ಕಡೆಯಿಂದ ವಿವಿಧ ರೀತಿಯ ಆಹಾರ ಮೇಳ ನಡೆಯಿತು. ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕರಾದ ಕಮಲಾ ಎನ್. ದೇವರಕಲ್, ಕಾರ್ಯದರ್ಶಿ ಎಸ್.ಎಸ್ ದೇವರಕಲ್ ,ಆಡಳಿತ ಮಂಡಳಿಯವರು ಹಾಗೂ ಪ್ರಾಂಶುಪಾಲ ಪಿ.ಎನ್.ಅಶೋಕ ಹಾಗೂ ಶಿಕ್ಷಕ ವರ್ಗ ಹರ್ಷ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಹಾಗೂ ಪೋಷಕರು ಈ ವಸ್ತು ಪ್ರದರ್ಶನವನ್ನು ವಿಕ್ಷಣೆ ಮಾಡಿ ಸಂಭ್ರಮಿಸಿದರು.

## ಅಧ್ಯಕ್ಷರಾಗಿ ರವಿ ಆಯ್ಕೆ.



- ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್:

ಜನವರಿ 10: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ (ಕೆಡಬ್ಲ್ಯೂಜೆವಿ) ಸಂಘದ ತಾಲೂಕು ಘಟಕಕ್ಕೆ ರವಿ ಬುರನೋಳ ಎಂ.ಟಿ.ಪಲ್ಲಿ ಅಧ್ಯಕ್ಷರಾಗಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಜಗದೀಶಕುಮಾರ ಭೂಮ ಅವರನ್ನು ಆಯ್ಕೆ ಮಾಡಲಾಗಿದೆ.ಸಂಘದ ರಾಜ್ಯ ಘಟಕದ ಅಧ್ಯಕ್ಷ ಮಲ್ಲಿಕಾರ್ಜು ಬಂಗ್ಲೆ ಅವರು ಇಬ್ಬರಿಗೂ ಪ್ರಮಾಣಪತ್ರ ನೀಡಿ, ಸಂಘದ ಸಿದ್ಧಾಂತಗಳ ಪಾಲನೆಯಾಗಿ ಪತ್ರಕರ್ತರ ಹಾಗೂ ಸಮಾಜದ ಶ್ರೇಯಸ್ಸಿಗೆ ನಿಯಮಾನುಸಾರ ಕಾರ್ಯನಿರ್ವಹಿಸುವಂತೆ ನಿರ್ದೇಶನ ನೀಡಿದ್ದಾರೆ.ಪಟ್ಟಣದ ಮಹಾತ್ಮ ಬಸವೇಶ್ವರ ಫಲಕ, ನಿಜ ಶರಣ ಅಂಬಿಗರ ಚೌಡಯ್ಯ ಫಲಕ, ಕನಕದಾಸ ಫಲಕ, ಸಂವಿಧಾನ ಶಿಲ್ಪಿ ಡಾ. ಬಿ. ಅರ್.ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನ್ ರಾಮ್ ಅವರ ಪುತ್ಥಳ್ಳಿಗಳಿಗೆ ಮಾಲಾರ್ಪಣೆ ಮಾಡಲಾಯಿತು.ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ಎಂ.ಬಿ. ನಾಯ್ಕಿನ್, ಮಲ್ಲಿಕಾರ್ಜುನ ಚಪೆಟ್ಲಾ, ಬಸಪ್ಪ ಸಂಜನೋಳ, ಬಸವರಾಜ ಅಲೇಮನಿ, ಲಕ್ಷ್ಮಣ, ಸಾಬಪ್ಪ ಕೆ. ಚಪೆಟ್ಲಾ, ಹೈಮದ್, ಜಾವೇದ್ ,ಹಿರಿಯ ರಾಜಕೀಯ ಮುಖಂಡರಾದ ಕೆ. ದೇವದಾಸ, ಆಶನ್ನ ಬುದ್ಧ, ರಾಜರಮೇಶಗೌಡ, ಲಿಂಗಪ್ಪ ತಾಂಡೂರಕರ್,ಲಾಲಪ್ಪ ತಲಾರಿ, ಗುರುನಾಥ ತಲಾರಿ, ಶ್ರೀನಿವಾಸ ಯಾದ,ಶೋಕ್ ಶನಿವಾರಂ, ಶ್ರೀಕಾಂತ್ ತಲಾರಿ ಹಾಜರಿದ್ದರು.

## ಮೈಲಾರಲಿಂಗೇಶ್ವರ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ರಚನೆಗೆ ನಿರಂತರ ಪ್ರಯತ್ನ: ಶಾಸಕ ತುನ್ನೂರ್

- ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ತಾಲೂಕಿನ ಮೈಲಾಪುರ ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ರಚನೆ ಕುರಿತಂತೆ ಸರ್ಕಾರದ ಮಟ್ಟದಲ್ಲಿ ನಿರಂತರ ಪ್ರಯತ್ನಿಸುತ್ತಿರುವುದಾಗಿ ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಹೇಳಿದರು. ಮೈಲಾರಲಿಂಗೇಶ್ವರ ದೇವಸ್ಥಾನದ ವ್ಯಾಪ್ತಿಯಲ್ಲಿ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ, ಕಾರ್ಯನಿರ್ವಾಹಕ ಅಧಿಕಾರಿಗಳ ನೂತನ ದೇವಸ್ಥಾನ ಕಾರ್ಯಾಲಯ ಉದ್ಘಾಟಿಸಿ, ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ರಚನೆ ಈ ಭಾಗದ ನಾಗರಿಕರ,ಭಕ್ತರ ಬಹುದಿನಗಳ ಬೇಡಿಕೆ-ಯಾಗಿದೆ.ಈಗಾಗಲೇ ಈ ಕುರಿತು ಸರ್ಕಾರದ ಮಟ್ಟದಲ್ಲಿ ಪ್ರಯತ್ನಗಳನ್ನು ಆರಂಭಿಸಿರುವುದಾಗಿ ತಿಳಿಸಿದ ಅವರು, ಕೆಲವು ಕಾನೂನು ತೊಡಕುಗಳಿಂದ ಇದು ಸಾಧ್ಯವಾಗಿಲ್ಲ . ಪ್ರಯತ್ನಗಳನ್ನು ನಿರಂತರ ಮುಂದುವರೆಸುವುದಾಗಿ ಅವರು ತಿಳಿಸಿದರು. ಈ ಬಾರಿ ಶ್ರೀ ಮೈಲಾರಲಿಂಗೇಶ್ವರ ಜಾತ್ರೆ ಅಂಗವಾಗಿ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ.ಸುಮಾರು 30 ಲ.ರೂ ವೆಚ್ಚದಲ್ಲಿ ನಿರ್ಮಿತಿ ಕೇಂದ್ರದಿಂದ ನಿರ್ಮಿಸಲಾದ ಈ ಮೂರು ಅಂತಸ್ತಿನ ಕಟ್ಟಡವನ್ನು ಇಂದು ಉದ್ಘಾಟಿಸಲಾಗಿದೆ. ಈ ಭಾಗದ ಸರ್ವಾಂಗೀಣ ಅಭಿವೃದ್ಧಿಗೆ ಪ್ರಯತ್ನಿಸುವುದಾಗಿ ಅವರು ತಿಳಿಸಿದರು. ಶ್ರೀ ಮೈಲಾಪುರ ಜಾತ್ರೆಗೆ ಲಕ್ಷಾಂತರ ಜನ ಆಗಮಿಸುವುದರಿಂದ ಆರಂಭ ಹಾಗೂ ಜಾತ್ರಾ ಕೊನೆಯಲ್ಲಿ ಸ್ವಚ್ಛತೆಗೆ ವಿಶೇಷ ಆದ್ಯತೆ ನೀಡಬೇಕು. ವಿಶೇಷವಾಗಿ ಸರಪಳಿ ಹರಿಯುವ ಪದ್ಧತಿ ಸಂದರ್ಭದಲ್ಲಿ, ಜಾತ್ರೆ ವ್ಯಾಪ್ತಿಯಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್, ಆರೋಗ್ಯ, ಅಗ್ನಿಶಾಮಕ ಇಲಾಖೆ,ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ ಸಿಬ್ಬಂದಿಗಳಿಂದ ಅವಶ್ಯಕ ಕ್ರಮ, ಶೌಚಾಲಯಗಳ ಸೂಕ್ತ ವ್ಯವಸ್ಥೆ ಮಾಡುವಂತೆ ಅವರು ತಿಳಿಸಿದರು. ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅವರು ಮಾತನಾಡಿ, ಶ್ರೀ ಮೈಲಾರಲಿಂಗೇಶ್ವರದೇವಸ್ಥಾನ ಅಭಿವೃದ್ಧಿ ಪ್ರಸ್ತಾವನೆ ಸರ್ಕಾರದ ಮಟ್ಟದಲ್ಲಿ ಇದೆ.ಕಂದಾಯ, ಪಶುಸಂಗೋಪನೆ,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,ಗ್ರಾಮ ಪಂಚಾಯತ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸೂಕ್ತ ಕ್ರಮ ಗಳನ್ನು ಕೈಗೊಳ್ಳುತ್ತಿದ್ದಾರೆ. ಕೆರೆ ಭಾಗದಲ್ಲಿ ಎಚ್ಚರಿಕೆ ನೋಟಿಸ್ ಅಳವಡಿಸಲಾಗಿದೆ. ಮಹಿಳೆಯರು, ಮಕ್ಕಳು,ಹಿರಿಯ ನಾಗರಿಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.ಇದೇ ಸಂದರ್ಭದಲ್ಲಿ ಅವರು ಜಾತ್ರೆ ವ್ಯಾಪ್ತಿಯಲ್ಲಿ ಕೈಗೊಂಡ ಮುಂಜಾಗ್ರತಾ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ ಮಲ್ಲಿಕಾರ್ಜುನ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರಣೇಶ್, ಡಿವೈಎಸ್ ಪಿ ಭರತ ತಳವಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ತಿಪ್ಪಣ್ಣ ಶಿರಸಗಿ, ತಹಸೀಲ್ದಾರ ಸುರೇಶ್ ಅಂಕಲಗಿ, ಧರ್ಮದತ್ತಿ ಇಲಾಖೆಯ ಸಹಾಯಕ ನಿರ್ದೇಶಕ ವಿಶ್ವನಾಥ, ಮಹದೇವಪ್ಪ ಪೂಜಾರಿ ಉಪಸ್ಥಿತರಿದ್ದರು.

## ಐ.ಎ.ಎಸ್ ಮತ್ತು ಕೆ.ಎ.ಎಸ್ ಪರೀಕ್ಷೆಗಳಿಗೆ ತರಬೇತಿ

- ಮಲ್ಲಮ್ಮ ನುಡಿ ವಾರ್ತೆ ಕಾರವಾರ:

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಕೇಂದ್ರ ಲೋಕ ಸೇವಾ ಆಯೋಗದವರು ನಡೆಸಲಿರುವ ಐಎಎಸ್ ಹಾಗೂ ಕರ್ನಾಟಕ ಲೋಕ ಸೇವಾ ಆಯೋಗದವರು ನಡೆಸಲಿರುವ ಕೆಎಎಸ್ ಮತ್ತಿತರ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 50 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಆಸಕ್ತರು ಜ.17 ರೊಳಗಾಗಿ ಬೆಳಗ್ಗೆ 10 ಗಂಟೆಯಿಂದ ಸಂಜೆ 4.30 ಗಂಟೆಯವರೆಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು 0821-2515944 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದೆಂದು ಕರಾಮುವಿ ಕುಲಸಚಿವ ಪ್ರೊ.ನವೀನ್‌ಕುಮಾರ ಎಸ್.ಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರ ಬದುಕಿಗೆ, ಪ್ರಾಣಿಗಳ ಜೀವಕ್ಕೆ ಕಂಟಕವಾದ ಸಕ್ಕರೆ ಕಾರ್ಖಾನೆ



- ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ವಡಗೇರಾ ತಾಲೂಕಿನ ತುಮಕೂರು ಗ್ರಾಮದ ಕೋರ್ ಗ್ರೀನ್ ಸಕ್ಕರೆ ಕಾರ್ಖಾನೆಯು ಕಲುಷಿತ ನೀರು ತ್ಯಾಜ್ಯವನ್ನು ಹಳ್ಳದ ಮೂಲಕ ಕೃಷ್ಣಾ ನದಿಗೆ ಹರಿಬಿಡುತ್ತಿದ್ದು ಇದರಿಂದ ಜನ ಜಾನುವಾರುಗಳಿಗೆ ಜೀವಕ್ಕೆ ಕಂಟಕವಾಗಿದೆ ಕೂಡಲೆ ಕಾರ್ಖಾನೆ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ರಾಜ್ಯ ರೈತ ಸಂಘ ಹಸಿರು ಸೇನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ರೆಡ್ಡಿ ಚೆನ್ನೂರ ಒತ್ತಾಯಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ತುಮಕೂರು ಗ್ರಾಮದಲ್ಲಿರುವ ಕೋರ್ ಗ್ರೀನ್ ಸಕ್ಕರೆ ಕಾರ್ಖಾನೆಯ ಕಲುಷಿತ ನೀರು ತ್ಯಾಜ್ಯಗಳನ್ನು ಕೃಷ್ಣಾ ನದಿಗೆ ಸುಮಾರು ವರ್ಷಗಳಿಂದ ಹರಿ[ಸು]ತ್ತಿದೆ ಇದರಿಂದ ನದಿಯ [ನೀರು ಕ]ಲುಷಿತಗೊಳ್ಳುತ್ತಿದೆ ಈ ನೀರು ಸೇವನೆಯಿಂದ ಜಲಚರ ಪ್ರಾಣಿಗಳು ಹಾಗೂ ದನಕರುಗಳು ಸಾವನ್ನಪ್ಪುತ್ತಿವೆ ಆದರೆ ಸಂಬಂಧಿಸಿದ ಪರಿಸರ ಮಾಲಿನ್ಯ ಇಲ[ಾಖೆ] ಅಧಿಕಾರಿಗಳು ಮಾತ್ರ ಕುಳಿತಿದ್ದು ಕಾರ್ಖಾನೆಯೊಂದಿಗೆ ಅಧಿಕಾರಿಗಳು ಶಾಮೀಲಾಗಿರುವ ಶಂಕೆ ವ್ಯಕ್ತವಾಗುತ್ತಿದೆ ಎಂದು ಅವರು ಆರೂಪಿಸಿದ್ದಾರೆ. ಕಾರ್ಖಾನೆಯತುಂಬಾ ವಿಷಕಾರಿ ಗಾಳಿ ಮತ್ತು ಕಲುಷಿತ ನೀರಿನಿಂದ ಕಾರ್ಖಾನೆಗೆ ಸುತ್ತು ಮುತ್ತಲು ಗ್ರಾಮಗಳು ನರಕಯಾತನೆ ಅನುಭವಿಸುತ್ತಿದ್ದು ನಾನಾ ರೋಗಗಳಿಗೆ ತುತ್ತಾಗುತ್ತಿದ್ದಾರೆ, ಆದರೆ ಸತ್ತರೆ ಕಾರ್ಖಾನೆ ಆಡಳಿತ ಮಂಡಳಿ ಮಾತ್ರ ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ಯಾವುದನ್ನು ಲೆಕ್ಕಿಸದೆ ತಮಗೆ ಇಚ್ಛೆ ಬಂದಂತೆ ವರ್ತಿಸುತ್ತಿದ್ದಾರೆ, ಕೃಷ್ಣಾ ನದಿಗೆ ನೀರು ಹರಿಬಿಡುತ್ತಿರುವುದರಿಂದ ಮೀನು ಜಲಚರ ಪ್ರಾಣಿಗಳ ಮಾರಣಹೋಮ ನಡೆಯುತ್ತಿದೆ, ನದಿಯ ನೀರು ಸಂಪೂರ್ಣವಾಗಿ ಮಲಿನವಾಗುತ್ತಿದೆ ಕೂಡಲೇ ಸರ್ಕಾರ ಮತ್ತು ಜಿಲ್ಲಾಡಳಿತ ಎಚ್ಚೆತ್ತುಕೊಂಡು ನದಿಗೆ ನೀರು ಹರಿಯುವುದನ್ನು ತಡೆಯುವುದರ ಜೊತೆಗೆ ಸಕ್ಕರೆ ಕಾರ್ಖಾನೆಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು, ಒಂದು ವೇಳೆ ನಿರ್ಲಕ್ಷ ವಹಿಸಿದ್ದಲ್ಲಿ ರಾಜ್ಯ ರೈತ ಸಂಘ ಹಸಿರು ಸೇನೆ ರಾಜ್ಯಾಧ್ಯಕ್ಷರಾದ ಚೂನಪ್ಪ ಪೂಜಾರಿ ಹಾಗೂ ರಾಜ್ಯ ಕಾರ್ಯಾಧ್ಯಕ್ಷರಾದ ಮಹೇಶ್ ಪಾಟೀಲ್ ಸುಬೇದಾರ್ ನೇತೃತ್ವದಲ್ಲಿ ಕೋರ್ ಗ್ರೀನ್ ಸಕ್ಕರೆ ಕಾರ್ಖಾನೆ ವಿರುದ್ಧ ಉಗ್ರ ಹೋರಾಟ ಮಾಡುವುದಾಗಿ ರಾಜ್ಯ ರೈತ ಸಂಘ ಹಸಿರು ಸೇನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ರೆಡ್ಡಿ ಚೆನ್ನೂರ ಎಚ್ಚರಿಸಿದ್ದಾರೆ.





## ಸೈಕ್ಲಿಂಗ್ ಮ್ಯಾರಥಾನ್

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಜಿಲ್ಲೆಯಲ್ಲಿ ಜನವರಿ-2026ರ ಮಾಹೆಯಲ್ಲಿ ಜರುಗುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಕಾರ್ಯಕ್ರಮದಲ್ಲಿ ವಿವಿಧ ಕ್ರೀಡೆಗಳನ್ನು ಆಯೋಜಿಸಲಾಗಿದೆ.

ಜನವರಿ 25ರ ಬೆಳಗ್ಗೆ 9 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸೈಕ್ಲಿಂಗ್ ಮ್ಯಾರಥಾನ್ ಸ್ಪರ್ಧೆ ಆಯೋಜನೆ ಮಾಡಲಾಗಿದೆ. ಆಸಕ್ತರು ಈ ಸ್ಪರ್ಧೆಯ ನೋಡಲ್ ಅಧಿಕಾರಿಗಳಾದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರ ಮೊಬೈಲ್ ಸಂಖ್ಯೆ: 9972316898 ಅಥವಾ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್ ಮೊಬೈಲ್ ಸಂಖ್ಯೆ: 9448427601ಗೆ ಸಂಪರ್ಕಿಸಿ ಹೆಸರು ನೋಂದಾಯಿಸಬಹುದಾಗಿದೆ.

ಈ ಕ್ರೀಡೆಗಳಲ್ಲಿ ಆಸಕ್ತರು ಭಾಗವಹಿಸಿ ರಾಯಚೂರು ಜಿಲ್ಲೆ ಹೆಮ್ಮೆಪಡುವಂತಹ ಕ್ರೀಡೋತ್ಸವ ಮೂಡಿಬರಲು ಸಹಕರಿಸಿ ರಾಯಚೂರು ಉತ್ಸವವನ್ನು ಯಶಸ್ವಿಗೊಳಿಸಲು ಎಲ್ಲಾ ಕ್ರೀಡಾಪಟುಗಳು ಮತ್ತು ಸಾರ್ವಜನಿಕರಲ್ಲಿ ವಿನಂತಿಸಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಡಿ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2019-20 ಹಾಗೂ 2024-25ನೇ ಸಾಲಿನ ಎಸ್.ಎಫ್.ಸಿ ನಿಧಿಯ ಶೇ.5ರ ಪರಿಷ್ಕೃತ ಕ್ರಿಯಾ ಯೋಜನೆಯಡಿ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಡಿ ಪಾಲಿಕೆ ವ್ಯಾಪ್ತಿ ಪ್ರದೇಶದಲ್ಲಿ ಬರುವ ಅರ್ಹ ಫಲಾನುಭವಿಗಳಿಗೆ ವಿವಿಧ ಸೌಲಭ್ಯ ಒದಗಿಸಲು ಅರ್ಜಿ ಆಹ್ವಾನಿಸಲಾಗಿದೆ.

2019-20 ಸಾಲಿನ ಶೇ.5ರಡಿ ಪರಿಶಿಷ್ಟ ಜಾತಿಯ ವಿಕಲಚೇತನರ ಮನೆಯ ಮೇಲ್ಚಾವಣೆ ದುರಸ್ಥಿಗಾಗಿ 2ಲಕ್ಷ ರೂ.ಗಳು ಹಾಗೂ 2024-25ನೇ ಸಾಲಿನ ಶೇ.5ರಡಿ ಪರಿಶಿಷ್ಟ ಜಾತಿಯ ವಿಕಲಚೇತನರ ಮನೆಯ ಮೇಲ್ಚಾವಣೆ ದುರಸ್ಥಿಗಾಗಿ 1.15ಲಕ್ಷ ರೂ.ಗಳನ್ನು ಕಾಯ್ದಿಸಲಾಗಿದೆ.

ದಾಖಲಾತಿಗಳು: ನಿಗದಿತ ನಮೂನೆಯಲ್ಲಿ ಅರ್ಜಿ, ದೃಢೀಕೃತ ಜಾತಿ ಮತ್ತು ಅದಾಯ ಪ್ರಮಾಣ ಪತ್ರ (ಪ್ರಸಕ್ತ ಚಾಲ್ತಿ ಸಾಲು), ದೃಢೀಕೃತ ವಾಸಸ್ಥಳಕ್ಕೆ ಗುರುತಿನ ಚೀಟಿ/ರೇಷನ್ ಕಾರ್ಡ್, ಪಾಸ್ ಫೋಟೋ ಅಳತೆಯ 2 ಭಾವ ಚಿತ್ರ, ಬ್ಯಾಂಕ್ ಪಾಸ್ ಪುಸ್ತಕ್ ಹಾಗೂ ಐ.ಎಫ್.ಎಸ್.ಸಿ ಕೋಡ್‌ನೊಂದಿಗೆ ಬ್ಯಾಂಕ್ ವಿವರ, ವೈದ್ಯರಿಂದ ಪಡೆದ ಗುರುತಿನ ಚೀಟಿ/ಯು.ಡಿ.ಎ. ಕಾರ್ಡ್, ವಿಕಲಚೇತನರ 1 ಭಾವಚಿತ್ರ, ಮನೆಯ ದುರಸ್ಥಿ ಮೇಲ್ಚಾವಣೆ ಛಾಯಾಚಿತ್ರ ಹಾಗೂ ಮೊಬೈಲ್ ನಂಬರ್‌ನೊಂದಿಗೆ ಜನವರಿ 17ರೊಳಗಾಗಿ ಸಲ್ಲಿಸಬಹುದಾಗಿದೆ. ಅವದಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳು ಸಲ್ಲಿಸದೇ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೇ ನೇರವಾಗಿ ವಿಭಾಗದ ಸಿಬ್ಬಂದಿಯವರು ತಿರಸ್ಕೃತ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ನೋಟಿಸ್ ಬೋರ್ಡ್ ನೋಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವೇಶಕ್ಕೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ ಡಾ॥ಎ.ಪಿ.ಜೆ, ಅಬ್ದುಲ್ ಕಲಾಂ ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಕ್ಕೆ ಸೇವಾಸಿಂಧು ಮೂಲಕ ಆನ್ ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ರಾಯಚೂರು (ಬೋಳಮಾನದೊಡ್ಡಿ ರಸ್ತೆ), ಗಿಲ್ಲೇಸೂಗೂರು (ಚಂದ್ರಬಂಡಾ ರಸ್ತೆ), ಯರಮರಸ್ ಕ್ಯಾಂಪ್, ಗಿಲ್ಲೆಸುಗೂರು ಕ್ಯಾಂಪ್, ಮಾನವಿ, ಸಿಂಧನೂರು, ಚನ್ನಹಳ್ಳಿ, ಮಸ್ಕಿ, ಲಿಂಗಸೂಗೂರು, ಸಿರವಾರ, ದೇವದುರ್ಗ ಮತ್ತು ಡಾ॥ಎ.ಪಿ.ಜೆ, ಅಬ್ದುಲ್ ಕಲಾಂ ವಸತಿ ಶಾಲೆ, ಯರಮರಸ್ ಕ್ಯಾಂಪ್ ರಾಯಚೂರಿನಲ್ಲಿ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರೆ ವರ್ಗದವರಿಗೆ ಮೀಸಲಿರಿಸಲಾಗಿದೆ.ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮಿತಿ 1,00,000 ರೂ.ಕ್ಕೆ ಮೀತಿಯಲ್ಲಿರಬೇಕು. ಹಾಗೂ ಹಿಂದುಳಿದ ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯವು 2,50,000 ರೂ.ಮಿತಿಯೊಳಗಿರತಕ್ಕದ್ದು, ಪ್ರಸ್ತುತ ಕರ್ನಾಟಕದ ಸರ್ಕಾರದ/ಅಂಗೀಕೃತ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪ.ಜಾತಿ/ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಆನ್‌ಲೈನ್ ಸೇವಾಸಿಂಧು ವೆಬ್‌ಸೈಟ್ ವಿಳಾಸ: Website:https://sevasindhuservices.karnataka.gov.in ನಲ್ಲಿ ಫೆಬ್ರವರಿ 10ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ: 8277799990, 08022535902, ರಾಯಚೂರು ಮೊಬೈಲ್ ನಂಬರ್: 8496098631, 9731028420, 9731341815, 9686853719, 6361866571, 9108175899, 9902906266 ಮಾನವಿ, ಸಿರವಾರ: 7411771075, 886733478, ದೇವದುರ್ಗ 9731794252, 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು: 8217621732, 9740871306, 8660879712ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸಲು ಜ.15ರವರೆಗೆ ಕಾಲಾವಕಾಶ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಜಿಲ್ಲೆಯ ಸಿರವಾರ, ಮಾನವಿ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರ ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶದನ್ವಯ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಿ ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ. ಅರ್ಜಿ ಸಲ್ಲಿಸುವಾಗ ವೆಬ್‌ಸೈಟ್‌ನಲ್ಲಿ ಒಟ್ಟು 4 ವಿವಿಧ ಹಂತಗಳಿದ್ದು, ಅರ್ಜಿ ಸಲ್ಲಿಸುವ 4 ಹಂತಗಳನ್ನು ಪೂರ್ಣಗೊಳಿಸದೇ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ 2026ರ ಜನವರಿ 15ರವರೆಗೆ ಅರ್ಜಿಗಳನ್ನು ಪೂರ್ಣಗೊಳಿಸಲು ಅವಕಾಶ ನೀಡಿಲಾಗಿದೆ.ಒಂದನೇ ಹಂತ: ಆನ್‌ಲೈನ್ ತಂತ್ರಾಂಶದಲ್ಲಿ ನಿಗಧಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು, ಎರಡನೇ ಹಂತ: ತಮ್ಮ ಭಾವಚಿತ್ರ ಸಹಿಯನ್ನು ಅಪ್‌ಲೋಡ್ ಮಾಡುವುದು, ಮೂರನೇ ಹಂತ: ತಮ್ಮ ದಾಖಲಾತಿಗಳನ್ನು ಅಪ್‌ಲೋಡ್ ಮಾಡುವುದು, ನಾಲ್ಕನೇ ಹಂತ: ತಮ್ಮ ಆಧಾರ್ ಸಂಖ್ಯೆ ನಮೂದಿಸಿ, ಇ-ಹಸ್ತಾಕ್ಷರದೊಂದಿಗೆ ಅರ್ಜಿಯನ್ನು ಜನವರಿ 15 ರೊಳಗಾಗಿ ವೆಬ್‌ಸೈಟ್ ವಿಳಾಸ: https://karnemakaone.kar.nic.in/abcd/ನಲ್ಲಿ ಪೂರ್ಣಗೊಳಿಸಬೇಕು. ಆನ್‌ಲೈನ್‌ನಲ್ಲಿ ಅಪೂರ್ಣ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಸಿರವಾರ, ಮಾನವಿ ಇವರನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆಂದು ಸಿರವಾರ, ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇತಿಹಾಸ ಬರೆದ ಮಹಾನಗರ ಪಾಲಿಕೆಯ ಸ್ವಚ್ಛತಾ ಓಟ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಸ್ವಚ್ಛ ಭಾರತ ಮಿಷನ್ ಹಾಗೂ ರಾಯಚೂರು ಉತ್ಸವ-2026ರ ಅಂಗವಾಗಿ ಜನವರಿ 12ರಂದು ರಾಯಚೂರು ಮಹಾನಗರ ಪಾಲಿಕೆ ಹಾಗೂ ಜಿಲ್ಲಾಡಳಿತದ ಸಂಯುಕ್ತ ಆಶ್ರಯದಲ್ಲಿ ಸ್ವಚ್ಛತಾ ಓಟ ಭವ್ಯವಾಗಿ ನಡೆಯಿತು.ಸಚಿವರು, ಸಂಸದರು, ಶಾಸಕರ ಮಾರ್ಗದರ್ಶದಡಿಯಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಹಾಗೂ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ವಿಶೇಷವಾಗಿ ರೂಪಿಸಿದ ಈ ಸ್ವಚ್ಛತಾ ಓಟವು ಯುವಜನತೆಗೆ ಹೊಸ ಶಕ್ತಿ, ಪ್ರೇರಣೆ ಹಾಗೂ ಜಾಗೃತಿ ನೀಡಿತು. ರಾಯಚೂರು ಜನತೆಯಲ್ಲಿ ತಮ್ಮ ನಗರವನ್ನು ಸ್ವಚ್ಛ, ಸುಂದರ ಹಾಗೂ ಆರೋಗ್ಯಕರವಾಗಿಸುವ ಸಂಕಲ್ಪವನ್ನು ಮತ್ತಷ್ಟು ಬಲಪಡಿಸಿತು.

ಕಾರ್ಯಕ್ರಮಕ್ಕೆ ಸಂಸದರಾದ ಜಿ. ಕುಮಾರ್ ನಾಯಕ್ ಅವರು ನೇತೃತ್ವ ವಹಿಸಿ ಸ್ವಚ್ಛತಾ ಓಟಕ್ಕೆ ಚಾಲನೆ ನೀಡಿದರು.

ಈ ವೇಳೆ ಸಂಸದರು ಮಾತನಾಡಿ, ಸ್ವಾಮಿ ವಿವೇಕಾನಂದರ ಮೌಲ್ಯಗಳು, ಸದೃಢ ಶರೀರ ಮತ್ತು ಮನಸ್ಸಿನ ಮಹತ್ವ ಮತ್ತು ಸ್ವಚ್ಛ, ಆರೋಗ್ಯಕರ ವಾತಾವರಣ ನೆನಪಿಸಿದರು.

ಸ್ವಚ್ಛತಾ ಓಟದಲ್ಲಿ 3000ಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. ಶಾಲಾ ವಿದ್ಯಾರ್ಥಿಗಳಿಂದ- 65ರ ವಯೋಮಾನದವರು ಓಟದಲ್ಲಿ ಕಂಡು ಬಂದರು. ವಿದ್ಯಾರ್ಥಿಗಳು, ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡರು. ರಾಯಚೂರು ಇತಿಹಾಸದಲ್ಲೇ ಮೊದಲ ಬಾರಿಗೆ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಜನರು ಮ್ಯಾರಥಾನ್ ಓಟಕ್ಕೆ ಸ್ವಯಂಪ್ರೇರಿತವಾಗಿ ಭಾಗವಹಿಸಿದ್ದು ಮಹತ್ವದ ಸಾಧನೆಯಾಗಿ ರಾಯಚೂರು ಇತಿಹಾಸದಲ್ಲಿ ದಾಖಲಾಯಿತು.

ಈ ಸ್ವಚ್ಛತಾ ಓಟವು ಸಾರ್ವಜನಿಕರಲ್ಲಿ ಸ್ವಚ್ಛತೆಯ ಅರಿವು, ಪರಿಸರ ಸಂರಕ್ಷಣೆ, ಆರೋಗ್ಯಕರ ಜೀವನ ಶೈಲಿ ಹಾಗೂ ಪಾಲಿಕೆಯೊಂದಿಗೆ ನಾಗರಿಕರ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸಿದೆ. ಕಾರ್ಯಕ್ರಮಕ್ಕೆ ದೊರೆತ ವ್ಯಾಪಕ ಜನಬೆಂಬಲಕ್ಕೆ ಸಾರ್ವಜನಿಕರು ಸರ್ಕಾರ ಹಾಗೂ ಮಹಾನಗರ ಪಾಲಿಕೆಯ ಈ




ಮಹತ್ವದ ಮುಂದಾಳತ್ವಕ್ಕೆ ಕೃತಜ್ಞತೆ ವ್ಯಕ್ತಪಡಿಸಿದರು.ಈ ಸ್ವಚ್ಛತಾ ಓಟದ ಮೂಲಕ ರಾಯಚೂರು ಜನತೆ ತಮ್ಮ ನಗರಕ್ಕಾಗಿ ಹೊಂದಿರುವ ಜವಾಬ್ದಾರಿ, ಒಗ್ಗಟ್ಟು ಮತ್ತು ಅಪಾರ ಶಕ್ತಿಯನ್ನು ಸ್ಪಷ್ಟವಾಗಿ ಪ್ರದರ್ಶಿಸಿದರು.ವಿಭಿನ್ನ ವಯೋಮಾನದವರು,

ಹಿನ್ನೆಲೆಯವರು ಹಾಗೂ ವೃತ್ತಿಯವರು ಒಂದೇ ಗುರಿಗಾಗಿ ಒಟ್ಟಾಗಿ ಭಾಗವಹಿಸಿರುವುದು, ರಾಯಚೂರು ಒಂದು ಜಾಗೃತ, ಹಾಗೂ ಚೈತನ್ಯಭರಿತ ನಗರ ಎಂಬುದನ್ನು ಸಾಬೀತುಪಡಿಸಿತು.

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಮಾನವ ಸರಪಳಿಯನ್ನು "ರಾಯಚೂರು ಉತ್ಸವ2026" ಎಂಬ ರೂಪದಲ್ಲಿ ವಿನ್ಯಾಸಗೊಳಿಸಲಾಗಿದ್ದು, ಅದನ್ನು ಡ್ರೋನ್ ಮೂಲಕ ಚಿತ್ರೀಕರಿಸಲಾಯಿತು. ಈ ದೃಶ್ಯವು ರಾಯಚೂರು ಉತ್ಸವಕ್ಕೆ ಮತ್ತಷ್ಟು ಉತ್ಸಾಹ ಮತ್ತು ಜೋಷ್ ನೀಡಿತು.ಈ ಮೂಲಕ ರಾಯಚೂರು ನಗರವು ಒಗ್ಗಟ್ಟಿನ ಶಕ್ತಿ ಮತ್ತು ಸಕಾರಾತ್ಮಕ ಚಿಂತನೆಯೊಂದಿಗೆ ಮುಂದಿನ ಹೆಜ್ಜೆ ಇಡುತ್ತಿದೆ ಎಂಬ ಸಂದೇಶ ಸ್ಪಷ್ಟವಾಗಿ ಮೂಡಿಬಂದಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷು ಗಿರಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಹಾಗೂ ಸರಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾಂವತಗೇರಿ, ಪಾಲಿಕೆಯ ಜೊನಲ್ 1ರ ಆಯುಕ್ತರಾದ ಪುಲಮ್ ಸಿಂಗ್, ಉಪ ಆಯುಕ್ತರಾದ ಸಂತೋಷ ರಾಣಿ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮ,

ಅರಕೇರಾ ತಹಶಿಲ್ದಾರ್ ಅಮರೇಶ ಬಿರಾದಾರ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ ನಾಯಕ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಓಟದಲ್ಲಿ ಭಾಗಿಯಾದರು. ಮುಖಂಡರಾದ ರವಿ ಭೋಸರಾಜ್, ಜಯಣ್ಣ ಸೇರಿದಂತೆ ಜಿಲ್ಲೆಯ ಅನೇಕ ಗಣ್ಯಮಾನ್ಯರು ಭಾಗಿಯಾಗಿ ಸ್ವಚ್ಛತಾ ಓಟಕ್ಕೆ ಸ್ಪೂರ್ತಿ ನೀಡಿದರು.

## ಎಂ.ಎಸ್.ಪಿ.ಎಲ್ ಸಂಸ್ಥೆಯಿಂದ ಉಚಿತ ಎಂಬ್ರಾಯ್ಡರಿ ತರಬೇತಿ ಕೇಂದ್ರ ಉದ್ಘಾಟನೆ




• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ (ಹೊಸಪೇಟೆ):**

ನಗರದ ಹಂಪಿ ರಸ್ತೆಯ 6ನೇ ವಾರ್ಡ್ ನಲ್ಲಿ ಎಂ.ಎಸ್.ಪಿ.ಎಲ್ ಸಂಸ್ಥೆಯ ವತಿಯಿಂದ ಉಚಿತ ಎಂಬ್ರಾಯ್ಡರಿ ತರಬೇತಿ ಕೇಂದ್ರವನ್ನು ಉದ್ಘಾಟಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಮಾಜ ಸೇವಾ ವಿಭಾಗದ ಉಪಾಧ್ಯಕ್ಷರಾದ ಎಚ್.ಕೆ. ರಮೇಶ್ ಅವರು, ಎಂ.ಎಸ್.ಪಿ.ಎಲ್ ಸಂಸ್ಥೆ ಈಗಾಗಲೇ ಹೊಸಪೇಟೆ ನಗರದಲ್ಲಿ ಟೈಲರಿಂಗ್, ಕಂಪ್ಯೂಟರ್, ಸ್ಪೋಕನ್ ಇಂಗ್ಲಿಷ್, ಸೌಂದರ್ಯ ವರ್ಧಕ ಹಾಗೂ ಎಂಬ್ರಾಯ್ತರಿ ತರಬೇತಿಗಳನ್ನು ನೂರಾರು ಮಹಿಳೆಯರಿಗೆ ನೀಡಿದ್ದು, ಅವರಲ್ಲಿ ಅನೇಕರು ಆರ್ಥಿಕವಾಗಿ ಸ್ವಾವಲಂಬಿ ಜೀವನ ನಡೆಸುತ್ತಿರುವುದು ಸಂತಸದ ವಿಷಯವಾಗಿದೆ ಎಂದರು. ಈಗ ಆರಂಭವಾಗಿರುವ ಈ ಉಚಿತ ಎಂಬ್ರಾಯ್ತರಿ ತರಬೇತಿಯ ಸದುಪಯೋಗವನ್ನು ಮಹಿಳೆಯರು ಪಡೆದು, ತಾವುಗಳೂ ಸ್ವಾವಲಂಬಿಗಳಾಗಿ ತಮ್ಮ ಕುಟುಂಬಗಳಿಗೆ ಆಸರೆಯಾಗಬೇಕು ಎಂದು ಅವರು ತಿಳಿಸಿದರು.

ನಗರಸಭಾ ಸದಸ್ಯರಾದ ಅಬ್ದುಲ್ ಖದೀರ್ ಮಾತನಾಡಿ, ಬಡವರು ಹೆಚ್ಚಾಗಿ ವಾಸಿಸುತ್ತಿರುವ 6ನೇ ವಾರ್ಡಿನಲ್ಲಿ ಎಂ.ಎಸ್.ಪಿ.ಎಲ್ ಸಂಸ್ಥೆ ಉಚಿತ ತರಬೇತಿ ಕೇಂದ್ರವನ್ನು ಆರಂಭಿಸಿರುವುದು ನಮಗೆಲ್ಲ ಬಹಳ ಸಂತೋಷ ತಂದಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತರಬೇತಿಗೆ ಹೆಸರು ನೋಂದಾಯಿಸಿಕೊಂಡ 55 ಮಹಿಳೆಯರು ಭಾಗವಹಿಸಿದ್ದರು.ಈ ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯರಾದ ಅಬ್ದುಲ್ ಖದೀರ್, ಮಾಜಿ ನಗರಸಭಾ ಸದಸ್ಯರಾದ ವೇಣುಗೋಪಾಲ್, ಸಮಾಜ ಸೇವಾ ವಿಭಾಗದ ಉಪಾಧ್ಯಕ್ಷರಾದ ಎಚ್.ಕೆ. ರಮೇಶ್ ಹಾಗೂ ಸ್ಥಳೀಯ ಮುಖಂಡರಾದ ಚಿದಾನಂದಪ್ಪ, ಪುಷ್ಪರಾಜ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದ್ದರು.

## ಯುವಕ ಕಾಣೆ: ಪತ್ತೆಗೆ ಪೊಲೀಸರ ಮನವಿ

ರಾಯಚೂರು: ಜಿಲ್ಲೆಯ ದೇವದುರ್ಗ ತಾಲೂಕಿನ ಪಲಕನಮರಡಿ ಗ್ರಾಮದ ಶಿವಮೂರ್ತಿ ತಂದೆ ನಿಂಗಣ್ಣ (20) ಎಂಬ ಯುವಕ ರಾಯಚೂರಿನ ಯರಮರಸ್ ಕ್ಯಾಂಪನ ಬಿಸಿಎಮ್ ಇಲಾಖೆಯ ಡಿ.ದೇವರಾಜ ಅರಸು ಮೆಟ್ರಿಕ್ ನಂತರ ಬಾಲಕರ ವಸತಿದಲ್ಲಿದ್ದು, 2025ರ ಏಪ್ರಿಲ್ 13ರ ಬೆಳಿಗ್ಗೆ 09:30 ಗಂಟೆಯಿಂದ ಹಾಸ್ಟೇಲ್ ನಿಂದ ಹೊರಗಡೆ ತನ್ನ ಸ್ನೇಹಿತರ ಸಂಗಡ ಯರಮರಸ್ ಕ್ಯಾಂಪ ವರೆಗೆ ಹೋಗಿದ್ದು, ತಾನು ರಾಯಚೂರುಗೆ ಹೋಗಿ ಬರುತ್ತೇನೆ ಅಂತಹ ತನ್ನ ಸ್ನೇಹಿತರಿಗೆ ಹೇಳಿ ಹೋದವನು ಇಲ್ಲಿಯವರೆಗೆ ಹಾಸ್ಟೇಲ್‌ಗೆ ಬರದೇ ಕಾಣೆಯಾಗಿದ್ದು, ಈ ಕುರಿತು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ:57/2025ರಡಿ ಪ್ರಕರಣ ದಾಖಲಾಗಿದೆ.



ಕಾಣೆಯಾದ ಯುವಕನ ಚಹರೆ: ವಯಸ್ಸು 20, ಜಾತಿ ಕುರುಬರು, ಉದ್ಯೋಗ ವಿದ್ಯಾರ್ಥಿ, ಗೋಧಿ ಬಣ್ಣ ಮೈ ಬಣ್ಣ, ದುಂಡನೇಯ ಮುಖ, ತಲೆಯಲ್ಲಿ ಕಪ್ಪು ಕೂದಲು, ಬಿಳಿ ಬಣ್ಣದ ಲೈನ್ ಫುಲ್ ಶರ್ಟ್, ಕಪ್ಪು ಬಣ್ಣದ ಫ್ಯಾಂಟ್, ಗುಲಾಬಿ ಬಣ್ಣದ ಟವೆಲ್ ಕೊರಳಲ್ಲಿ ಧರಿಸಿದ್ದು, ಕನ್ನಡ, ಇಂಗ್ಲೀಷ್ ಭಾಷೆ ಮಾತನಾಡುತ್ತಾನೆ. ಈ ಯುವಕನ ಬಗ್ಗೆ ಸುಳಿವು ಕಂಡುಬಂದಲ್ಲಿ ಪಿ.ಎಸ್.ಐ. ರಾಯಚೂರು ಗ್ರಾಮೀಣ ಪೊಲೀಸ್ ಠಾಣೆ ಮೊಬೈಲ್ ಸಂಖ್ಯೆ: 9480803850, ಹಾಗೂ ಸಿ.ಪಿ.ಐ. ಗ್ರಾಮೀಣ ವೃತ್ತ ರಾಯಚೂರು ಮೊಬೈಲ್: 9480803832ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಗ್ರಾಮೀಣ ವೃತ್ತ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಸ್ಕಾಂ ನಗರ-2: ಇಂದು ವಿದ್ಯುತ್ ವ್ಯತ್ಯಯ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ವ್ಯಾಪ್ತಿಯ 110ಕೆವಿ 110/11ಏಗಿ, ಎಂಯುಎಸ್‌ಎಸ್, ಎಪಿಎಂಸಿ ಯಾರ್ಡ್ ಡ್ರಾಗ್‌ಹೌಸ್ ಲಿಂಕ್ ಲೈನ್ ವಿಭಜನೆ ಕಾಮಗಾರಿಯನ್ನು ಕೈಗೊಂಡ ಪ್ರಯುಕ್ತ ಜನವರಿ 13ರ ಬೆಳಿಗ್ಗೆ 10ರಿಂದ ಸಂಜೆ 5ಗಂಟೆಯ ಅಲ್ಲಮಪ್ರಭು ಕಾಲೋನಿ, ಪೋತಗಲ್ ರೋಡ, ಎಲ್.ಬಿ.ಎಸ್. ನಗರ, ಅಲಿ ಕಾಲೋನಿ, ಚಂದ್ರಬಂಡ ರಸ್ತೆ, ಆಶ್ರಯ ಕಾಲೋನಿ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ 24*7ಗ್ರಾಹಕರ ನಿರಂತರ ಸೇವಾ ಕೇಂದ್ರ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಕಾಮಗಾರಿಗಳಿಗೆ ಸಚಿವ ಎನ್.ಎಸ್.ಬೋಸರಾಜರಿಂದ ಭೂಮಿ ಪೂಜೆ



• **ಮಲ್ಲಮ್ಮ ನುಡಿ ವಾರ್ತೆ ಮಸ್ಕಿ:**

ತಾಲೂಕಿನ ನಾರಾಯಣ ನಗರ ಕ್ಯಾಂಪಿನ ಏತ ನೀರಾವರಿಗೆ ಯೋಜನೆಗೆ 2 ಕೋಟಿ ಮತ್ತು ಸಾಗರ ಕ್ಯಾಂಪಿನ ಯೋಜನೆಗೆ 2 ಕೋಟಿ ಅನುದಾನವನ್ನು ಸಣ್ಣ ನೀರಾವರಿ ಇಲಾಖೆಯಿಂದ ಬಿಡುಗಡೆಗೊಳಿಸಿ ಭೂಮಿ ಪೂಜೆ ಮಾಡಲಾಗಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಎಸ್. ಭೋಸರಾಜು ಹೇಳಿದರು.

ಬಳಗಾನೂರು ಹಳ್ಳದಲ್ಲಿ ಚೆಕ್ ಡ್ಯಾಮ್ ನಿರ್ಮಿಸಿ ಇಲ್ಲಿಂದ ನೀರನ್ನು 55 ಮತ್ತು 65 ನಂಬರಿನ ಕಾಲುವೆಗಳ ಮೂಲಕ ರೈತರ ಜಮೀನುಗಳಿಗೆ ಹರಿಸಲಾಗುತ್ತದೆ ಎಂದು ಹೇಳಿದರು.

ಈ ವೇಳೆ ಶಾಸಕ ಆರ್.ಬಸನಗೌಡ ತುರ್ವಿಹಾಳ ಮಾತನಾಡಿ, ಕ್ಷೇತ್ರದ ಒಣ ಬೇಸಾಯ

ಪ್ರದೇಶಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಸ್.ಸಿ ಮತ್ತು ಎಸ್.ಟಿ ಜನಾಂಗದ ಬಡ ರೈತರಿಗೆ ಈಗಾಗಲೇ 100 ಬೋರ್‌ವೆಲ್ ಕೊರೆಯಸಿಲಾಗಿದೆ. ಕೊನೆ ಭಾಗದ ರೈತರಿಗೆ ನಿರೋದಗಿಸುವ ಸಲುವಾಗಿ ಚೆಕ್‌ಡ್ಯಾಂ ನಿರ್ಮಿಸಿ ಚೆಕ್ ಡ್ಯಾಂನಿಂದ ರೈತರ ಹೊಲಗಳಿಗೆ ನೀರು ಹರಿಸಲಾಗುತ್ತದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಯದ್ದಲದಿನ್ನಿ, ಗ್ರಾಮೀಣ ಘಟಕದ ಅಧ್ಯಕ್ಷ ಹನುಮಂತಪ್ಪ ಮುದ್ದಾಪೂರು, ವೆಂಕಟರಡ್ಡಿ ಹಾಲಾಪೂರು ಸೇರಿದಂತೆ ಪಕ್ಷದ ಮುಖಂಡರು ಹಾಗೂ ಸ್ಥಳೀಯ ಸಾರ್ವಜನಿಕರು ಭಾಗವಹಿಸಿದ್ದರು.

# ವೈದ್ಯರ ಶಿಫಾರಸ್ಸು ಇಲ್ಲದೇ ನಿಷೇಧಿತ ಔಷಧಿಗಳ ಮಾರಾಟ ಮಾಡುವಂತಿಲ್ಲ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**

ಔಷಧಿಗಳನ್ನು ಯಾವುದೇ ಔಷಧ ಅಂಗಡಿಗಳಲ್ಲಿ ವೈದ್ಯರ ಶಿಫಾರಸ್ಸು ಹಾಗೂ ಅನುಮತಿ ಇಲ್ಲದೆ ಮಾರಾಟ ಮಾಡುವಂತಿಲ್ಲ. ಈ ಬಗ್ಗೆ ಜಿಲ್ಲೆಯ ಎಲ್ಲ ಔಷಧ ಅಂಗಡಿಗಳಿಗೆ ಕಟ್ಟುನಿಟ್ಟಿನ ಆದೇಶ ಹೊರಡಿಸಿ ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಸೂಚನೆ ನೀಡಿದರು.

ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಜಿಲ್ಲೆಯ ಮಾದಕ ವ್ಯಸನ ನಿಯಂತ್ರಣ, ಸಮಸ್ಯೆಗಳ ಪರಿಹಾರ, ಮಾದಕ ವಸ್ತುಗಳ ಸಾಗಾಣಿಕೆ ಎನ್‌ಸಿಓಆರ್‌ಡಿ(ನಾರ್ಕೋ ಕೋ-ಆರ್ಡಿನೇಷನ್ ಸೆಂಟರ್) ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಿಷೇಧಿತ ಔಷಧಿಗಳು, ನೋವು ನಿಯಂತ್ರಕ ಔಷಧಿಗಳು, ಖಿನ್ನತೆಗೆ ಸಂಬಂಧಿಸಿದ ಔಷಧಿಗಳು, ನೆಗಡಿ, ಕೆಮ್ಮಿನ ಸಿರಪ್‌ಗಳನ್ನು ಯಾವುದೇ ಔಷಧ ಅಂಗಡಿಗಳು ವೈದ್ಯರ ಶಿಫಾರಸ್ಸು ಇಲ್ಲದೇ ಯಾರಿಗೂ ಮಾರಾಟ ಮಾಡುವಂತಿಲ್ಲ. ಈ ರೀತಿಯ ಔಷಧಗಳಲ್ಲಿ ಮತ್ತು ಬರಿಸುವ ಅಂಶಗಳನ್ನು ಸೇರ್ಪಡೆ ಮಾಡಲಾಗಿರುತ್ತದೆ. ನಿಗದಿತ ಪ್ರಮಾಣದ ನಂತರ ಈ ಔಷಧಿಗಳು ಮಾದಕ ವಸ್ತು ರೂಪಕ್ಕೆ ಪರಿವರ್ತನೆಗೊಂಡು ಸೇವನೆ ಮಾಡುವವರಿಗೆ ವ್ಯಸನವಾಗಿ ಬಿಡುತ್ತವೆ. ಆದ್ದರಿಂದ ನಿಷೇಧಿತ ಔಷಧಿಗಳನ್ನು ಮಾರಾಟ ಮಾಡದಂತೆ ಔಷಧಿ ಅಂಗಡಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಪ್ರತಿ ಔಷಧ ಅಂಗಡಿಗಳಲ್ಲಿ ವೈದ್ಯರ ಮಾರ್ಗದರ್ಶನವಿಲ್ಲದೆ ಔಷಧ ಮಾರಾಟ ನಿಷೇಧ ಎಂಬ ಫಲಕಗಳನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ವೈದ್ಯಕೀಯ ಬಳಕೆಗೆ ಪೂರ್ವಾನುಮತಿ ಇಲ್ಲದೆ ಅಕ್ರಮವಾಗಿ ಮಾದಕ ಔಷಧಗಳನ್ನು ತಯಾರಿಸುತ್ತಿರುವ ಅಥವಾ ಮಾರಾಟ ಮಾಡುತ್ತಿರುವ ನೋಂದಾಯಿಸದ ಕಂಪನಿಗಳು ಹಾಗೂ ಔಷಧಾಲಯಗಳನ್ನು ಗುರುತಿಸಲು ಔಷಧ ನಿಯಂತ್ರಣ ಇಲಾಖೆಗೆ ಜಿಲ್ಲೆಯ ಎಲಲ್ ಅಧಿಕಾರಿಗಳು ಅಗತ್ಯ ಸಹಾಯ ಒದಗಿಸಬೇಕು. ಮಾದಕ ಬೆಳೆಗಳನ್ನು ಗುರುತಿಸು ಮ್ಯಾಪ್ ಡ್ರಗ್ಸ್ ಪ್ ಕುರಿತು ಎಲ್ಲಾ ಪೊಲೀಸ್ ಠಾಣೆಗಳಿಗೆ ಹಾಗೂ ಜಿಲ್ಲೆಯ ಎಲ್ಲಾ ಇಲಾಖೆಗಳಿಗಳಿಗೂ ಮುಂದಿನ ಆರು ತಿಂಗಳೊಳಗಾಗಿ ಕಡ್ಡಾಯ ತರಬೇತಿ ನೀಡಬೇಕು. ಅಕ್ರಮ ಮಾದಕ ವಸ್ತುಗಳ ಪೂರೈಕರ ಕಡಿಮೆ ಮಾಡುವ ನಿಟ್ಟಿನಲ್ಲಿ ನಿರ್ದಿಷ್ಟ ಗುರಿಗಳನ್ನು . ನಿಗದಿಪಡಿಸಬೇಕು. ಡ್ರಗ್ಸ್ ಹಾವಳಿಯನ್ನು ತಡೆಯಲು ಇಲಾಖೆಯು ಅಭಿವೃದ್ಧಿಪಡಿಸಿರುವ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಮಾಹಿತಿಯನ್ನು ಕನ್ನಡದಲ್ಲಿಯೂ ಪ್ರಕಟಿಸಲು ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ತಿಳಿಸಿದರು

ರಾಜ್ಯದಲ್ಲಿ 350 ಕ್ಕೂ ಹೆಚ್ಚು ವ್ಯಸನ ಮುಕ್ತ ಕೇಂದ್ರಗಳು ಕಾರ್ಯನಿರ್ವಹಿಸುತ್ತವೆ. ವೈದ್ಯಕೀಯ ಕಾಲೇಜುಗಳಲ್ಲಿ ಸ್ಥಾಪಿಸಿರುವ 30 ಹಾಸಿಗೆಗಳ ನಿರ್ವಹಣೆಗೆ ಸಂಬಂಧಿಸಿದ ಎಸ್‌ಒಪಿ ಸಿದ್ದಪಡಿಸಿ ಸಾರ್ವಜನಿಕರ ಉಪಯೋಗಕ್ಕೆ ಲಭ್ಯವಿರುವ ಬಗ್ಗೆ ಪ್ರಚಾರ ಮಾಡಬೇಕು. ಜಿಲ್ಲೆಯಲ್ಲಿ ಜಿಲ್ಲಾಸ್ಪತ್ರೆಯಲ್ಲಿ ಒಂದು ಹಾಗೂ ಖಾಸಗಿಯಾಗಿ ನಾಲ್ಕು ವ್ಯಸನ ಮುಕ್ತ ಕೇಂದ್ರಗಳು ಕಾರ್ಯನಿರ್ವಹಿಸುತ್ತವೆ. ಜಿಲ್ಲಾಸ್ಪತ್ರೆಯಲ್ಲಿರುವ ವ್ಯಸನಮುಕ್ತ ಕೇಂದ್ರದಲ್ಲಿ ಆಪ್ತಸಮಾಲೋಚನೆ, ಚಿಕಿತ್ಸೆ ಎಲ್ಲವೂ ಸಂಪೂರ್ಣ ಉಚಿತವಾಗಿರುತ್ತವೆ. ಸಂತ್ರಸ್ತರು ಇದರ ಸದುಪಯೋಗ ಪಡಿಸಿಕೊಳ್ಳಬೇಕು. ಎಲ್ಲ ಕೇಂದ್ರಗಳು ರೋಗಿಗಳ ಗೌಪ್ಯತೆಯನ್ನು ಕಾಪಾಡಲು ಹೆಚ್ಚು ಆದ್ಯತೆ



ನೀಡಬೇಕು. ಅಗತ್ಯ ಚಿಕಿತ್ಸೆ, ಆಪ್ತಸಮಾಲೋಚನೆಗೆ ಪ್ರಾಮುಖ್ಯತೆ ನೀಡಬೇಕು. ವ್ಯಸನಕ್ಕೆ ಒಳಗಾದವರು ಅಥವಾ ಸಾರ್ವಜನಿಕರು ಹೆಚ್ಚಿನ ಮಾಹಿತಿ ಹಾಗೂ ಸೌಲಭ್ಯಕ್ಕಾಗಿ ಸರ್ಕಾರದ ಮಾನಸ ಪ್ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅಥವಾ ಸಹಾಯವಾಣಿ ಸಂಖ್ಯೆ: 1933 ಗೆ ಕರೆ ಮಾಡಿ ಉಚಿತ ಆಪ್ತಸಮಾಲೋಚನೆ ಸೇವೆ ಪಡೆಯಬಹುದು. ಡ್ರಗ್ಸ್ ಫ್ರೀ ಕರ್ನಾಟಕ ಪ್ ಕುರಿತು ಎನ್‌ಸಿಸಿ, ಎನ್‌ಎಸ್‌ಎಸ್ ಹಾಗೂ ನೆಹರು ಯುವ ಕೇಂದ್ರದಿಂದ ವ್ಯಾಪಕ ಪ್ರಚಾರ ನೀಡಬೇಕು. ಪ್ರತಿಯೊಬ್ಬರೂಪ್ ಡೌನ್‌ಲೋಡ್ ಮಾಡಿಕೊಂಡು ಅದರ ಸದುಪಯೋಗ ಪಡೆದುಕೊಳ್ಳುವಂತೆ ಮನವೊಲಿಸಬೇಕು. ಈ ಕುರಿತು ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಅಧಿಕಾರಿಗಳಿಗೆ ತಿಳಿಸಿದರು.ಕೃಷಿ ಭೂಮಿಯಲ್ಲಿ ಕೃಷಿ ಬೆಳೆಗಳ ನಡುವೆ ಗಾಂಜಾ ಬೆಳೆಯುವ ಸಾಧ್ಯತೆ ಇರುತ್ತದೆ. ಆದ್ದರಿಂದ ಕೃಷಿ ಇಲಾಖೆಯಿಂದ ಈ ಬಗ್ಗೆ ನಿಯಮಿತ ತಪಾಸಣೆ ನಡೆಸಬೇಕು. ಗಾಂಜಾ ಅಫೀಮು, ತಂಬಾಕು ಮತ್ತು ಇತರ ಅಕ್ರಮ ಬೆಳೆಗಳ ಕೃಷಿಯನ್ನು ನಿಲ್ಲಿಸಲು ಹೊಸ ರೀತಿಯ ಅಥವಾ ಪರ್ಯಾಯ ಬೆಳೆ ಬೆಳೆಯಲು ರೈತರನ್ನು ಉತ್ತೇಜಿಸಬೇಕು. ಅಬಕಾರಿ ಇಲಾಖೆಯವರು ಪೊಲೀಸ್ ಇಲಾಖೆಯೊಂದಿಗೆ ಜಂಟಿಯಾಗಿ ಜಿಲ್ಲೆಯ ಬಾರ್‌ಗಳಲ್ಲಿ ಡ್ರಗ್ಸ್ ಬಳಕೆಯ ಕುರಿತು ಪರಿಶೀಲನೆ ನಡೆಸಬೇಕು. ಬಾರ್‌ಗಳಲ್ಲಿ ಎನ್‌ಸಿಬಿ ಯ ಸೂಚನಾ ಫಲಕಗಳನ್ನು ಪ್ರದರ್ಶಿಸಬೇಕು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಲಿಂಗರಾಜು ಟಿ., ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಡಿಡಿಪಿಐ ಸೋಮಶೇಖರಗೌಡ ಪಾಟೀಲ, ಕಿಮ್ಸ್ ತಂಬಾಕು ನಿಯಂತ್ರಣ ಕೋಶದ ಕೋ-ಆರ್ಡಿನೇಟರ್, ಅರಣ್ಯ ಇಲಾಖೆ ಅಧಿಕಾರಿ, ಅಬಕಾರಿ ಇಲಾಖೆ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ನೋಂದಣಿ ಪ್ರಕ್ರಿಯೆ ಆರಂಭ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಇಲ್ಲಿನ ಸಹಕಾರ ಸಂಘಗಳ ಉಪ ನಿಬಂಧಕರವರ ಕಾರ್ಯಾಲಯದಿಂದ 2025–26ನೇ ಸಾಲಿನ ಯಶಸ್ವಿನಿ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಡಿ ನೋಂದಾಯಿಸುವ ಪ್ರಕ್ರಿಯೆ ಆರಂಭವಾಗಿದೆ.

ಯಶಸ್ವಿನಿ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಾಗಿದ್ದು, ಈ ಯೋಜನೆಯಡಿ ನೋಂದಾಯಿಸಲು ಸರ್ಕಾರವು ಆದೇಶ ಹೊರಡಿಸಿದ್ದು, ಅದರನ್ವಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ, ಪಿಕಾರ್ಡ ಬ್ಯಾಂಕಗಳ, ಹಾಲು ಉತ್ಪಾದಕರ ಸಹಕಾರ ಸಂಘಗಳ, ಟಿ.ಎ.ಪಿ.ಸಿ.ಎಮ್.ಎಸ್‌ಗಳ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರಡಿ ಅಥವಾ ಕರ್ನಾಟಕ ಸೌಹಾರ್ದ ಸಹಕಾರಿಗಳ ಕಾಯ್ದೆ 1997ರಡಿ ಅಥವಾ ಬಹು ರಾಜ್ಯ ಸಹಕಾರಿ ಸಂಘಗಳ ಕಾಯ್ದೆ 2002ರಡಿ ನೋಂದಾಯಿಸಿ, ಕಾರ್ಯನಿರ್ವಹಿಸುತ್ತಿರುವ ಯಾವುದೇ ಸಹಕಾರ ಸಂಘಗಳ ಸದಸ್ಯರು ಮತ್ತು ಗ್ರಾಮೀಣ ಸಹಕಾರ ಸಂಘಗಳ/ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಮತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವತಿಯಿಂದ ಸಂಘಟಿಸಲ್ಪಟ್ಟಿರುವ ಸ್ವಸಹಾಯ ಗುಂಪುಗಳ ಸದಸ್ಯರುಗಳು ಗರಿಷ್ಟ ನಾಲ್ಕು ಸದಸ್ಯರ ಕುಟುಂಬಕ್ಕೆ ವಾರ್ಷಿಕ ವಂತಿಗೆ 500ರೂ.ಗಳು ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಹೆಚ್ಚುವರಿ ಸದಸ್ಯರಿಗೆ 100ರೂ.ಗಳನ್ನು ಪಾವತಿಸಿ ನೋಂದಾಯಿಸಬಹುದು ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸದಸ್ಯರಿಗೆ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ ಸಹಾಯಧನ ನೀಡುವ ಮೂಲಕ ಅವರ ವಾರ್ಷಿಕ ಸದಸ್ಯತ್ವದ ವಂತಿಗೆಯನ್ನು ಸರ್ಕಾರವೇ ಭರಿಸುತ್ತದೆ.ಅದೇ ರೀತಿ ನಗರ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಡಿ ನೋಂದಾಯಿಸಲು ಈ ಯೋಜನೆಯಡಿ ಗರಿಷ್ಟ ನಾಲ್ಕು ಸದಸ್ಯರ ಕುಟುಂಬಕ್ಕೆ ವಾರ್ಷಿಕ ವಂತಿಗೆ ರೂ.1000/–ರಂತೆ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಹೆಚ್ಚುವರಿ ಸದಸ್ಯರಿಗೆ ರೂ.200/–ಗಳನ್ನು ಪಾವತಿಸಿ ನೋಂದಾಯಿಸಬಹುದು.

ನವಜಾತ ಶಿಶು ತಾಯಿ ಹೆಸರು ಇರುವ ಯಶಸ್ವಿನಿ ಕಾರ್ಡ್ನ ಆಧಾರದ ಮೇಲೆ ಈ ಯೋಜನೆಯಡಿಯಲ್ಲಿ ಸೌಲಭ್ಯವನ್ನು ಮುಂದಿನ ವರ್ಷ ನೋಂದಾಣಿಯಾಗುವವರೆವಿಗೆ ಪಡೆಯಬಹುದು.

# ರಾಜ್ಯಮಟ್ಟದ ಅಬಾಕಾಸ್ ವೇದಿಕ್ ಮ್ಯಾಥ್ಸ್ ನ ಪ್ರಶಸ್ತಿ ಪ್ರಮಾಣ ಸಮಾರಂಭ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಜೋಳದ ರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಸ್ಟಾರ್ಸ್ ಅಬಾಕಾಸ್ ಅಕಾಡೆಮಿ ಆಯೋಜಿಸಿದ ರಾಜ್ಯಮಟ್ಟದ ಅಬಾಕಾಸ್ ಹಾಗೂ ವೇದಿಕ್ ಮಾಥ್ಸ್ ನಲ್ಲಿ ಸುಮಾರು 200 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರಶಸ್ತಿ ಪ್ರಮಾಣ ಪತ್ರಗಳ ಸಮಾರಂಭದಲ್ಲಿ ಭಾಗವಹಿಸದ್ದರು

ಈ ಕಾರ್ಯಕ್ರಮದ ಉದ್ಘಾಟಕರಾಗಿ ಬಳ್ಳಾರಿ ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಪಿ ಗಾದೆಪ್ಪ. ರವರು* ಮಾತನಾಡಿ ವೇದಿಕ್ ಮ್ಯಾಥ್ಸ್ ಅಬಾಕಾಸ್ ನ್ನು ಶಾಲಾ ಹಂತದ ಮಕ್ಕಳು ಅದ್ಬುತವಾಗಿ ತಮ್ಮ ಚಾಣಕ್ಯವನ್ನು ಪ್ರದರ್ಶಿಸಿದ್ದು ಸದರಿ ಅಬಾಕಾಸ್ ಮತ್ತು ವೇದಿಕ್ ಮಾಥ್ಸ್ ತರಗತಿಗಳು ಜಿಲ್ಲೆ ಹಾಗೂ ರಾಜ್ಯದ ಪ್ರತಿ ಶಾಲಾ ಹಂತದಲ್ಲಿ ಈ ತರಬೇತಿಗಳು ನಡೆಯಬೇಕು ಯಾಕೆಂದರೆ ನಾವುಗಳು ಗಣಿತದ ಎಂದರೇ ತಕ್ಷಣ ಹಿಂದೆ ಸರಿತವೆ ಆ ಕಾರಣ ಅಬಕಾಸ್ ಮತ್ತು ವೇದಿಕ್ ಮಾರ್ಕ್ಸ್ ಇದು ಬಹಳಷ್ಟು ಮಕ್ಕಳ ವಿದ್ಯಾಭ್ಯಾಸದಲ್ಲಿ ಅನುಕೂಲವಾಗುತ್ತದೆ ಎಂದು ಶುಭ ಕೋರಿದರು

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಬಳ್ಳಾರಿ ಜಿಲ್ಲಾ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ

ನಿಷ್ಠಿ ರುದ್ರಪ್ಪ ಮಾತನಾಡಿ ಈ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳಿಗೆ ಇಂತಹ ಚುರುಕನ್ನು ನೀಡುವಂತಹ ವಿಷಯ ಅಬಾಕಾಸ್ ಮತ್ತು ವೇದಿಕ್ ಮ್ಯಾಥ್ಸ್ ತರಬೇತಿಯನ್ನು ನೀಡಿ ಸುಮಾರು ಇಲ್ಲಿ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದು ನಿಜಕ್ಕೂ ಸಂತೋಷ ಈ ಕಾರ್ಯಕ್ರಮದ ಆಯೋಜಕರಿಗೆ ಹಾಗೂ ಪ್ರಶಸ್ತಿ ಪಡೆದ ಎಲ್ಲಾ ವಿದ್ಯಾರ್ಥಿಗಳಿಗೆ ಶುಭ ಕೋರಿದರು

ನಂತರದಲ್ಲಿ ಮಾತನಾಡಿದ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಶಿವಲಿಂಗಪ್ಪ ಹಂದ್ಯಾಳ್ ಇಂದು ಮಕ್ಕಳ ವಿದ್ಯಾ ಜಗತ್ತಿನಲ್ಲಿ ಓದು ಜೊತೆಯಲ್ಲಿ ಸಾಹಿತ್ಯದ ಪುಸ್ತಕಗಳನ್ನು ಓದುವ ಅಭ್ಯಾಸಗಳನ್ನು ಮಕ್ಕಳು ಮಾಡಬೇಕು ವಿದ್ಯೆ ಜೊತೆ ಸಾಹಿತ್ಯ ಹೊಂದಿಕೊಂಡಲ್ಲಿ ಓದುವಂತ ಪ್ರತಿ ವಿದ್ಯಾರ್ಥಿಯು ತನ್ನ ಗುರಿಯನ್ನು ಮುಟ್ಟಲು ಸಾಧ್ಯ ಎಂದು ಹೇಳಿ ಮಕ್ಕಳಿಗೆ ಪ್ರಶಸ್ತಿ ಪ್ರದಾನ ಮಾಡಿದ್ದರು.

ಕಾರ್ಯಕ್ರಮದ ಮುಖ್ಯ ಅತಿಯಾಗಿ ಆಗಮಿಸಿದಂತ ಜಿಂದಾಲ್ ಆಧರ್ಶ ವಿದ್ಯಾಲಯದ ಉಪಪ್ರಾಂಶುಪಾಲರಾದ ಶ್ರೀಮತಿ ಭಾಗ್ಯವತಿ ಗಾಜುಲ ರವರು ಮಾತಾನಾಡಿ ಈ ವೇದಿಕ್ ಮಾಥ್ಸ್ ಅಬಾಕಾಸ್ ನಮ್ಮ ಜಿಂದಾಲ್ ನ ಎಲ್ಲಾ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿದ್ದಾರೆ ಅದೇ ರೀತಿ ಈ ಆಯೋಜಕರು ಬಳ್ಳಾರಿ ಜಿಲ್ಲೆ ಮತ್ತು ರಾಜ್ಯದಲ್ಲಿ ತಮ್ಮ ಅಬ್ಬಾಸ್ ಅಕಾಡೆಮಿಯನ್ನು ವಿಸ್ತರಣೆ ಮಾಡಿ ಓದುವ ಮಕ್ಕಳಿಗೆ ಅನುಕೂಲವಾಗಲಿದೆ ಎಂದು ಹೇಳಿದರು

ಕಾರ್ಯಕ್ರಮದ ಮುಖ್ಯ ಅಥಿತಿಗಳಾಗಿ ಖ್ಯಾತ ಕರಾಟೆ ತರಬೇತಿದಾರರು ರಾಜ್ಯ ಕರಾಟೆ ಶಿಕ್ಷಕರ ಸಂಘದ ವಕ್ತಾರಾದ ಕಟ್ಟೇಸ್ವಾಮಿ ಮಾತನಾಡಿ ಈ ವೇದಿಕ್ ಮ್ಯಾಥ್ಸ್ ಎಷ್ಟು ಚಾಣಕ್ಷತನ ಜ್ಞಾನವನ್ನು ಪಡೆದಿದ್ದಿರಿ ತಾವೆಲ್ಲರೂ ಅದೇ ರೀತಿ ವಿದ್ಯಾಭ್ಯಾಸದ ಜೊತೆಯಲ್ಲಿ ಮಾನಸಿಕ ದೈಹಿಕವಾಗಿ ಸದೃಢರಾಗಲು ತಾವು ವಿವಿಧ ಕ್ರೀಡಾ ಮತ್ತು ವಿಶೇಷ ಚಟುವಟಿಕೆಗಳಲ್ಲಿ ಭಾಗವಹಿಸಲು ಅವಕಾಶ ಪೋಷಕರು ಮಾಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಪ್ರಾಸ್ತಾವಿಕವನ್ನು ಸ್ಟಾರ್ ಅಬಾಕಾಸ್ ಅಕಾಡೆಮಿಯ ಮುಖ್ಯಸ್ಥರಾದ

ಶೃತಿ ರವರು ಮಾತನಾಡಿದರು ನಿರೂಪಣೆಯನ್ನು ಜಿಂದಾಲ್ ಆದರ್ಶ ವಿದ್ಯಾಲಯ ಶಿಕ್ಷಕಿಂ–ಯಾದ ಮಹಾದೇವಿ ನಡೆಸಿಕೊಟ್ಟರು.

# ಜೆಡಿಎಸ್ ಕಾರ್ಯಕಾರಣಿ ಸಭೆ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ನಗರದ ಜೆಡಿಎಸ್ ಕಚೇರಿಯಲ್ಲಿ ಮುಂಬರುವ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಚುನಾವಣೆಗಳು ಸಮೀಪಿಸುತ್ತಿರುವ ಹಿನ್ನಲೆಯಲ್ಲಿ, ಪಕ್ಷದ ಪೂರ್ವ ನಿಯೋಜಿತ ಕಾರ್ಯಕಾರಣಿ ಸಭೆ ನಡೆಯಿತು.

ಸಭೆಗೆ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷರಾದ ಮೀನಹಳ್ಳಿ ತಾಯಣ್ಣ ಅವರು ನೇತೃತ್ವ ವಹಿಸಿದ್ದರು. ಈ ಸಂದರ್ಭದಲ್ಲಿ ಚುನಾವಣೆಗೆ ಸಿದ್ಧತೆ, ಪಕ್ಷ ಸಂಘಟನೆಯನ್ನು ಇನ್ನಷ್ಟು ಬಲಪಡಿಸುವುದು, ಬೂತ್ ಮಟ್ಟದ ಸಮಿತಿಗಳ ರಚನೆ, ಕಾರ್ಯಕರ್ತರ ಜವಾಬ್ದಾರಿಗಳು ಹಾಗೂ ಜನಸಂಪರ್ಕ ಕಾರ್ಯಕ್ರಮಗಳ ಕುರಿತು ವಿಸ್ತೃತ ಚರ್ಚೆ ನಡೆಯಿತು.

ಚುನಾವಣೆಗಳನ್ನು ಗಂಭೀರವಾಗಿ ಎದುರಿಸಲು ಎಲ್ಲ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡುವಂತೆ ಜಿಲ್ಲಾಧ್ಯಕ್ಷರಾದ ಮೀನಹಳ್ಳಿ ತಾಯಣ್ಣ ಕರೆ ನೀಡಿದರು. ಮುಂದುವರೆದು ಮಾತನಾಡಿದ ಅವರು, ಪಕ್ಷದ ತತ್ವ–ಸಿದ್ಧಾಂತಗಳನ್ನು ಜನರಿಗೆ ತಲುಪಿಸುವಲ್ಲಿ ಕಾರ್ಯಕರ್ತರ ಪಾತ್ರ ಮಹತ್ವದ್ದಾಗಿದ್ದು, ತಳಮಟ್ಟದಲ್ಲಿ ಸಂಘಟನೆ ಬಲಪಡಿಸಿದರೆ ಚುನಾವಣೆಯಲ್ಲಿ ಯಶಸ್ಸು ಸಾಧಿಸಬಹುದು ಎಂದು ಹೇಳಿದರು.

ಸಭೆಯಲ್ಲಿ ಪಕ್ಷದ ಹಿರಿಯ ನಾಯಕರಾದ ರೈತ ವಿಭಾಗದ ಅಧ್ಯಕ್ಷರಾದ ಲಕ್ಷ್ಮಿಕಾಂತ್ ರೆಡ್ಡಿ, ಸಂಡೂರು ತಾಲೂಕು ಅಧ್ಯಕ್ಷರಾದ ಕುರಿ ಕೊಪ್ಪ ಸೋಮಪ್ಪ, ಬಳ್ಳಾರಿ ನಗರ ಘಟಕದ ಅಧ್ಯಕ್ಷ ವನ್ನೂರು ಸ್ವಾಮಿ (ವಂಡ್ರಿ), ಕಂಪ್ಲಿ ತಾಲೂಕು ಅಧ್ಯಕ್ಷ ಮೇಘರಾಜ್, ಸಿರುಗುಪ್ಪ ತಾಲೂಕು ಅಧ್ಯಕ್ಷ ಶಿವನಾರಾಯಣ, ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪ, ಬಳ್ಳಾರಿ ಗ್ರಾಮಾಂತರ ಅಧ್ಯಕ್ಷ ಅಶೋಕ್ ಸಂಗನಕಲ್ಲು, ಪರಿಶಿಷ್ಟ ಜಾತಿ ಘಟಕದ ಅಧ್ಯಕ್ಷ ವಸಂತ್ ಕುಮಾರ್,ಹಿಂದುಳಿದ ವರ್ಗಗಳ ಅಧ್ಯಕ್ಷ ಹೊಸಗೇರಪ್ಪ, ಪ್ರಧಾನ ಕಾರ್ಯದರ್ಶಿಗಳಾದ ಮಧುರೈ ವಿಜಯ, ಅಲ್ಪಸಂಖ್ಯಾತರ ಅಧ್ಯಕ್ಷ ಜಾವೀದ್, ಕಾರ್ಮಿಕರ ಅಧ್ಯಕ್ಷ ಬಾಲು, ಶಿವಕುಮಾರ್, ರಾಮಾಂಜನಿ ಚಾಗನೂರು, ನಾಗರಾಜ್, ಹಾಜಿ ಬಾಯ್, ಹೊನ್ನೂರ್ವಲಿ, ಭವಾನಿ, ಶಬನಾ, ರೇಣುಕಾ, ಮಮತಾ, ಲಕ್ಷ್ಮಿ ಸೇರಿದಂತೆ ಅನೇಕ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸ್ವಾಮಿ ವಿವೇಕಾನಂದರ ಜೀವನ ಮತ್ತು ಸಂದೇಶ ಯುವಜನತೆಗೆ ಇಂದಿಗೂ ಪ್ರೇರಣೆ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ (ಈಕಂಖ), ಬಳ್ಳಾರಿ ಶಾಖೆ, ಸಂಜಯ್ ಗಾಂಧಿ ಪಾಲಿಟೆಕ್ನಿಕ್ ಬಳ್ಳಾರಿ ಇವರ ಸಹಯೋಗದಲ್ಲಿ ಹಾಗೂ ಅವರ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಯುವಕರ ದಿನಾಚರಣೆ–ಯ ಅಂಗವಾಗಿ ಪ್ರಬಂಧ ಸ್ಪರ್ಧೆ ಹಾಗೂ ಮಾಹಿತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶ್ರೀಯುತ ಟಿ.ಜಿ. ವಿಠ್ಠಲ್, ಅಧ್ಯಕ್ಷರು, ಈಕಂಖ ಬಳ್ಳಾರಿ ಅವರು, ಸ್ವಾಮಿ ವಿವೇಕಾನಂದರು ಯುವಜನತೆಯ ಮೇಲೆ ಅಪಾರ ನಂಬಿಕೆ ಹೊಂದಿದ್ದ ಮಹಾನ್ ಚಿಂತಕರಾಗಿದ್ದರು. "ಎದ್ದೇಳಿ, ಜಾಗೃತರಾಗಿ, ಗುರಿಯನ್ನು ಸಾಧಿಸುವವರೆಗೂ ನಿಲ್ಲಬೇಡಿ" ಎಂಬ ಅವರ ಸಂದೇಶ ಇಂದಿಗೂ ಯುವಕರಿಗೆ ಶಕ್ತಿ ಮತ್ತು ದಿಕ್ಕು ನೀಡುತ್ತಿದೆ. ಅವರು ಶಿಕ್ಷಣವನ್ನು ಕೇವಲ ಪುಸ್ತಕ ಜ್ಞಾನವಲ್ಲದೆ, ವ್ಯಕ್ತಿತ್ವ ವಿಕಾಸದ ಮಹತ್ವದ ಸಾಧನವೆಂದು ವಿವರಿಸಿದ್ದರು ಎಂದು ತಿಳಿಸಿದರು.

ನಂತರ ಮಾತನಾಡಿದ ಶ್ರೀಮತಿ ಎಸ್. ವಿಜಯಲಕ್ಷ್ಮಿ, ವ್ಯವಸ್ಥಾಪಕರು, ಈಕಂಖ ಬಳ್ಳಾರಿ ಅವರು, ಸ್ವಾಮಿ ವಿವೇಕಾನಂದರ ತತ್ವದ ಪ್ರಕಾರ ಯುವಜನತೆಯ ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಆರೋಗ್ಯವಂತ ದೇಹ ಮತ್ತು ಶುದ್ಧ ಮನಸ್ಸು ಇದ್ದಾಗ ಮಾತ್ರ ವ್ಯಕ್ತಿ ಜೀವನದಲ್ಲಿ ಸರಿಯಾದ ನಿರ್ಧಾರ, ಮಾನಸಿಕ ನಿಯಂತ್ರಣ ಮತ್ತು ಆತ್ಮ ವಿಶ್ವಾಸವನ್ನು ಬೆಳೆಸಿಕೊಳ್ಳಲು ಸಾಧ್ಯವೆಂದು ಹೇಳಿದರು ಹಾಗೂ ಲೈಂಗಿಕ ಮತ್ತು ಸಂತಾನೋತ್ಪತ್ತಿ ಆರೋಗ್ಯ ಮತ್ತು ಹಕ್ಕುಗಳ ಪ್ರಾಮುಖ್ಯತೆಗೆ ಸ್ವಾಮಿ ವಿವೇಕಾನಂದರ ತತ್ವಗಳು ಆಧಾರವಾಗಿವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನುಡಿಗಳನ್ನು ನುಡಿದ ಗೌರಿಶಂಕರ್ ಹಿರೇಮಠ, ಪ್ರಾಂಶುಪಾಲರು, ಸಂಜಯಗಾಂಧಿ ಪಾಲಿಟೆಕ್ನಿಕ್ (ಖಉಕ) ಅವರು, ಯುವಕರು ಮೊದಲು ಉತ್ತಮ ಮಾನಸಿಕ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು. ಅಂಥ ವ್ಯಕ್ತಿತ್ವ ರೂಪುಗೊಂಡಾಗ ಮಾತ್ರ ಸ್ವಾಮಿ ವಿವೇಕಾನಂದರಂತಹ ಮಹಾನ್ ಚಿಂತಕರ ತತ್ವಗಳು ಯುವಜನತೆಗೆ ಸರಿಯಾಗಿ ಅರ್ಥವಾಗುತ್ತವೆ ಎಂದು ಹೇಳಿದರು.

ಕಾರ್ಯಕ್ರಮದ ಅಂತ್ಯದಲ್ಲಿ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ 49 ವಿದ್ಯಾರ್ಥಿಗಳ ಪೈಕಿ ಗೆದ್ದ ವಿದ್ಯಾರ್ಥಿಗಳಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನಗಳನ್ನು ವಿತರಿಸಲಾಯಿತು. ಈ ಕಾರ್ಯಕ್ರಮದ ಯಶಸ್ವಿ ಆಯೋಜನೆಗೆ ಖಉಕ ಕಾಲೇಜಿನ ಎನ್‌ಎಸ್‌ಎಸ್ ಹಾಗೂ ಈಕಂಖ ನ ಯುವ ಸ್ವಯಂ ಸೇವಕರು ಮತ್ತು ಶರಬಣ್ಣ ಎನ್ ಎಸ್ ಎಸ್ ಅಧಿಕಾರಿ ಒಟ್ಟುಗೂಡಿ ಅಗತ್ಯವಿರುವ ಎಲ್ಲಾ ರೀತಿಯ ಅನುಕೂಲಗಳನ್ನು ಕಲ್ಪಿಸಿ ಸಹಕರಿಸಿದರು.

# ಶಾಸಕರಿಂದ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ.ನಗರದ 5ನೇ ವಾರ್ಡ್‌ನ ಕಾಕರ್ಲಾ ತೋಟ ಪ್ರದೇಶದಲ್ಲಿ ಗುಗ್ಗರಹಟ್ಟಿ ಮಿಂಚೇರಿ ರಸ್ತೆಗೆ ಜೋಡಣೆ ಮತ್ತು ಅಭಿವೃದ್ಧಿ ಕಾಮಗಾರಿಗೆ ಬಳ್ಳಾರಿ ನಗರ ಶಾಸಕರಾದ ನಾರಾ ಭರತ್ ರೆಡ್ಡಿ ಶಂಕುಸ್ಥಾಪನೆ ನೆರವೇರಿಸಿದರು. ಆನಂತರ ಅವರು

ಮಾತನಾಡುತ್ತಾ ಬಳ್ಳಾರಿ ನಗರ ಅಭಿವೃದ್ಧಿ ನಮ್ಮ ಕನಸು ಆಗಿದೆ, ಈಗಾಗಲೇ ನಗರದಲ್ಲಿ ಅನೇಕ ವಾರ್ಡುಗಳಲ್ಲಿ ರಸ್ತೆ ,ಡ್ರೈನೇಜ್ , ಕುಡಿಯುವ ನೀರು ವ್ಯವಸ್ಥೆ, ಮೊದಲಾದ ಅನೇಕ ಅಭಿವೃದ್ಧಿ ಕೆಲಸಗಳು ನಡೆದಿದ್ದು, ಇನ್ನು ಮುಂದೆ ಬಳ್ಳಾರಿ ನಗರ ಚಿತ್ರಣವೇ ಬದಲಾಗಲಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಡಾ. ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿರುದ್ಧಿ ನಿಗಮದ ಅಧ್ಯಕ್ಷರು ಮುಂಡ್ರಿಗಿ ನಾಗರಾಜ್ ಭಾಗವಹಿಸಿದ್ದರು.

ಹಾಗು ಬಳ್ಳಾರಿ ಮಹಾ ನಗರ ಪಾಲಿಕೆ ಮೇಯರ್ ಪಿ. ಗಾದೆಪ್ಪ , 5ನೇ ವಾರ್ಡ್ ಸದಸ್ಯರು ರಾಜಶೇಖರ್ ಉಪಸ್ಥಿತರಿದ್ದರು.

ಪಾಲಿಕೆ ಸದಸ್ಯರು ಕವಿತ ಹೊನ್ನಪ್ಪ,

ಶಿವರಾಜ್, ಸುಬ್ಬರಾಯುಡು ,ಂಕಂಲಅ ಅಧ್ಯಕ್ಷರು ಕಟ್ಟೆಮನೆ ನಾಗೇಂದ್ರಪ್ಪ, ಮುಖಂಡರಾದ ಸೂರ್ಯನರಾಯಣ, ಪರಶು ರಾಮುಡು ,ಹಗರಿ ಗೋವಿಂದಪ್ಪ, ಕೆ. ಸಿ ವೆಂಕಟೇಶ, ಅಲುವೇಲು ಸುರೇಶ್,

ವಿರೇಶ್,ಮಲ್ಲಿಕಾರ್ಜುನ,ಅಧಿಕಾರಿಗಳು, ಸಾರ್ವಜನಿಕರು ಮೊದಲಾದವರು ಹಾಜರಿದ್ದರು.

# ಭಕ್ತರ ಪಾಲಿನ ಸ್ವರ್ಗ ಗವಿಮಠ: ಡಾ,ಹನಸಿ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:

ಜಿಲ್ಲೆ ಹಾಗೂ ರಾಜ್ಯ ಮಾತ್ರವಲ್ಲದೆ ದೇಶ ವಿದೇಶದಲ್ಲಿ ಹೆಸರು ಮಾಡಿದ ಕರ್ನಾಟಕದ ಕುಂಭಮೇಳ ಎನ್ನುವ ಖ್ಯಾತಿ ಪಡೆದ ಸ್ಥಳ ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ ಎಂದು ಪ್ರಾಂಶುಪಾಲರಾದ ಡಾ.ಬಸವರಾಜ ಹನಸಿ ಹೇಳಿದರು.

ಪಟ್ಟಣದ ಶೀವಪ್ರೀಯಾ ಕಾನೂನು ಮಹಾವಿದ್ಯಾಲಯದಿಂದ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ ನಿಮಿತ್ಯ ಪ್ರಸಾದ ಸೇವೆ ಮಾಡಿ ಅವರು ಮಾತನಾಡಿದರು.

ಇಡಿ ಜಗತ್ತು ಇಂದು ಕೊಪ್ಪಳವನ್ನು ಗುರುತಿಸುತ್ತಿದೆ ಅದರಂತೆ ಸಾಮಜಿಕ ನ್ಯಾಯ, ಬಡವ ಬಲ್ಲಿದ ಎಂಬ ಬೇದಭಾವವಿಲ್ಲದ ಹಾಗೂ ಎಲ್ಲರೂ ಸರಿ ಸಮಾನರು ಎಂಬ ಮನಸ್ಸಿನಿಂದ ಜರುಗುವ ಎಲ್ಲಾ ಜಾತಿ ಧರ್ಮ ಮೀರಿದ ಏಕೈಕ ಜಾತ್ರೆ ಇದಾಗಿದೆ ಇದರಲ್ಲಿ ಜಿಲ್ಲೆಯ ಎಲ್ಲಾ ಶಾಲಾ , ಕಾಲೇಜುಗಳ ವಿದ್ಯಾರ್ಥಿಗಳು,ಹಿರಿಯರು ಯುವಕರು ಸೇರಿದಂತೆ ಅನೇಕರು ತಮ್ಮ ಭಕ್ತಿ ಸೇವೆ ಮಾಡುವದು ಸಾಮಾನ್ಯವಾಗಿದೆ ಅದರಂತೆ ನಮ್ಮ ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿಗಳು ಇಂದು ಅಜ್ಜನ ಸೇವೆ ಮಾಡಲು ಮುಂದಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ರಜೀಯಾ, ಸರಸ್ವತಿ ಸೇರಿದಂತೆ ಇನ್ನಿತರರು ಹಾಜರಿದ್ದರು.

# ಜಿಲ್ಲಾಡಳಿತದಿಂದ ಸಿದ್ಧರಾಮೇಶ್ವರ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜನವರಿ 14ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

# ಬಿಜೆಪಿಯಿಂದ ಸ್ವಾಮಿ ವಿವೇಕಾನಂದ ಜಯಂತಿ

# ಭಾರತದ ಆಧ್ಯಾತ್ಮ ಶಕ್ತಿಯನ್ನು ಜಗತ್ತಿಗೆ ಪರಿಚಯಿಸಿದ ಸಂತ-ಚರಂತಿಮಠ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:

–ಭಾರತದ ಆಧ್ಯಾತ್ಮದ ಶಕ್ತಿ ಮತ್ತು ಸಂಸ್ಕೃತಿ ಸಂಸ್ಕಾರದ ಉತ್ಕೃಷ್ಟ ವಿಚಾರಗಳನ್ನು ಜಗತ್ತಿಗೆ ಪರಿಚಯಿಸಿ ಭಾರತ ವಿಶ್ವಗುರು ಎಂದು ಸಾರಿದ ಮಹಾನ ಸಂತ ಸ್ವಾಮಿ ವಿವೇಕಾನಂದರು ಎಂದು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಹೇಳಿದರು.

ನಗರದ ಬಿ.ವಿ.ವಿ.ಸಂಘದ ನೂತನ ಸಭಾಂಗಣದಲ್ಲಿ ಸೋಮವಾರ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದಿಂದ ಸ್ವಾಮಿ ವಿವೇಕಾನಂದರ ಜಯಂತಿ ಹಾಗೂ ಬೂತ್ ಅಧ್ಯಕ್ಷರ ಕಾರ್ಯಾಗಾರದಲ್ಲಿ ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪ ಸಲ್ಲಿಸಿ ಅವರು ಮಾತನಾಡಿದರು. ಸ್ವಾಮಿ ವಿವೇಕಾನಂದರು ಆಧ್ಯಾತ್ಮ ಹಾಗೂ ವಾಸ್ತವ ಬದುಕು ಎರಡನ್ನೂ ಸರಿದೂಗಿಸಿಕೊಂಡು ಮುನ್ನಡೆದು, ನಮ್ಮನ್ನು ನಾವು ನಂಬದ ಹೊರತು ದೇವರನ್ನು ನಂಬಲು ಸಾಧ್ಯವಿಲ್ಲ, ಮನಸ್ಸನ್ನು ಉನ್ನತ ಆಲೋಚನೆಗಳಿಂದ ಮತ್ತು ಆದರ್ಶಗಳಿಂದ ತುಂಬಿಕೊಂಡು ದೃಢ ನಿಲುವು, ಮಾನಸಿಕ, ದೈಹಿಕ ಹಾಗೂ ಧಾರ್ಮಿಕ ವಿಚಾರಗಳಲ್ಲಿ ಉನ್ನತಿ ಸಾಧಿಸಬೇಕಾದ ಅಗತ್ಯತೆ ಇದೆ. ಸ್ವಾಮಿ ವಿವೇಕಾನಂದರು ಯುವ ಸಮುದಾಯಕ್ಕೆ ನಿತ್ಯ ಸ್ಫೂರ್ತಿಯಾಗಿದ್ದಾರೆ ಎಂದು ಚರಂತಿಮಠ ಹೇಳಿದರು. ಕಾರ್ಯಾಗಾರ ಉದ್ದೇಶಿಸಿ ಮಾತನಾಡಿದ ಎಐಆರ್ ರಾಜ್ಯ ಸಂಚಾಲಕ ಜಗದೀಶ ಹಿರೇಮನಿ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಐಆರ) ಪಕ್ರಿಯೆಯ ಬಗ್ಗೆ ಮಾಹಿತಿಯನ್ನು ತಿಳಿಸಿದರು. ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ, ಸ್ವಾಮಿ ವಿವೇಕಾನಂದರ ತತ್ವ ಆದರ್ಶಗಳಿಗೆ ಪ್ರೇರೆಪಿತರಾದ ಪ್ರದಾನಿ ನರೇಂದ್ರ ಮೋದಿ ದೇಶದ ಭದ್ರತೆ ಹಾಗೂ ಧಾರ್ಮಿಕ ಆಚರಣೆಗಳಿಗೆ ಮಹತ್ವ ನೀಡುತ್ತಿದ್ದಾರೆ. ಸರ್ವೆ ಜನಾ ಸುಖಿನೋ ಭವಂತು ವಿಶ್ವವೇ ಒಂದು ಕುಟುಂಬ ಎಂದು ನಂಬಿದವರು ಭಾರತೀಯರು ಎಂದರು.ವೇದಿಕೆ ಮೇಲೆ ಬಿಜೆಪಿ ಜಿಲ್ಲಾಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ, ರಾಜ್ಯ ರೈತ ಮೋರ್ಚಾ ಕಾರ್ಯದರ್ಶಿ ಶಶಿ ಗುತ್ತನ್ನವರ, ಗ್ರಾಮೀಣ ಮಂಡಲ ಅಧ್ಯಕ್ಷ ಸುರೇಶ ಕೊಣ್ಣೂರ, ನಗರಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ರಾಜು ಮುದೇನೂರ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ, ಮಲ್ಲಿಕಾರ್ಜುನ ಮುತ್ತಪ್ಪನವರ, ಸೇರಿದಂತೆ ನಗರ ಹಾಗೂ ಗ್ರಾಮೀಣ ಭಾಗದ ಬೂತ್ ಅಧ್ಯಕ್ಷರುಗಳು ಹಾಗೂ ಕಾರ್ಯಕತರು ಭಾಗವಹಿಸಿದ್ದರು.

# ಗಾಳಿಪಟ ಹಾರಿಸಲು ಬಳಸುವ ನೈಲಾನ್ ದಾರ ನಿಷೇಧ: ಮಂಜುನಾಥ ಪಂಚಾಳ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ:

ಮಕರ ಸಂಕ್ರಾಂತಿ ಹಬ್ಬದ ಅಂಗವಾಗಿ ಗಾಳಿಪಟ ಆಡುವ ಪರಂಪರೆ ಇದೆ. ಈ ಹಿಂದೆ ಗಾಳಿಪಟವನ್ನು ಹತ್ತಿದಾರದಿಂದ ಪರಿಸರ ಸ್ನೇಹಿ ಇರುವಂತಹ ದಾರವನ್ನು ಉಪಯೋಗಿಸಿ ಗಾಳಿಪಟ ಹಾರಿಸುತ್ತಿದ್ದರು ಎಂದು ತಹಶೀಲ್ದಾರ್ ಮಂಜುನಾಥ ಪಂಚಾಳ ತಿಳಿಸಿದರು. ಸೋಮವಾರ ಪುರಸಭೆ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಗಾಳಿಪಟ ಹಾರಿಸಲು ಹಾನಿಕಾರಕ ವಸ್ತುಗಳಿಂದ ತಯಾರಿಸಿದ ದಾರ ಬಳಸುವುದನ್ನು ನಿಷೇಧಿಸಲಾಗಿದೆ. ಗಾಳಿಪಟ ಹಾರಿಸಲು ನೈಲಾನ್ ದಾರ (ಚೈನೀಸ್) ಮಾಂಜಾ' ಅಥವಾ ಗಾಜು ಇಲ್ಲವೇ, ಕೃತಕ ಹಾನಿಕಾರಕ ವಸ್ತುಗಳಿಂದ ತಯಾರಿಸಿ ದಾರ ಬಳಕೆ ನಿಷೇಧಿಸಲಾಗಿದೆ. ಇದರಿಂದ ಪ್ರಾಣಿ, ಪಕ್ಷಿಗಳು ಮತ್ತು ಮನುಷ್ಯರಿಗೆ ತೀವ್ರತರಹದ ಗಾಯಗಳಾಗಿವೆ. ರಸ್ತೆ ಮೇಲೆ ನೈಲಾನ್ ದಾರ ಕಡಿದು ಬಿದ್ದ ಪರಿಣಾಮ ದ್ವಿಚಕ್ರ ವಾಹನ ಸವಾರರಿಗೂ ಕೂಡ ತೊಂದರೆಯಾಗಿವೆ. ಇಂತಹ ದಾರವನ್ನು ಸಂಗ್ರಹಿಸುವುದು, ಮಾರಾಟ ಮಾಡುವುದು ಮತ್ತು ಬಳಕೆ ಮಾಡುವುದನ್ನು ನಿಷೇಧಿಸಲಾಗಿದೆ. ಒಂದು ವೇಳೆ ಯಾರಾದರೂ ನಿಷೇಧಿಸಿದ ದಾರವನ್ನು ಮಾರಾಟ ಮಾಡುತ್ತಿರುವುದನ್ನು ಕಂಡು ಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಸತೀಷ ಗುಡ್ಡೆ, ಎಎ ಭೀಮರಾವ ರಾಠೋಡ, ಪುರಸಭೆ ಮಾಜಿ ಸದಸ್ಯ ನಸೀರ್ ಹಕ್ಕಿಮ್ ಸೇರಿದಂತೆ ವ್ಯಾಪಾರಸ್ಥರಿದ್ದರು.

# ಆರೋಗ್ಯ ಬಗ್ಗೆ ಕಾಳಜಿವಿರಲಿ : ಡಾ: ಲಕ್ಷ್ಮಿಕಾಂತ

• ಮಲ್ಲಮ್ಮ ನುಡಿ ವಾರ್ತೆ ಮುದಗಲ್:

ಇತ್ತೀಚಿನ ದಿನಗಳಲ್ಲಿ ಅನೇಕ ರೋಗಗಳಿಗೆ ತುತ್ತಾಗುತ್ತಿರುವ ಜನರು ಆರೋಗ್ಯ ಬಗ್ಗೆ ಹೆಚ್ಚಿನ ಕಾಳಜಿವಹಿಸಬೇಕು ಎಂದು ಮಾಕಾಪೂರು ಪ್ರಾಥಮಿಕ ಅರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ: ಲಕ್ಷ್ಮಿಕಾಂತ ಹೇಳಿದರು.

ಪಟ್ಟಣ ಸಮೀಪದ ಹೂನೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ರಾಮತ್ನಾಳ ಗ್ರಾಮದಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಮಾಡುವ ಕೂಲಿ ಕಾರ್ಮಿಕರಿಗೆ ಆರೋಗ್ಯ ಬಗ್ಗೆ ಮಾಹಿತಿ ನೀಡಿ ನಂತರ ಮಾತನಾಡಿ ಅವರು ಆಧುನಿಕ ಯುಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ದುಶ್ಚಟಗಳಿಗೆ ಬಲಿಯಾಗುತ್ತಿರುವುದು ಶೋಚನೀಯ ಸಂಗತಿಯಾಗಿದೆ ಇದರ ಬಗ್ಗೆ ಪಾಲಕರು ಗಮನಹರಿಸಬೇಕು ಹಾಗೂ ಪೌಷ್ಟಿಕ ಆಹಾರ ಸೇವನೆ ಮಾಡಬೇಕು ಎಂದರು.



ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಸದಸ್ಯ ಅಂದಾನಯ್ಯ ಹಿರೇಮಠ,ಕರುನಾಡ ವಿಜಯ ಸೇನೆ ತಾಲೂಕ ಅಧ್ಯಕ್ಷ ಹನುಮಂತ ಬಡಿಗೇರ್, ಯುವ ಘಟಕ ಅಧ್ಯಕ್ಷ ಸಂಗನಗೌಡ ಪಾಟೀಲ್,, ರಾಮತ್ನಾಳ, ಆಶಾ ಕಾರ್ಯಕರ್ತೆ ಶಾಂತಮ್ಮ ಬಡಿಗೇರ್, ರಮೇಶ ಇಟಗಿ,ಗ್ರಾಮ ಘಟಕ ಅಧ್ಯಕ್ಷ ಹನುಮಂತ ತೋವಿ, ದುರುಗಪ್ಪ ಪೂಜಾರಿ, ಗದ್ದೆಮ್ಮ,ಸೇರಿದಂತೆ ಕೂಲಿ ಕಾರ್ಮಿಕರು ಇದ್ದರು.

# ಈ ಸರ್ಕಾರದ ನಡೆ ಖಂಡನೀಯ : ಬಳೂಟಗಿ

• **ಮಲ್ಲಮ್ಮ ನುಡಿ ವಾರ್ತೆ ಕುಕನೂರು:**

ಮೂಲಭೂತ ಸೌಲಭ್ಯಕ್ಕಾಗಿ ಸರಕಾರವನ್ನು ಒತ್ತಾಯಿಸಿದ ಯುವಕನ ಮೇಲೆ ಮೊಕದ್ದಮೆ ದಾಖಲಿಸುವುದು ಹತಾಶೆಯ ಪರಮಾವಧಿ ಮತ್ತು ಕಾಂಗ್ರೆಸ್ ಸರ್ಕಾರದ ನಡೆ ಖಂಡನೀಯ ಎಂದು ಗೋರ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ಸುರೇಶ ಬಳೂಟಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ಕುರಿತು ಇಂದು ಮಲ್ಲಮ್ಮ ನುಡಿ ದಿನ ಪತ್ರಿಕೆ ಮಾಧ್ಯಮದೊಂದಿಗೆ ಮಾತನಾಡಿದ ಅವರು, 'ಯಾದಗಿರಿಯಲ್ಲಿ ಕ್ರೀಡಾಂಗಣಕ್ಕೆ ಮೂಲಭೂತ ಸೌಕರ್ಯ ಒದಗಿಸಲು ಹೋರಾಟ ಮಾಡಿದ ರಾಷ್ಟ್ರೀಯ ಅಥ್ಲೆಟಿ-



ಕ್ ಪಟು, ರಾಷ್ಟ್ರಕ್ಕೆ ಮೆಡಲ್ ಪಡೆದ ದೇಶದ ಹೆಮ್ಮೆಯ ಕುವರ ಲೋಕೇಶ ರಾಠೋಡ ಅವರ ವಿರುದ್ಧ ಪ್ರಕರಣ ದಾಖಲಿಸಿರುವುದು ಆಡಳಿತಾರೂಢ ಕಾಂಗ್ರೆಸ್ ಸರಕಾರದ ಹತಾಶ ಭಾವನೆಯನ್ನು ಎತ್ತಿ ತೋರಿಸುತ್ತಿದೆ. ಮಾತೆತ್ತಿದರೆ ಸಂವಿಧಾನ ಮತ್ತು ಡಾ: ಬಿ. ಆರ್.ಅಂಬೇಡ್ಕರ ಅವರ ಬಗ್ಗೆ ಮಾತನಾಡುವ ಪ್ರಿಯಾಂಕ್ ಖರ್ಗೆ ತಮ್ಮ ಸರಕಾರದ ಭ್ರಷ್ಟಾಚಾರ ಮುಚ್ಚಿ ಹಾಕಲು ಮತ್ತು ಜನರನ್ನು ದಾರಿ ತಪ್ಪಿಸಲು ಹೋರಾಟಗಾರರ ಮೇಲೆ ಪ್ರಕರಣ ದಾಖಲು ಮಾಡುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದರು.

# ಒಳ್ಳೆಯ ಮನುಷ್ಯನಾಗುವುದೇ ದೊಡ್ಡ ಸಾಧನೆ : ಸಂಗಪ್ಪ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜೀವನದಲ್ಲಿ ಒಳ್ಳೆಯ ಮನುಷ್ಯನಾಗುವುದೇ ಒಂದು ದೊಡ್ಡ ಸಾಧನೆಯಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ನಗರದ ಕಲಾಭವನದಲ್ಲಿ ನಡೆದ ಕಾಳಿದಾಸ ಶಿಕ್ಷಣ ಸಂಸ್ಥೆಯ 6ನೇ ವರ್ಷದ 'ಕಾಳಿದಾಸ ಹಬ್ಬ' ವಾರ್ಷಿಕ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಿದ್ದೇಶ್ವರ ಶ್ರೀಗಳು ಹೇಳಿದಂತೆ ಈಗಿನ ವಿದ್ಯಾರ್ಥಿಗಳಲ್ಲಿ ಜ್ಞಾನ ಎಂಬುದು ಬಹು ಮುಖ್ಯವಾಗಿದೆ, ವಿದ್ಯಾರ್ಥಿ ಜೀವನದಲ್ಲಿ ಶಿಕ್ಷಕರ ಜೊತೆ ಒಳ್ಳೆಯ ಗೌರವ, ನಡತೆ ಹಾಗೂ ಮೌಲ್ಯಗಳಿಂದ ಇರುವುದು ಬಹು ಮುಖ್ಯ ಎಂದರು.

ಶಿಕ್ಷಣದಿಂದಲೇ ಬುದ್ದಿ ಬೆಳೆಯುತ್ತದೆ, ಪರಿಶ್ರಮದಿಂದ ಸಂಪತ್ತು ವೃದ್ಧಿಸುತ್ತದೆ. ಹಾಗಾಗಿ ದೇಶಕ್ಕೆ ಮುಂದಿನ ಪೀಳಿಗೆಗೆ ವಿದ್ಯಾರ್ಥಿಗಳು ಬಹುದೊಡ್ಡ ಕೊಡುಗೆಯಾಗಿದ್ದಾರೆ. ಶಿಕ್ಷಕರೇ ಈಗಿನ ಶಿಲ್ಪಕಾರರು ಅವರೇ ಶಿಲ್ಪಿಗಳು ಸಮಾಜದ ಪ್ರತಿಯೊಂದು ಕ್ಷೇತ್ರದಲ್ಲೂ ಸಾಧನೆಗೈಯಲು ಶಿಕ್ಷಕರೇ ಬಹುಮುಖ್ಯ ಕಾರಣವಾಗಿದ್ದು, ಹಾಗಾಗಿ ಶಿಕ್ಷಕರ ಮೇಲೆ ಬಹು ದೊಡ್ಡ ಜವಾಬ್ದಾರಿ ಇದೆ ಎಂದು ಸಂಗಪ್ಪ ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್ ಮಾತನಾಡಿ, ಈಗ ಶಿಕ್ಷಣ ತುಂಬಾ ಬದಲಾಗಿದೆ. ಈಗಿನ ವಿದ್ಯಾರ್ಥಿಗಳು ಸರ್ವತೋಮುಖವಾಗಿ ಬೆಳವಣಿಗೆ ಹೊಂದಬೇಕು. ಕೇವಲ ಪುಸ್ತಕಕ್ಕೆ ಜೋತು ಬೀಳದೆ ಕ್ರೀಡೆ, ಸಾಹಿತ್ಯ ಬೇರೆ ಬೇರೆ ಕ್ಷೇತ್ರಗಳಲ್ಲಿ ಆಸಕ್ತಿ ಇದ್ದರೆ ಪಾಲಕರು ಅವರಿಗೆ ಬೆಂಬಲಕ್ಕೆ ನಿಲ್ಲಬೇಕು ಎಂದು ಮನವಿ ಮಾಡಿದರು.

ಬಿಜೆಪಿ ರಾಜ್ಯ ಕಾರ್ಯದರ್ಶಿ ಶರಣು ತಳ್ಳಿಕೇರಿ ಮಾತನಾಡಿ, ಸಾಧಕರೇ ಈ ದಿನದ ಸಂಪತ್ತು ಹಾಗಾಗಿ ಹೆಚ್ಚೆಚ್ಚು ಸಾಧನೆ ಮಾಡಲು ವಿದ್ಯಾರ್ಥಿಗಳು ಮುಂದಾಗಬೇಕು ಎಂದು ಮನವಿ ಮಾಡಿದವರು. ಶೇಕ್ಸಪಿಯರ್ ಅವರನ್ನು ಮೀರಿಸುವಂತಹ ಕವಿ ಕಾಳಿದಾಸ ಅವರ ಹೆಸರಿನಲ್ಲಿರುವ ಈ ಸಂಸ್ಥೆಯು ಅತ್ಯಂತ ಸಮಾಜಮುಖಿ ಕಾರ್ಯ ಮಾಡುತ್ತಿದೆ ಎಂದು ಶ್ಲಾಘಿಸಿದರು.

ಕುಸ್ತಿ, ಸೈಕ್ಲಿಂಗ್ ಸೇರಿದಂತೆ ಹಲವು ಕ್ರೀಡೆಗಳಲ್ಲಿ ರಾಜ್ಯ, ರಾಷ್ಟ್ರಮಟ್ಟದಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ವಿದ್ಯಾರ್ಥಿಗಳು ಪ್ರದರ್ಶಿಸಿದ ಮಲ್ಲಗಂಬ ನೆರೆದಿದ್ದವರ ಮೈನವಿರಳೆಸಿತು.

ಕಾರ್ಯಕ್ರಮದಲ್ಲಿ ಶಿರೂರಿನ ಕನಕಬ್ರಹ್ಮ ವಿದ್ಯಾಶ್ರಮದ ಚಿನ್ಮಯಾನಂದ ಸ್ವಾಮೀಜಿ, ಡಿಡಿಪಿಯು ಪುಂಡಲಿಕ ಕಾಂಬಳೆ,

ಮುದ್ದೇಬಿಹಾಳ ಎಸ್‌ಜಿಎಂಕೆ ಪಿಯು ಕಾಲೇಜಿನ ಪ್ರಾಂಶುಪಾಲ ಎಸ್.ಕೆ ಹರನಾಳ, ಕಾಳಿದಾಸ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಜಿ.ಎಸ್.ಪಾಟೀಲ್, ಕಾರ್ಯದರ್ಶಿ ಟಿ.ಬಿ ಕುರುಬರ, ಸದಸ್ಯರಾದ ಪಿ.ಎನ್.ಗೌಡರ, ಎಸ್. ವೈ.ನೀಲಾರ್, ವಿ.ಎ.ಪಾಟೀಲ್, ಎಸ್.ಎಸ್.ದೊಡ್ಡಮನಿ, ಜಿ.ಎಂ.ಪಾಟೀಲ್, ಆರ್.ಎಸ್. ಗಡಾದ, ಶಿಕ್ಷಣ ಸಂಸ್ಥೆಯ ವಿವಿಧ ವಿಭಾಗಗಳ ಪ್ರಾಂಶುಪಾಲರಾದ ಆಕಾಶ ಕಾಳಗೆ, ಎಲ್.ವಿ.ವಿರಕ್ತಮಠ, ವೈ.ಬಿ.ಕೆಂಚಣ್ಣವರ, ಆಡಳಿತಾಧಿಕಾರಿ ಆರ್.ಎಸ್.ದಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಸರ್ಕಾರಿ ನೌಕರರ ಜಿಲ್ಲಾಮಟ್ಟದ ಕ್ರೀಡಾಕೂಟ

# ಕೇರಂ ಸ್ಪರ್ಧೆಯಲ್ಲಿ ಜ್ಯೋತಿ ಮುಳ್ಳೂರ ರಾಜ್ಯ ಮಟ್ಟಕ್ಕೆ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಮಹಿಳೆಯರ ಸಿಂಗಲ್ಸ್ ಕೇರಮ್ ವೈಯಕ್ತಿಕ ಸ್ಪರ್ಧೆಯಲ್ಲಿ ಬಾಗಲಕೋಟೆ ಕ್ಷೇತ್ರ ಸಮನ್ವಯ ಅಧಿಕಾರಿಗಳ ಕಾರ್ಯಾಲಯದ ಪ್ರೌಢ ವಿಭಾಗದ ಬಿ.ಆರ್.ಪಿ ಆಗಿರುವ ಶ್ರೀಮತಿ ಜ್ಯೋತಿ ಎಂ. ಮುಳ್ಳೂರ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಗಳಿಸಿದ ಜ್ಯೋತಿ ಮುಳ್ಳೂರ ಅವರಿಗೆ ರಾಜ್ಯ ಸರ್ಕಾರಿ ನೌಕರ ಸಂಘದ ಕಾರ್ಯಾಧ್ಯಕ್ಷ ಎಂ.ಬಿ.ಬಳ್ಳಾರಿ ಪ್ರಶಸ್ತಿ ನೀಡಿ ಅಭಿನಂದಿಸಿದರು.

ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವ ಜ್ಯೋತಿ ಮುಳ್ಳೂರ ಅವರನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ ಹಾಗೂ ಕ್ಷೇತ್ರ ಸಮನ್ವಯ ಅಧಿಕಾರಿ ಸಿ.ವೈ.ಸಂಗಮ, ಶಿಕ್ಷಣ ಸಂಯೋಜಕ ಪಿ.ಬಿ.ಪಾಟೀಲ ಹಾಗೂ ಅಧಿಕಾರಿ ವರ್ಗದವರು ಅಭಿನಂದಿಸಿದ್ದಾರೆ.

# ಥ್ರೀಸ್ಥಾಲಾನ್ ಕ್ರೀಡಾಕೂಟ ರಂಗನಾಥ ಶಾಲೆ ಸಾಧನೆ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ವಿಜಯಪುರ ಜಿಲ್ಲೆಯ ಕೂಡಗಿಯ ಬಾಲಭಾರತಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ನಡೆದ ಅಂತರ ಶಾಲಾ ಕ್ರೀಡೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮವಾದ "ಥ್ರೀಸ್ಥಾಲಾನ್ 2025" ಕ್ರೀಡಾಕೂಟದಲ್ಲಿ ಬೇವಿನಮಟ್ಟಿ ಬಳಿಯ ರಂಗನಾಥ ಅಂತಾರಾಷ್ಟ್ರೀಯ ಶಾಲೆಯ ಮಕ್ಕಳು ವಿವಿಧ ಕ್ರೀಡೆಗಳಲ್ಲಿ ಸಾಧನೆ ತೋರಿದ್ದಾರೆ.

ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ರಂಗನಾಥ ಶಾಲೆಯ ಮಕ್ಕಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿ ತೃತೀಯ ಸ್ಥಾನಕ್ಕೆ ಪಡೆದರೆ. 100 ಮೀ. ಮತ್ತು 200 ಮೀಟರ ಓಟ, ಟೇಬಲ್ ಟೆನಿಸ್, ಬ್ಯಾಡ್ಮಿಂಟನ್, ಚೆಸ್, ಮೀಮ್ ಕ್ರಿಯೇಷನ್, ಭಗವದ್ಗೀತೆ ಶ್ಲೋಕ ಪಠಣ ಹಾಗೂ ಸ್ಮಾರ್ಟ್ ಸ್ಕ್ರೀನ್ ಸ್ಟೋರಿಟೆಲ್ಲಿಂಗ್ ಮುಂತಾದ ಸ್ಪರ್ಧೆಗಳಲ್ಲಿ ಮಹತ್ತರ ಸಾಧನೆ ಮೆರೆದರು.

ಮೀಮ್ ಕ್ರಿಯೇಷನ್, ಸ್ಮಾರ್ಟ್ ಸ್ಕ್ರೀನ್ ಸ್ಟೋರಿಟೆಲ್ಲಿಂಗ್ ಮತ್ತು ಟೇಬಲ್ ಟೆನಿಸ್ ಸ್ಪರ್ಧೆಗಳಲ್ಲಿ ಶಾಲೆಯ ವಿದ್ಯಾರ್ಥಿಗಳು ತೃತೀಯ ಬಹುಮಾನವನ್ನು ಗಳಿಸಿದ್ದಾರೆ. ಸಾಧನೆ ತೋರಿ ಶಾಲೆಗೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಸಂಸ್ಥೆಯ ಕಾರ್ಯದರ್ಶಿ ರುಕ್ಮಾಸಾ ಕಾವಡೆ, ಪ್ರಾಂಶುಪಾಲ ವಿಕ್ರಮ್ ನರ್ವೇಕರ್, ಬೆಂಗಳೂರಿನ ಸೃಜನಶೀಲ ಅಧ್ಯಾಪನ ಕೇಂದ್ರದ ಹಿರಿಯ ತರಬೇತುದಾರ ತ್ರಿವೇಣಿ ಮುರಳಿಧರ, ಶಾಲೆಯ ಉಪಪ್ರಾಚಾರ್ಯೆ ವಸುಧಾ ನರ್ವೇಕರ್, ದೈಹಿಕ ಶಿಕ್ಷಣ ಮುಖ್ಯಸ್ಥ ಪ್ರಕಾಶ ವೆಂಕಣ್ಣವರ ಸೇರಿದಂತೆ ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.



• **ಮಲ್ಲಮ್ಮ ನುಡಿ ಹುಣಸಗಿ:**

**ಸಮೀಪ ಕೊಡೇಕಲ್ ಗ್ರಾಮದ ಬಸವ ಪ್ರಭು ಪದವಿ ಮಹಾವಿದ್ಯಾಲಯ ಹಾಗೂ ಬಸವಜ್ಯೋತಿ ಕೈಗಾರಿಕೆ ಸಂಸ್ಥೆ ಕೊಡೇಕಲ ಅಡಿಯಲ್ಲಿ ರಾಷ್ಟ್ರೀಯ ಯುವ ದಿನ ಅಂಗವಾಗಿ ಸ್ವಾಮಿ ವಿವೇಕಾನಂದರ ಜಯಂತಿ ಆಚರಿಸಲಾಯಿತು ಸಮಯದಲ್ಲಿ ಪ್ರಚಾರ್ಯರಾದ ರವಿಕುಮಾರ ಬಂಟನೂರ, ಶಶಿಕುಮಾರ ಜಾದವ, ಸಂತೋಷ ಕೆಂಡದ, ಸಂಗಮೇಶ ಹಿರೇಮಠ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು ಇದ್ದರು.**

# ವಿವೇಕಾನಂದರು ಯುವಕರ ಸ್ಫೂರ್ತಿ :ಡಾ.ಅರುಣಕುಮಾರ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಸ್ವಾಮಿ ವಿವೇಕಾನಂದರು ಆಧುನಿಕ ಯುಗದ ಶ್ರೇಷ್ಠ ಚಿಂತಕರಲ್ಲಿ ಒಬ್ಬರು. ಭಾರತೀಯ ಸಂಸ್ಕೃತಿಯನ್ನು ವಿಶ್ವಕ್ಕೆ ಪರಿಚಯಿಸಿದ ಸಂತರಾಗಿದ್ದು, ಯುವ ಸಮೂಹದ ಸ್ಫೂರ್ತಿಯಾಗಿದ್ದಾರೆಂದು ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಹೇಳಿದರು.

ಬಾಗಲಕೋಟೆ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಸೋಮವಾರ ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಸ್ವಾಮಿ ವಿವೇಕನಾಂದರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಸ್ವಾಮಿ ವಿವೇಕಾನಂದರ ಜೀವನ, ಅವರು ತೋರಿದ ಸನ್ಮಾರ್ಗಗಳು ಭಾರತೀಯರಿಗೆ ಇಂದಿಗೂ ಆದರ್ಶಪ್ರಾಯವಾಗಿವೆ. ಅವರ ಮಾತುಗಳು ಚಿನ್ನದ ತೂಕಕ್ಕೆ ಸಮವಾಗಿದ್ದವು ಎಂದರು.

ಅವರ ಆಲೋಚನೆಗಳು ಭಾರತೀಯರ ವೈವಿಧ್ಯಮಯ ಬದುಕಿನ ಮೇಲೆ ಪ್ರಭಾವ ಬೀರುತ್ತವೆ. ವಿವೇಕಯುತ ಚಿಂತನೆಗಳು ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯ ಬೆಳಕಿನ ಕೀರ್ತಿ ವಿಶ್ವವನ್ನು ಆವರಿಸಿದೆ. ರಾಮಕೃಷ್ಣ ಪರಮಹಂಸರ ಪರಮ ಶಿಷ್ಯರಾಗಿದ್ದ ಸ್ವಾಮಿ ವಿವೇಕಾನಂದ ರಾಮಕೃಷ್ಣ ಮಿಷನ್ ಸ್ಥಾಪಿಸುವ ಮೂಲಕ ಯುವಕರಿಗೆ ಚೈತನ್ಯವನ್ನು ನೀಡುವ ಕಾರ್ಯವನ್ನು ಮಾಡಿದ್ದಾರೆ. ಅವರ ಆದರ್ಶಗಳನ್ನು ನಾವೆಲ್ಲರೂ ಪಾಲಿಸೋಣ ಎಂದು ಹೇಳಿದರು.

ಪ್ರೊ.ಸಂಪತ್ತ ಲಮಾಣಿ ಸ್ವಾಗತಿಸಿದರು. ಡಾ.ಚಂದ್ರಶೇಖರ ಕಾಳನ್ನವರ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕರು ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಸ್ವಚ್ಛ ನಗರಕ್ಕಾಗಿ ಓಟಕ್ಕೆ ಸಂಸದ ಕುಮಾರ ಜಿ. ನಾಯಕ ಚಾಲನೆ



• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ವರದಿ: ಡಿ.ಕೆ ದೇವಿಂದ್ರ ಯಾದಗಿರಿ.

ರಾಯಚೂರು ಉತ್ಸವ 2026 ಹಾಗೂ ರಾಷ್ಟ್ರೀಯ ಯುವ ದಿನದ ಅಂಗವಾಗಿ ರಾಯಚೂರು ನಗರ ಪಾಲಿಕೆ ಆಯೋಜಿಸಿದ್ದ ಸ್ವಚ್ಛ ನಗರಕ್ಕಾಗಿ ಓಟ ಮ್ಯಾರಥಾನ್ ಕಾರ್ಯಕ್ರಮ ದಲ್ಲಿ ಸಂಸದ ಕುಮಾರ ಜಿ. ನಾಯಕ ಚಾಲನೆ ನೀಡಿದರು. ಈ ವೇಳೆ ಕಾಂಗ್ರೆಸ್ ನಾಯಕರಾದ ರವಿ ಬೋಸರಾಜು, ಕಾಂಗ್ರೆಸ್ ಮುಖಂಡರಾದ ಜಯಣ್ಣ, ರಾಯಚೂರು ಜಿಲ್ಲಾಧಿಕಾರಿಗಳು, ಪಾಲಿಕೆ ಆಯುಕ್ತರು, ಜಿಲ್ಲಾ ಆರೋಗ್ಯಾಧಿಕಾರಿಗಳು, ತಹಶೀಲ್ದಾರ್ ಹಾಗೂ ನಗರ ಪಾಲಿಕೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಕುಂದು ಕೊರತೆಗಳ ಆಲಿಕೆಯ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಬೀದರ:**

ನಿರ್ದೇಶನಾಲಯ ಸೈನಿಕ ಕಲ್ಯಾಣ ಮತ್ತು ಪುರ್ನವಸತಿ ಇಲಾಖೆ ಬೆಂಗಳೂರು ಇವರು ದಿನಾಂಕ 14-01-2026 ರಂದು ಸಶಸ್ತ್ರ ಪಡೆಗಳ ಯೋಧರ ದಿನ (ARMED FORCES VETERAN'S DAY) ಅಂಗವಾಗಿ ಮಾಜಿ ಸೈನಿಕರು ಹಾಗೂ ಅವಲಂಬಿತರುಗಳಿಗೆ ದೂರವಾಣಿ ಮೂಲಕ ಕುಂದು ಕೊರತೆಗಳ ಆಲಿಕೆಯ ಕಾರ್ಯಕ್ರಮವನ್ನು ಆಯೋಜಿಸಲಾಗಿರುತ್ತದೆ.

ನಿರ್ದೇಶಕರು (ಪ್ರಭಾರ) ಹಾಗೂ ಜಂಟಿ ನಿರ್ದೇಶಕರು ಇವರು ಎಲ್ಲಾ ಮಾಜಿ ಸೈನಿಕರ ಹಾಗೂ ಅವರ ಅವಲಂಬಿತರ ದೂರವಾಣಿ ಕರೆಗಳನ್ನು ಸ್ವೀಕರಿಸಿ, ಅವರ ಅವಾಲುಗಳನ್ನು ಸ್ವೀಕರಿಸುವರು. ಮಾಜಿ ಸೈನಿಕರು ಮತ್ತು ಅವರ ಅವಲಂಬಿತರು ತಮ್ಮ ಕುಂದು ಕೊರತೆಗಳನ್ನು ಪ್ರಸ್ತಾಪಿಸಲು ಸ್ಥಿರ ದೂರವಾಣಿ ಸಂಖ್ಯೆ : 080-25589459 ಅಥವಾ ಮೊಬೈಲ್ ದೂರವಾಣಿ ಸಂಖ್ಯೆಗಳು : 8105233863, 9871103814, 7892289635 ಗಳಿಗೆ ಕರೆ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08472-225003 ಗೆ ಸಂಪರ್ಕಿಸಬಹುದಾಗಿದೆ ಎಂದು ಉಪ ನಿರ್ದೇಶಕರು ಸೈನಿಕ ಕಲ್ಯಾಣ ಮತ್ತು ಪುರ್ನವಸತಿ ಇಲಾಖೆ ಕಲಬುರಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆದರ್ಶ ದಂಪತಿ ಪ್ರಶಸ್ತಿ



• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ:**

ಕರ್ನಾಟಕ ಶಿಕ್ಷಕರ ಸಂಘಗಳ ಪರಿಷತ್ತು ಧಾರವಾಡ ಹಾಗೂ ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘ ರೀ ಬೀದರ ಸಂಯುಕ್ತಾಶ್ರಯದಲ್ಲಿ ಮಾತೋಶ್ರೀ ರಮಾಬಾಯಿ ಅಂಬೇಡ್ಕರ ಅವರ ಜಯಂತಿ ಉತ್ಸವ ನಿಮಿತ್ಯವಾಗಿ ರಾಜ್ಯಮಟ್ಟದ ಆದರ್ಶ ದಂಪತಿ ಪ್ರಶಸ್ತಿಗೆ ತಾಲೂಕಿನ ಮುಧೋಳ (ಬಿ) ಗ್ರಾಮದ ಶರಣ ಜೀವಿಗಳಾದ ಶರಣೆ ಮಹಾದೇವಿ ಶರಣ ನಾಗಯ್ಯ ಸ್ವಾಮಿಯವರಿಗೆ ಇತ್ತೀಚಿಗೆ ಸರ್ಕಾರಿ ನೌಕರರ ಸಮುದಾಯ ಭವನ ಪ್ರತಾಪನಗರನಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಪೂಜ್ಯ ಸಿದ್ರಾಮ ಬೆಲ್ದಾಳ, ಪರಮಪೂಜ್ಯ ಬಾಲ ಯೋಗಿ ಸುವರ್ಣ ಮಾತಾಜಿ, ಕರ್ನಾಟಕ ಶಿಕ್ಷಕರ ಸಂಘ ಪರಿಷತ್ತು ಧಾರವಾಡ ಹಾಗೂ ಶ್ರೀ ಪಾಂಡುರಂಗ ಬೆಲ್ದಾರ ಉಪಸ್ಥಿತರಿದ್ದರು.

ಈ ಕೂರಿತು ಮಾತನಾಡಿದ ಶರಣ ಜೀವಿ ನಾಗಯ್ಯ ಸ್ವಾಮಿ ನಮ್ಮ 32 ವರ್ಷದ ದಾಂಪತ್ಯ ಜೀವನ ಅನೇಕ ಕಷ್ಟ, ದುಃಖ ನೋವು ಏನು ಬಂದರು ಒಬ್ಬರನ್ನು ಒಬ್ಬರು ಅರ್ಥ ಮಾಡಿಕೊಂಡು ಪ್ರೀತಿ, ವಿಶ್ವಾಸದಿನ ಸಮಾಜ ಸೇವೆ ಮಾಡುತ ಅದರಲ್ಲೆ ಸ್ವರ್ಗ ಕಂಡಿದ್ದೇವೆ. ಬಾಳ ಸಂಗತಿಯನ್ನು ಅರ್ಥೈಸಿ ಕೊಂಡಿಸಾಗಿದರೆ ಯಾವುದೇ ವೈಮನಸು ಬರುವುದಿಲ್ಲ ಎಂದು ಕಿವಿ ಮಾತು ಹೇಳಿದರು.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ರಾಯಚೂರು : ಇಲ್ಲಿನ ಪಶ್ಚಿಮ ಪೊಲೀಸ್ ಠಾಣೆ ವ್ಯಾಪ್ತಿಯ ಅಸ್ಕಿಹಾಳ ನಿವಾಸಿ ಆಂಜನೇಯ (62) ಅವರು ಸೆಪ್ಟೆಂಬರ್ 14ರ ಮಧ್ಯಾಹ್ನ 12.30ಕ್ಕೆ ಮನೆಯಲ್ಲಿ ಊಟ ಮಾಡಿ ಹೊರಗೆ ಹೋದವನ್ನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಠಾಣಾ ಅಪರಾಧ ಸಂಖ್ಯೆ: 128/2025 ಕಲಂ ಮನುಷ್ಯ ಕಾಣೆ ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ತಮ್ಮ ತಂದೆಯ ಮೊಬೈಲ್ ಸಂಖ್ಯೆ: 9008104144ಗೆ ಅಂದು ಸಂಜೆ ಕರೆ ಮಾಡಿ ವಿಚಾರಿಸಿದಾಗ ಅವರು ಬರುತ್ತೇನೆ ಬಿಡು ಎಂದು ಸಿಟ್ಟು ಮಾಡಿದರು. ನಂತರ ಸಂಜೆ 4 ಗಂಟೆಗೆ ಕರೆ ಮಾಡಿದಾಗ ಅವರ ಮೊಬೈಲ್ ಸ್ವಿಚ್ಡ್ ಆಫ್ ಬಂದಿದೆ. ಕಾಣೆಯಾದ ತಮ್ಮ ತಂದೆಯ ಬಗ್ಗೆ ಸಂಬಂಧಿಕರ ಮನೆಯಲ್ಲಿ ಹುಡುಕಾಡಿದಾಗ ಪತ್ತೆಯಾಗಿರುವುದಿಲ್ಲ ಎಂದು ಕಾಣೆಯಾದ ಆಂಜನೇಯ ಅವರ ಪುತ್ರ, ನಾಗರಕಟ್ಟೆಯ ಕೃಷ್ಣಮೆಡೌಸ್‌ನಲ್ಲಿ ವಾಚಮನ್ ಆಗಿ ಕೆಲಸ ಮಾಡುವ ರಮೇಶ ಅವರು ದೂರು ದಾಖಲಿಸಿದ್ದಾರೆ.ಕಾಣೆಯಾದ ವ್ಯಕ್ತಿಯ ಚಹರೆ: ಕಾಣೆಯಾದ ಆಂಜನೇಯ ಅವರು 5.6 ಎತ್ತರ, ತೆಳ್ಳನೆಯ ಮೈಕಟ್ಟು, ಗೋಧಿ ಮೈಬಣ್ಣ, ಉದ್ದನೆಯ ಮುಖ, ತಲೆಯಲ್ಲಿ ಕಪ್ಪು ಕೂದಲು ಹೊಂದಿದ್ದು, ಬಿಳಿ ಪಂಚೆ, ಬಿಳಿ ಜುಬ್ಬ ಹಾಗೂ ಹಸಿರು ಟಾವೆಲ್ ಬಟ್ಟೆಗಳನ್ನು ಧರಿಸಿರುತ್ತಾರೆ. ಕನ್ನಡ, ತೆಲುಗು, ಇಂಗ್ಲೀಷ್ ಹಾಗೂ ಹಿಂದಿ ಭಾಷೆ ಮಾತನಾಡುತ್ತಾರೆ.

### ಬಾಗಲಕೋಟೆ ಜಿಲ್ಲಾ ಪತ್ರಕರ್ತರಿಗೆ ಕುಟುಂಬ ಆರೋಗ್ಯ ಹೆಲ್ತ್ ಕಾರ್ಡ

# ಆರೋಗ್ಯ ಕಾಪಾಡಿಕೊಂಡರೆ ಸಂಪತ್ತು ಗಳಿಸಿದಂತೆ-ಶಾಸಕ ಸುನೀಲಗೌಡ




• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಇಂದಿನ ಒತ್ತಡದ ಜೀವನದಲ್ಲಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವುದು ಹೆಚ್ಚುವರಿ ಸಂಪತ್ತು ಗಳಿಸಿದಂತೆ ಎಂದು ವಿಜಯಪುರದ ಬಿಎಲ್‌ಡಿಇ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ್ ಶಾಸಕ ಸುನೀಲಗೌಡ ಪಾಟೀಲ ಹೇಳಿದ್ದಾರೆ.

ವಿಜಯಪುರದಲ್ಲಿ ಸೋಮವಾರ ಬಿಎಲ್‌ಡಿಇ ಟ್ರಾಮಾ ಸೆಂಟರ ಮಿನಿ ಆಡಿಟೋರಿಯಂನಲ್ಲಿ ಬಾಗಲಕೋಟೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರಿಗೆ ಆರೋಗ್ಯ ಯೋಜನೆ 'ಕುಟುಂಬ ಆರೋಗ್ಯ ಹೆಲ್ತ್ ಕಾರ್ಡ' ವಿತರಿಸಿ ಅವರು ಮಾತನಾಡಿದರು.

ಆರೋಗ್ಯವೇ ಭಾಗ್ಯ ಎಂಬಂತೆ ಈಗ ಉತ್ತಮ ಮತ್ತು ಸದೃಢ ಆರೋಗ್ಯ ಹೊಂದುವುದು ಮಹತ್ವದ್ದಾಗಿದೆ. ಮನುಷ್ಯ ಬದುಕಿರುವವರೆಗೂ ಯಾವುದೇ ಆರೋಗ್ಯ ಸಮಸ್ಯೆಗೆ ಒಳಗಾಗದೇ ಹಾಗೂ ಪರಾವಲಂಬಿ ಜೀವನ ಸಾಗಿಸದೇ ಸ್ವಾವಲಂಬಿಯಾಗಿ ಬದುಕುವುದು ಅಗತ್ಯವಾಗಿದೆ ಎಂದ ಸುನೀಲಗೌಡ, ಹೀಗಾಗಿ ಉತ್ತಮ ಆರೋಗ್ಯವನ್ನು ಇಂದು ಹೆಚ್ಚುವರಿ ಸಂಪತ್ತು ಪರಿಗಣಿಸಬೇಕಾಗಿದೆ ಎಂದರು.

ಬಿಎಲ್‌ಡಿಇ ನಗರ ಆರೋಗ್ಯ ಕೇಂದ್ರದಲ್ಲಿ ಒಂದೇ ಸೂರಿನಡಿ ಆಯುರ್ವೇದ ಮತ್ತು ಅಲೋಪಥಿ ಚಿಕಿತ್ಸೆ ಸೌಲಭ್ಯ ಒದಗಿಸಲಾಗಿದೆ. ಮುಂಬರುವ ದಿನಗಳಲ್ಲಿ ಬಾಗಲಕೋಟೆ ಜಿಲ್ಲೆಯ ಜಮಖಂಡಿಯಲ್ಲಿ ಹೊಸ ಆಯುರ್ವೇದ ಕಾಲೇಜು ಪ್ರಾರಂಭಿಸಲು ಚಿಂತನೆ ನಡೆಸಲಾಗಿದೆಯಲ್ಲದೇ ಅಲ್ಲಿಯೂ ನಗರ ಆರೋಗ್ಯ ಕೇಂದ್ರ ಪ್ರಾರಂಭಿಸಲಾಗುವುದು ಎಂದು ಅವರು ಹೇಳಿದರು.

ಪತ್ರಕರ್ತರ ಸಮಸ್ಯೆಗಳ ಬಗ್ಗೆ ತಮಗೆ ಅರಿವಿದ್ದು, ನಮ್ಮ ತಂದೆಯವರ ಕಾಲದಿಂದಲೂ ಉತ್ತಮ ಬಾಂಧವ್ಯವಿದೆ. ಮಾಧ್ಯಮ ಪ್ರತಿನಿಧಿಗಳು ಮತ್ತು ಅವರ ಕುಟುಂಬದ ಸದಸ್ಯರಿಗೆ ಆರೋಗ್ಯ ಸಮಸ್ಯೆ ಉಂಟಾದಾಗ ಈ ಹೆಲ್ತ್ ಕಾರ್ಡ್ ಉಪಯೋಗವಾಗಲಿದೆ ಎಂದು ಶಾಸಕರು ಹೇಳಿದರು.

ಬಿಎಲ್‌ಡಿಇ ಡೀಮ್ಡ್ ವಿಶ್ವವಿದ್ಯಾಲಯದ ಸಮಕುಲಾಧಿಪತಿ ಡಾ.ವೈ.ಎಂ.ಜಯರಾಜ ಮಾತನಾಡಿ, ಕಳೆದ 75 ವರ್ಷಗಳಲ್ಲಿ ಆರೋಗ್ಯ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆ-ಯಾಗಿದ್ದು, ತಾಯಿ ಮತ್ತು ಶಿಶು ಮರಣ ಸಂಖ್ಯೆ ಕಡಿಮೆಯಾಗಿದೆ. ಉತ್ತಮ ಆರೋಗ್ಯ ಸೇವೆಗಳಿಂದಾಗಿ ರೋಗಿಗಳಿಗೆ ಅನುಕೂಲವಾಗಿದೆ. ವೈದ್ಯರು ತಮ್ಮ ವೃತ್ತಿಸಂಹಿತೆಯನ್ನು ಪಾಲಿಸುತ್ತ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುತ್ತಿದ್ದಾರೆ. ಬಿಎಲ್‌ಡಿಇ ಆಸ್ಪತ್ರೆಯಲ್ಲಿ ಅತ್ಯಾಧುನಿಕ ಚಿಕಿತ್ಸಾ ಸೌಲಭ್ಯಗಳು ಲಭ್ಯವಿವೆ ಎಂದು ಹೇಳಿದರು.ಕುಲಪತಿ ಡಾ.ಅರುಣ ಇನಾಮದಾರ ಮಾತನಾಡಿ, ನಾನಾ ಕಾಯಿಲೆಗಳಿಂದ ಬಳಲುವವರಿಗೆ ಇಂದು ಅಂಗಾಂಗ ದಾನದ ಮೂಲಕ ಮರುಜೀವ ನೀಡಬಹುದಾಗಿದೆ. ಮೃತ ವ್ಯಕ್ತಿಯ ಒಂದು ನೇತ್ರದಾನ ಮಾಡುವುದರಿಂದ ನಾಲ್ಕು ಜನರ ಬಾಳಿಗೆ ಬೆಳಕು ನೀಡಬಹುದಾಗಿದೆ. ಹೀಗಾಗಿ ಎಲ್ಲರೂ ಅಂಗಾಂಗ ಮತ್ತು ದೇಹದಾನದ ಬಗ್ಗೆ ಜಾಗೃತರಾಗಬೇಕಿದೆ. ಆಗಾಗ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಸಂಭವನೀಯ ಅನಾರೋಗ್ಯ ಸಮಸ್ಯೆಗಳಿಗೆ ಕಡಿವಾಣ ಹಾಕಬಹುದಾಗಿದೆ ಎಂದರು.

ಬಿ.ಎಂ.ಪಾಟೀಲ ವೈದ್ಯಕೀಯ ಕಾಲೇಜಿನ ಪ್ರಾಚಾರ್ಯೆ ಡಾ. ತೇಜಸ್ವಿನಿ ವಲ್ಲಭ, ಆಸ್ಪತ್ರೆಯಲ್ಲಿ ನೀಡಲಾಗುವ ಚಿಕಿತ್ಸೆ ಮತ್ತು ಸೌಲಭ್ಯಗಳು, ನಾನಾ ಆರೋಗ್ಯ ವಿಮೆಗಳು ಹಾಗೂ ವಿರಳ ಶಸ್ತ್ರಚಿಕಿತ್ಸೆಗಳ ಕುರಿತು ಮಾಹಿತಿ ನೀಡಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮಹೇಶ ಅಂಗಡಿ ಮಾತನಾಡಿ, ಸಂಘದ ಸದಸ್ಯರಿಗೆ ಹೆಲ್ತ್ ಕಾರ್ಡ್ ನೀಡುವುದಾಗಿ ಭರವಸೆ ನೀಡಿದ್ದ ಶಾಸಕ ಸುನೀಲಗೌಡ ಪಾಟೀಲ ಅವರು ಕೆಲವೇ ದಿನಗಳಲ್ಲಿ ಅದನ್ನು ಈಡೇರಿಸುವ ಮೂಲಕ ಪತ್ರಕರ್ತರಿಗೆ ನೆರವಾಗಿದ್ದಾರೆ. ಅವರಿಗೆ ಜಿಲ್ಲೆಯ ಪತ್ರಕರ್ತರ ಪರವಾಗಿ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಶಾಸಕ ಸುನೀಲಗೌಡ ಪಾಟೀಲ ಅವರನ್ನು ಬಾಗಲಕೋಟೆ ಜಿಲ್ಲಾ ಪತ್ರಕರ್ತರ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಸನ್ಮಾನಿಸಿದರು.

ಬಿಎಲ್‌ಡಿಇ ಸಂಸ್ಥೆಯ ಆಯುರ್ವೇದ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರಕ್ಕೆ ಭೇಟಿ ನೀಡಿದ ಪತ್ರಕರ್ತರು ಅಲ್ಲಿರುವ ಸೌಲಭ್ಯಗಳನ್ನು ವೀಕ್ಷಿಸಿದರು. ಡಾ.ಸಂಜಯ ಕಡ್ಲಿಮಟ್ಟಿ, ಪ್ರಾಚಾರ್ಯ ಡಾ.ಅಶೋಕ ಪಾಟೀಲ, ಡಾ.ಶಶಿಧರ ನಾಯಕ ಆಸ್ಪತ್ರೆಯ ಸೌಲಭ್ಯ ಕುರಿತು ಮಾಹಿತಿ ನೀಡಿದರು.

ಕಾಲೇಜಿನ ಉಪಪ್ರಾಚಾರ್ಯ ಡಾ.ವಿಜಯಕುಮಾರ ಕಲ್ಯಾಣಪ್ಪಗೋಳ, ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಎಸ್.ಎನ್.ಬೆಂತೂರ, ಉಪ ಅಧೀಕ್ಷಕ ಡಾ.ರವಿ ಬಿರಾದಾರ, ಟ್ರಾಮಾ ಸೆಂಟರ್ ಆಡಳಿತಾಧಿಕಾರಿ ಡಾ.ಶರಣಪ್ಪ ಕಟ್ಟಿ, ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಶೋಕ ತರಡಿ, ಟ್ರಾಮಾ ಸೆಂಟರ್ ತುರ್ತು ಚಿಕಿತ್ಸೆ ಘಟಕದ ಮುಖ್ಯ ವೈದ್ಯಾಧಿಕಾರಿ ಡಾ.ಈರಣ್ಣ ಎಸ್.ಧಾರವಾಡಕರ, ಆಸ್ಪತ್ರೆ ಆಡಳಿತಾಧಿಕಾರಿ ಏಕನಾಥ ಜಾಧವ, ಬಿ.ಎಲ್.ಡಿ.ಇ ಸಂಸ್ಥೆಯ ಮಾಧ್ಯಮ ಸಮನ್ವಯಕಾರ ಮಹೇಶ ವಿ.ಶಟಗಾರ, ಬಾಗಲಕೋಟೆ ಜಿಲ್ಲೆ ಪತ್ರಕರ್ತರ ಸಂಘಗಳ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

# ಆರು ದಶಕಗಳಿಂದ ಜನಸೇವೆ ಮಾಡಿದ ಜನನಾಯಕ

• **ಪರಶುರಾಮ ಕರಣಂ, ಭಾಲ್ಕಿ**

ಕ್ಷೇತ್ರದ ಹಿರಿಯ ಜೀವಿ, ಶತಾಯಿಷಿ ಡಾ.ಭೀಮಣ್ಣ ಖಂಡ್ರೆ ಅವರು ನಿರಂತರವಾಗಿ ಆರು ದಶಕಗಳಿಗೂ ಹೆಚ್ಚು ಕಾಲ ಸಾರ್ವಜನಿಕ ಜೀವನದಲ್ಲಿದ್ದು ಅನೇಕ ಜನಪರ ಮತ್ತು ಜೀವಪರ ಕಾರ್ಯಗಳು ಕೈಗೊಳ್ಳುವ ಮೂಲಕ ಜನರ ಪಾಲಿನ ದೇವರಾಗಿದ್ದಾರೆ. ಖಂಡ್ರೆ ಮನೆತನ ಜಿಲ್ಲೆಯ ಪ್ರತಿಷ್ಠಿತ ಪರಿವಾರ. ಅಧಿಕಾರ ಇರಲಿ ಬಿಡಲಿ ಜನ ಸೇವೆಗೆ ಈ ಕುಟುಂಬ ಮುಡಿಪಾಗಿಟ್ಟಿದೆ.

ಇಂದಿನ ದಿನಗಳಲ್ಲಿ ಜನ ಬೆಂಬಲ ಸಿಗೋದು ಕಷ್ಟ ಇನ್ನೂ ನಿರಂತರವಾಗಿ ಜನರ ವಿಶ್ವಾಸ ಉಳಿಸಿಕೊಳ್ಳುವುದು ಸವಾಲಿನ ಕೆಲಸ.

ಆದರೆ, ಖಂಡ್ರೆ ಪರಿವಾರ ಆರು ದಶಕಗಳಿಂದ ಅಧಿಕಾರ ಗದ್ದುಗೆಯಲ್ಲಿದ್ದು ಜನಪರ ಕಾರ್ಯಗಳನ್ನು ಮುಂದುವರೆಸಿ ಕೊಂಡು ಬರುತ್ತಿರುವುದು ಮಾದರಿ ಎನಸಿದೆ. ಏಳೆಂಟು ದಶಕಗಳಿಂದ ಜನರ, ಸಮಾಜ ಸೇವೆಯಲ್ಲಿರುವ ಈ ಪರಿವಾರಕ್ಕೆ ಜನರ ಬೆಂಬಲ ದೊರೆಯುತ್ತಿರುವುದು ನೋಡಿದರೇ ಪರಿವಾರ ಜನರಿಗೆ ತೋರಿಸುತ್ತಿರುವ ಪ್ರೀತಿ, ಕಾಳಜಿ ಎಂತಹದ್ದು ಎನ್ನುವುದು ಗೊತ್ತಾಗುತ್ತದೆ. ಜನರು ಅಧಿಕಾರ ಕೊಟ್ಟಿದ್ದಾರೆ. ಜನರ ಋಣ ತೀರಿಸಿವುದು ನಮ್ಮ ಕರ್ತವ್ಯ ಎಂದರಿತಿರುವ ಈ ಪರಿವಾರ ಶೈಕ್ಷಣಿಕ, ಸಾಮಾಜಿಕ, ರಾಜಕೀಯ ಕ್ಷೇತ್ರದ ಮೂಲಕ ಯಾವುದೇ ಪ್ರಚಾರ ಬಯಸದೇ ತನ್ನ ಕೊಡುಗೆಯನ್ನು ನೀಡುತ್ತ ಬರುತ್ತಿದೆ.

1936 ರಲ್ಲಿ ಸ್ಥಾಪಿಸಿದ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯಡಿ ವಿವಿಧ ಶಾಲಾ–ಕಾಲೇಜು ತೆರೆದು ಗಡಿ ಜಿಲ್ಲೆಯ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವ ಮೂಲಕ ಜಿಲ್ಲೆಯ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾಗಿ ಬೆಳೆದಿದೆ. ಕಬ್ಬು ಕಾರಖಾನೆಗೆ ಸಾಗದಿರುವುದು, ಸೂಕ್ತ



ಬೆಲೆ ಸಿಗದ ಸಂದರ್ಭದಲ್ಲಿ ಜಿಲ್ಲೆಯ ಬೀದರ್ ಸಹಕಾರ ಸಕ್ಕರೆ ಕಾರಖಾನೆ, ಮಹಾತ್ಮ ಗಾಂಧಿ ಸಕ್ಕರೆ ಕಾರಖಾನೆಗೆ ಶಕ್ತಿ ತುಂಬಿ ರೈತರ ಅನುಕೂಲ ಮಾಡಿಕೊಟ್ಟಿದೆ.

ಜಿಲ್ಲೆಯ ಕಾರಂಜಾ ಸೇರಿ ಮತ್ತಿತರ ಯೋಜನೆಗಳಿಗೆ ಜೀವ ತುಂಬಿ ಸಾವಿರಾರೂ ಎಕರೆ ಜಮೀನಿಗೆ ನೀರು ಹರಿಸಿ ರೈತರನ್ನು ಆರ್ಥಿಕವಾಗಿ ಸದೃಡವನ್ನಾಗಿ ಮಾಡುವುದರ ಜತೆಗೆ ದುಡಿಯುವ ಕೈಗಳಿಗೆ ಕೆಲಸ ನೀಡಿದ ಶ್ರೇಯಸ್ಸು ಖಂಡ್ರೆ ಪರಿವಾರಕ್ಕೆ ಸಲ್ಲುತ್ತದೆ. ಆ ಕಾರಣಕ್ಕಾಗಿಯೇ ಜಿಲ್ಲೆಯ ಜನರು ಖಂಡ್ರೆ ಪರಿವಾರವನ್ನು ಅತ್ಯಂತ ಪ್ರೀತಿಯಿಂದ ಕಾಣುತ್ತಾರೆ ಎಂದು ಹೇಳಿದರೆ ತಪ್ಪಾಗಲಿಕ್ಕಿಲ್ಲ. ಆ ಕಾರಣಕ್ಕಾಗಿಯೇ ಈ ಪರಿವಾರ ಜಿಲ್ಲೆ, ರಾಜ್ಯ, ರಾಷ್ಟ್ರ ಮಟ್ಟದಲ್ಲಿ ವಿಶಿಷ್ಟವಾಗಿ ಬೆಳೆದು ನಿಂತಿದೆ.

**ಡಾ.ಭೀಮಣ್ಣ ಖಂಡ್ರೆ ಹೆಜ್ಜೆಗುರುತು:** 40–50ರ ದಶಕಗಳ ಸಂದರ್ಭದಲ್ಲಿ ಅನಿರೀಕ್ಷಿತವಾಗಿ ಹೋರಾಟದ ಹಾದಿ ಮೂಲಕ ಸಮಾಜ ಸೇವೆಗಿಳಿದ ಡಾ.ಭೀಮಣ್ಣ ಖಂಡ್ರೆ ಅವರು ಮುಂದೆ ನಡೆದಿದ್ದು ಎಲ್ಲವೂ ದಂತ ಕಥೆ–ಯಾಗಿ ನಿಲ್ಲುತ್ತದೆ.

ಗಡಿ ಭಾಗದ ರಕ್ಷಣೆಗಾಗಿ ಮನೆ, ಮಠ ಬಿಟ್ಟು ನಿಜಾಂನ ಆಡಳಿತದ ವಿರುದ್ಧದ ಹೋರಾಟ, ರೈಲ್ ರೋಕೋದಂತಹ ಹಮ್ಮಿಕೊಂಡ ಚಳುವಳಿ ಇಂದಿನ ಯುವ ಪೀಳಿಗೆ, ಹೋರಾಟಗಾರರಿಗೆ ಮಾದರಿಯಾಗಿ ನಿಲ್ಲುತ್ತದೆ. ಬಳಿಕ ಭಾಲ್ಕಿ ಪುರಸಭೆಯ ಮೊದಲ ಅಧ್ಯಕ್ಷರಾಗಿ ಡಾ.ಭೀಮಣ್ಣ ಖಂಡ್ರೆ ಅವರು ರಾಜಕೀಯ ಪ್ರವೇಶ ಮಾಡಿದರು. ಶಾಸಕರಾಗಿ, ವಿಧಾನ ಪರಿಷತ್ ಸದಸ್ಯರಾಗಿ ಮತ್ತು ಮಂತ್ರಿಯಾಗಿ ಅವರು ಜಿಲ್ಲೆ ಅಭಿವೃದ್ಧಿ ಸೇರಿ ರಾಜ್ಯದಲ್ಲಿಯೇ ಒಬ್ಬ ಪ್ರಭಾವಿ ಲೀಡರ್ ಆಗಿ ಸಾಮಾಜಿಕ, ಸಹಕಾರ ಕ್ಷೇತ್ರದಲ್ಲಿ ನೀಡಿರುವ ಕೊಡುಗೆ ಸದಾಕಾಲ ನೆನಪಿನಲ್ಲಿ ಉಳಿಯುತ್ತದೆ.



1946–47 ರಲ್ಲಿ ಸ್ವಾತಂತ್ರ ಚಳುವಳಿ ಮೂಲಕ ಹೋರಾಟಕ್ಕೆ ಎಂಟ್ರಿ ಕೊಟ್ಟ ಭೀಮಣ್ಣ ಖಂಡ್ರೆ ಅವರು ನಂತರದ ದಿನಗಳಲ್ಲಿ ಕಲ್ಯಾಣ(ಹೈದ್ರಾಬಾದ್) ಕರ್ನಾಟಕ ವಿಮೋಚನೆಗಾಗಿ ನಿಜಾಂನ ಆಡಳಿತ ವ್ಯವಸ್ಥೆ ವಿರುದ್ಧ ಸಾಕಷ್ಟು ಪ್ರತಿಭಟನೆ, ಹೋರಾಟ, ಚಳುವಳಿ, ನಡೆಸಿ ಈ ಭಾಗ ಅಖಂಡ ಕರ್ನಾಟಕದಲ್ಲಿ ಉಳಿಯುವಂತೆ ಮಾಡಿದರು. 1949–50 ರಲ್ಲಿ ಹಲವು ಸಂಘಟನೆಗಳ ಮೂಲಕ ಹೋರಾಟದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದ ಭೀಮಣ್ಣ ಖಂಡ್ರೆ ಅವರು ಆಚಾರ್ಯ ನರೇಂದ್ರದೇವ, ಜಯಪ್ರಕಾಶನಾರಾಯಣ, ರಾಮಮನೋಹರ ಲೋಹಿಯಾ, ಅಶೋಕ ಮೇಹ್ತಾ ಸೇರಿ ಹಲವರ ಪ್ರಭಾವ ರಾಜಕೀಯಕ್ಕೆ ಬರುವಂತೆ ಪ್ರೇರಣೆ ನೀಡಿತು.

ಆರಂಭದಲ್ಲಿ ಪ್ರಜಾ ಸಮಾಜವಾದಿ ಪಕ್ಷದ ಕಾರ್ಯಕರ್ತನಾಗಿ ರಾಜಕೀಯ ಇನಿಂಗ್ಸ್ ಆರಂಭಿಸಿದ ಇವರು ಮತ್ತೆ ಹಿಂತಿ–ರುಗಿ ನೋಡಲಿಲ್ಲ. ರಾಜಕೀಯದಲ್ಲಿ ಸಾಕಷ್ಟು ಏಳು ಬೀಳು ಕಂಡರೂ ಕೂಡ ಈ ಕ್ಷೇತ್ರವನ್ನು ಬಹುಪಾಲು ಯಶಸ್ವಿಯಾಗಿ ಮಾಡಿ ಕೊಂಡಿದ್ದಾರೆ ಎನ್ನುವುದಕ್ಕೆ ಅವರು ಮಾಡಿರುವ ಸಾಧನೆಗಳೇ ಸಾಕ್ಷಿಯಾಗಿವೆ.

**1953 ರಲ್ಲಿ ಭಾಲ್ಕಿ ಪುರಸಭೆಗೆ ಮೊದಲ ಚುನಾಯಿತ ಅಧ್ಯಕ್ಷರಾಗಿ ಭೀಮಣ್ಣ ಖಂಡ್ರೆ ಆಯ್ಕೆ:** 1953 ರಲ್ಲಿ ಭಾಲ್ಕಿಗೆ ರಚನೆಯಾಗಿದ್ದ ಪುರಸಭೆಗೆ ಮೊದಲ ಚುನಾಯಿತ ಅಧ್ಯಕ್ಷರಾಗಿ ಭೀಮಣ್ಣ ಖಂಡ್ರೆ ಅವರು ಅಧ್ಯಕ್ಷರಾಗಿ ಪಟ್ಟಣದಲ್ಲಿನ ರಸ್ತೆ, ಚರಂಡಿ, ಬೀದಿದೀಪ, ಕೃಷಿ ಉತ್ಪನ್ನ ಮಾರುಕಟ್ಟೆ ನಿರ್ಮಾಣ ಸೇರಿ ಮುಂತಾದ ಅಭಿವೃದ್ಧಿ ಕೆಲಸಗಳು ಕೈಗೊಂಡಿದ್ದರು. 1957–58 ರಲ್ಲಿ ನಡೆದ ದ್ವಿತೀಯ ಸಾರ್ವತ್ರಿಕ ಚುನಾವಣೆಯಲ್ಲಿ ಭಾಲ್ಕಿ–ಔರಾದ್ ಸಂಯುಕ್ತ ಕ್ಷೇತ್ರದಿಂದ ವಿಧಾನ ಸಭೆಗೆ ಸ್ಪರ್ಧಿಸಿ ಪರಾಭಗೊಂಡರು.

1962ರಲ್ಲಿ ಭಾಲ್ಕಿ ಕ್ಷೇತ್ರದಿಂದ ಪ್ರಜಾ ಸಮಾಜವಾದಿ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿ ಇವರು ಮೊದಲ ಬಾರಿಗೆ ವಿಧಾನ ಸಭೆಯ ಮೆಟ್ಟಲೇರಿದರು. ನಂತರದ ದಿನಗಳಲ್ಲಿ ಅಶೋಕ ಮೇಹ್ತಾ ನೇತೃತ್ವದ ಪ್ರಜಾ ಸಮಾಜವಾದಿ ಪಕ್ಷ ಕಾಂಗ್ರೆಸ್‌ನಲ್ಲಿ ವಿಲೀನಗೊಂಡಿತು. ಅಂದಿನ ಶಾಸಕರಾಗಿದ್ದ ಭೀಮಣ್ಣ ಖಂಡ್ರೆ ಅವರು ಸೇರಿ ಹಲವರು ಕಾಂಗ್ರೆಸ್ ಸೇರ್ಪಡೆಗೊಂಡರು.

1967, 1978, 1983ರಲ್ಲಿ ಕ್ರಮವಾಗಿ ಭಾಲ್ಕಿ ಕ್ಷೇತ್ರದ ಶಾಸಕರಾಗಿ ಈ ಭಾಗದ ಅಭಿವೃದ್ಧಿಗೆ ವಿವಿಧ ಯೋಜನೆಗಳನ್ನು ಜಾರಿ ತಂದಿದ್ದರು. 1988ರಲ್ಲಿ ಮೊದಲ ಬಾರಿಗೆ ವಿಧಾನ ಪರಿಷತ್ ಪ್ರವೇಶಿಸಿದ ಇವರು 1994ರಲ್ಲಿ ಮತ್ತೆ ಎರಡನೇ ಬಾರಿಗೆ ಎಂಎಲ್ಸಿ ಆಗಿ ಅಂದಿನ ಮುಖ್ಯಮಂತ್ರಿ ಆಗಿದ್ದ ವೀರಪ್ಪ ಮೊಯ್ಲಿ ಸರಕಾರದಲ್ಲಿ ಸಾರಿಗೆ ಸಚಿವರಾಗಿ ಈ ಭಾಗಕ್ಕೆ ಬಸ್ ಡಿಪೋ, ಸಾರಿಗೆ ಪ್ರಾದೇಶಿಕ ಕಚೇರಿ ಸೇರಿ ಹಲವು ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿದ್ದರು.

### ಡಾ.ಭೀಮಣ್ಣ ಖಂಡ್ರೆ ಬಯೋ ಡಾಟಾ

**ಹೆಸರು:** ಡಾ.ಭೀಮಣ್ಣ ಖಂಡ್ರೆ
**ತಂದೆ ಹೆಸರು:** ಶಿವಲಿಂಗಪ್ಪ ಖಂಡ್ರೆ
**ತಾಯಿ ಹೆಸರು:** ಪಾರ್ವತಿಬಾಯಿ
**ಜನ್ಮದಿನಾಂಕ:** 08.01.1927
**ವಿದ್ಯಾರ್ಹತೆ:** ಬಿ.ಎ ಮತ್ತು ಎಲ್‌ಎಲ್‌ಬಿ
**ಪತ್ನಿ ಹೆಸರು:** ಲಕ್ಷ್ಮೀಬಾಯಿ ಖಂಡ್ರೆ
**ಮಕ್ಕಳು:** ಐವರು ಪುತ್ರಿಯರು, ಮೂವರು ಪುತ್ರರು
**ರಾಜಕೀಯ ಪ್ರವೇಶ:** 1949–50
**ಪುರಸಭೆ ಅಧ್ಯಕ್ಷರಾಗಿ ಆಯ್ಕೆ:** 1953ರಲ್ಲಿ ಭಾಲ್ಕಿ ಪುರಸಭೆಯ ಪ್ರಥಮ ಅಧ್ಯಕ್ಷರಾಗಿ ಆಯ್ಕೆ
**ಶಾಸಕರಾಗಿ ಆಯ್ಕೆ:** ನಾಲ್ಕು ಅವಧಿ ಶಾಸಕರಾಗಿ ಆಯ್ಕೆ (1962, 1967, 1978, 1983ರಲ್ಲಿ ಕ್ರಮವಾಗಿ ಭಾಲ್ಕಿ ಕ್ಷೇತ್ರದ ಶಾಸಕರಾಗಿ ಸೇವೆ)
**ವಿಧಾನ ಪರಿಷತ್‌ಗೆ ಆಯ್ಕೆ:** ಎರಡು ಅವಧಿ ವಿಧಾನ ಪರಿಷತ್ ಸದಸ್ಯರಾಗಿ ಆಯ್ಕೆ(1988, 1994ರಲ್ಲಿ ಸತತ ಎರಡು ಅವಧಿಗೆ ವಿಧಾನ ಪರಿಷತ್ತು ಸದಸ್ಯರಾಗಿ ಆಯ್ಕೆ)
**ಸಚಿವರಾಗಿ ಸೇವೆ:** 1992–1994ರ ಎಂ.ವೀರಪ್ಪ ಮೊಯ್ಲಿ ಸರಕಾರದಲ್ಲಿ ಸಾರಿಗೆ ಸಚಿವರಾಗಿ ಸೇವೆ
**ಸಹಕಾರ ರಂಗದಲ್ಲಿ ಸೇವೆ:** 02 ಏಪ್ರಿಲ್ 1969 ರಿಂದ 27 ಮಾರ್ಚ್ 1984ರ ವರೆಗೆ ಬಿಎಸ್‌ಎಸ್‌ಕೆ, ಎಂಜಿಎಸ್‌ಎಸ್‌ಕೆ ಅಧ್ಯಕ್ಷರಾಗಿ ಸೇವೆ
**ಶೈಕ್ಷಣಿಕ ಸೇವೆ:** 1963 ರಿಂದ 30 ವರ್ಷಗಳ ಕಾಲ ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಅಧ್ಯಕ್ಷರಾಗಿ ಸೇವೆ
**ಮಹಾಸಭೆಗೆ ಆಯ್ಕೆ:** 1999, 2005ರಲ್ಲಿ ಅಖಿಲ ಭಾರತ ವೀರಶೈವ ಮಹಾಸಭೆ ರಾಷ್ಟ್ರೀಯ ಅಧ್ಯಕ್ಷರಾಗಿ ಸೇವೆ, ಪ್ರಸ್ತುತ ಗೌರವಾಧ್ಯಕ್ಷರಾಗಿ ಸೇವೆ.



ಬೆಂಗಳೂರು ಬಳಿ ಪೇಟೆಯ ಅಂಗಡಿಯಲ್ಲಿ ಮಲ್ಲಮ್ಮ ನುಡಿಯ ಖದರು.



ಕೃಷಿ ಪತ್ತಿನ ಸಾಕಾರ ಸಂಘದವರಿಗೆ ನೂತನ ವರ್ಷದ ಮಲ್ಲಮ್ಮ ನುಡಿ ದಿನಪತ್ರಿಕೆ ಕ್ಯಾಲೆಂಡರ್ ವಿತರಣೆ ಮಾಡಲಾಯಿತು.



ಕೊಪ್ಪಳ ಜಿಲ್ಲೆ, ಕುಕನೂರು ತಾಲೂಕಿನ ಮಂಡಲಗೇರಿ ಗ್ರಾಮ ಪಂಚಾಯಿತಿಯಲ್ಲಿ ನೂತನ ವರ್ಷದ ಕ್ಯಾಲೆಂಡರ್ ಹಾಗೂ ದಿನಪತ್ರಿಕೆಯನ್ನು ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ವಿತರಿಸಲಾಯಿತು.

## ನಮಗೆ ಪ್ರೇರಣೆ ಸ್ವಾಮಿ ವಿವೇಕಾನಂದರು



**ಕಮಲನಗರ:** ಯುವಜನತೆ ವಿವೇಕಾನಂದರ ನಮ್ಮಗೆ ಪ್ರೇರಣೆ ಆಗಬೇಕು, ಅವರ ಆದರ್ಶಗಳು, ಪಾಲಿಸಿ ಜೀವನವನ್ನು ರೂಪಿಸಿಕೊಳ್ಳಬೇಕು ಎಂದು ಸ್ವಾಮಿ ವಿವೇಕಾನಂದ ಪಬ್ಲಿಕ್ ಶಾಲೆ ಸಂಸ್ಥೆಯ ಸಂಸ್ಥಾಪಕ ಬಾಲಾಜಿ ಆರ್ ಫಿರಂಗೆ ಹೇಳಿದರು.

ತಾಲೂಕಿನ ತೋರಣಾ ಗ್ರಾಮದ ಸತ್ಯಂ ರೂರಲ್ ಡೆವಲಪ್ಮೆಂಟ್ ಎಜುಕೇಶನಲ್ ಸೊಸೈಟಿಯ ಅಡಿಯಲ್ಲಿ ನಡೆಯುತ್ತಿರುವ ಸ್ವಾಮಿ ವಿವೇಕಾನಂದ ಪಬ್ಲಿಕ್ ಶಾಲೆಯಲ್ಲಿ ಸೋಮವಾರ ಸ್ವಾಮಿ ವಿವೇಕಾನಂದ ಹಾಗೂ ಜೀಜಾಮಾತೆಯ ಜಯಂತಿ ನಿಮಿತ್ಯ ಭಾವಚಿತ್ರಗಳಿಗೆ ಪುಷ್ಪ ಹಾರ ಹಾಕಿ ಗೌರವ ನಮನ ಸಲ್ಲಿಸಿ ಮಾತನಾಡಿದರು.

ಜಗತ್ತಿನ ಪ್ರಸಿದ್ಧ ವ್ಯಕ್ತಿಗಳು ಕೂಡಾ ಸ್ವಾಮಿ ವಿವೇಕಾನಂದರ ತತ್ವ ಮತ್ತು ಸಿದ್ಧಾಂತಗಳನ್ನು ಪಾಲಿಸಿ ವಿಶ್ವವಿಖ್ಯಾತರಾಗಿದ್ದಾರೆ. ಅಂತೆಯೇ ಇಂತಹ ಸನ್ಯಾಸಿ ವಿವೇಕಾನಂದರ ತತ್ವ, ಸಿದ್ಧಾಂತಗಳನ್ನು ನಾವೆಲ್ಲರೂ ಪಾಲಿಸಿಕೊಂಡು ನಾವೂ ಕೂಡಾ ಅವರಂತೆಯೇ ಜ್ಞಾನಿಗಳಾಗಬೇಕೆಂದು ಯುವ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ನಾವು ಭಾರತದ ಬಗ್ಗೆ ತಿಳಿಯಬೇಕಾದರೆ ಮೊದಲಿಗೆ ವಿವೇಕಾನಂದರ ಜೀವನ ಚರಿತ್ರೆಯ ಅಧ್ಯಯನ ಮಾಡಬೇಕು. ಏಕೆಂದರೆ ಸಾಮಾನ್ಯರೂ ಕೂಡಾ ವಿವೇಕಾನಂದರ ಪುಸ್ತಕಗಳನ್ನು ಓದಿ ಐಎಎಸ್, ಐಪಿಎಸ್ ಹಾಗೂ ಇನ್ನು ದೇಶದ ಹಲವು ಧಾರ್ಮಿಕ ಹುದ್ದೆಗಳಲ್ಲಿ ಒಳ್ಳೆಯ ಹೆಸರು ಪಡೆದಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಅಧ್ಯಕ್ಷೆ ಸರೋಜಾ ಬಾಲಾಜಿ, ಶಿಕ್ಷರಾದ ಉಮೇಶ ಬಾರ್ಕಿ, ಉಮಾ ಪಾಟೀಲ, ಅನುರಾಧಾ ಬಿರಾದಾರ, ಪೂಜಾರಾಣಿ ರಾಜೇಂದ್ರ ಸಂಗಮೆ, ಮಾರುತಿ ಸಗರ ಶಾಲೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಜೆಡಿಎಸ್ ಕಾರ್ಯಕಾರಣಿ ಸಭೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ನಗರದ ಜೆಡಿಎಸ್ ಕಚೇರಿಯಲ್ಲಿ ಮುಂಬರುವ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಚುನಾವಣೆಗಳು ಸಮೀಪಿಸುತ್ತಿರುವ ಹಿನ್ನಲೆಯಲ್ಲಿ, ಪಕ್ಷದ ಪೂರ್ವ ನಿಯೋಜಿತ ಕಾರ್ಯಕಾರಣಿ ಸಭೆ ನಡೆಯಿತು.

ಸಭೆಗೆ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷರಾದ ಮೀನಹಳ್ಳಿ ತಾಯಣ್ಣ ಅವರು ನೇತೃತ್ವ ವಹಿಸಿದ್ದರು. ಈ ಸಂದರ್ಭದಲ್ಲಿ ಚುನಾವಣೆಗೆ ಸಿದ್ಧತೆ, ಪಕ್ಷ ಸಂಘಟನೆಯನ್ನು ಇನ್ನಷ್ಟು ಬಲಪಡಿಸುವುದು, ಬೂತ್ ಮಟ್ಟದ ಸಮಿತಿಗಳ ರಚನೆ, ಕಾರ್ಯಕರ್ತರ ಜವಾಬ್ದಾರಿಗಳು ಹಾಗೂ ಜನಸಂಪರ್ಕ ಕಾರ್ಯಕ್ರಮಗಳ ಕುರಿತು ವಿಸ್ತೃತ ಚರ್ಚೆ ನಡೆಯಿತು.




ಚುನಾವಣೆಗಳನ್ನು ಗಂಭೀರವಾಗಿ ಎದುರಿಸಲು ಎಲ್ಲ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡುವಂತೆ ಜಿಲ್ಲಾಧ್ಯಕ್ಷರಾದ ಮೀನಹಳ್ಳಿ ತಾಯಣ್ಣ ಕರೆ ನೀಡಿದರು. ಮುಂದುವರೆದು ಮಾತನಾಡಿದ ಅವರು, ಪಕ್ಷದ ತತ್ವ–ಸಿದ್ಧಾಂತಗಳನ್ನು ಜನರಿಗೆ ತಲುಪಿಸುವಲ್ಲಿ ಕಾರ್ಯಕರ್ತರ ಪಾತ್ರ ಮಹತ್ವದ್ದಾಗಿದ್ದು, ತಳಮಟ್ಟದಲ್ಲಿ ಸಂಘಟನೆ ಬಲಪಡಿಸಿದರೆ ಚುನಾವಣೆಯಲ್ಲಿ ಯಶಸ್ಸು ಸಾಧಿಸಬಹುದು ಎಂದು ಹೇಳಿದರು.

## ಛದ್ಮವೇಷದಲ್ಲಿ ಮಿಂಚಿದ ಶಾಲಾ ಮಕ್ಕಳು

• **ಮಲ್ಲಮ್ಮ ನುಡಿ ವಾರ್ತೆ ಹುಣಸಗಿ**

ತಾಲೂಕಿನ ಕಲ್ಲದೇವನಹಳ್ಳಿ ಗ್ರಾಮದ ಶ್ರೀ ಖಾಸ್ಗತೇಶ್ವರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಭಕ್ತಿ, ಶಿಸ್ತು ಹಾಗೂ ಉತ್ಸಾಹದಿಂದ ಆಚರಿಸಲಾಯಿತು. ಈ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ವಿದ್ಯಾರ್ಥಿಗಳು ಸ್ವಾಮಿ ವಿವೇಕಾನಂದರ ಛದ್ಮವೇಷ ಧರಿಸಿ ಎಲ್ಲರ ಗಮನ ಸೆಳೆದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯಗುರುಗಳಾದ ಶ್ರೀ ಅಮರಯ್ಯ ಸ್ವಾಮಿ ಜಾಲಿಬೆಂಚಿ ಅವರು ವಹಿಸಿದ್ದರು. ಶಿಕ್ಷಕರಾದ ಶಹನಾಜ್ ಬೇಗಂ, ಈರಮ್ಮ ಹಿರೇಮಠ್, ಶಿವಲೀಲಾ ಪತ್ತಾರ್ ಹಾಗೂ ಪಾರ್ವತಿ ಬಿರಾದಾರ್ ಅವರು ಕಾರ್ಯಕ್ರಮದ ಯಶಸ್ಸಿಗೆ ಮಾರ್ಗದರ್ಶನ ನೀಡಿದರು.



ಸ್ವಾಮಿ ವಿವೇಕಾನಂದರ ಜೀವನ, ತತ್ವಗಳು ಹಾಗೂ ಯುವಜನತೆಗೆ ಅವರ ಸಂದೇಶಗಳ ಕುರಿತು ವಿದ್ಯಾರ್ಥಿಗಳಿಗೆ ಪ್ರಬಂಧ ಮತ್ತು ಭಾಷಣ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಭಾಗವಹಿಸಿ ತಮ್ಮ ವಿಚಾರಧಾರೆಗಳನ್ನು ಸ್ಪಷ್ಟವಾಗಿ ಮಂಡಿಸಿದರು.

## 87 ಕಾಮಗಾರಿಗಳಿಗೆ ಸಿಎಂ ಸಿದ್ದರಾಮಯ್ಯ ಶಂಕುಸ್ಥಾಪನೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕ್ಷೇತ್ರ ಮೈಸೂರು ಮತ್ತು ಡಿಸಿಎಂ ಡಿ. ಕೆ ಶಿವಕುಮಾರ್ ಅವರ ಕನಕಪುರದ ಹಾಗೆ ಕಲ್ಯಾಣ ಕರ್ನಾಟಕ ಭಾಗವು ಅಭಿವೃದ್ಧಿ ಮಾಡಬೇಕು ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆ ಹೇಳಿದರು

ಕಲಬುರಗಿ ಜಿಲ್ಲೆಯ ಯಡ್ರಾಮಿಯಲ್ಲಿ ಆಯೋಜಿಸಿದ್ದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಮತ್ತು ಫಲಾನುಭವಿಗಳಿಗೆ ಸೌಲಭ್ಯ ವಿತರಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಯಡ್ರಾಮಿ ತಾಲ್ಲೂಕಿನಲ್ಲಿ, ಜೇವರ್ಗಿ ಮತಕ್ಷೇತ್ರದಲ್ಲಿ ₹867.49 ಕೋಟಿ ವೆಚ್ಚದ 87 ಕಾಮಗಾರಿಗಳ ಶಂಕುಸ್ಥಾಪನೆ, ₹38.29 ಕೋಟಿ ವೆಚ್ಚದ ಕಾಮಗಾರಿಗಳ ಉದ್ಘಾಟನೆ ಮಾಡಲಾಗಿದೆ. ಒಟ್ಟಾರೆ 906 ಕೋಟಿ ರೂ.ಗಳ ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದರು.

ನಂತರ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ವಿರೋಧ ಪಕ್ಷದವರು ರಾಜಕಾರಣಕ್ಕಾಗಿ ಸುಳ್ಳನ್ನೇ ಅವಲಂಬಿಸಿದ್ದಾರೆ. ಗ್ಯಾರಂಟಿ ಯೋಜನೆಗಳಿಂದ ಮೂಲಸೌಕರ್ಯ ಕಾಮಗಾರಿಗಳಿಗೆ ಸರ್ಕಾರದಲ್ಲಿ ಅನುದಾನವಿಲ್ಲ ಎಂದು ಎಲ್ಲೆಡೆ ಅಪಪ್ರಚಾರ ಮಾಡುತ್ತಿದ್ದಾರೆ. ಸರ್ಕಾರ ದಿವಾಳಿಯಾಗಿದ್ದರೆ ಜೇವರ್ಗಿ ಮತಕ್ಷೇತ್ರ ಒಂದರಲ್ಲಿ ₹906 ಕೋಟಿ ವೆಚ್ಚ ಮಾಡಲಾಗುತ್ತಿರಲಿಲ್ಲ.



ಗ್ಯಾರಂಟಿ ಯೋಜನೆಗಳಿಗಾಗಿ 1 ಲಕ್ಷದ 12 ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಅನುದಾನ ವೆಚ್ಚ ಮಾಡಲಾಗಿದೆ. ಚುನಾವಣೆ ಪೂರ್ವದಲ್ಲಿ ನೀಡಿದ್ದ ಆಶ್ವಾಸನೆಯಂತೆ ಅಧಿಕಾರಕ್ಕೆ ಬಂದ ಒಂದೇ ವರ್ಷದಲ್ಲಿ ಎಲ್ಲಾ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ. ನಮ್ಮ ಸರ್ಕಾರ ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಿದೆ ಎನ್ನುವುದನ್ನು ಜನ ಅರ್ಥ ಮಾಡಿಕೊಳ್ಳಬೇಕು. ನಾವು ಸರ್ಕಾರ ನುಡಿದಂತೆ ನಡೆಯುವವರು ಎಂದರು.

ಈ ಚುನಾವಣೆಯಲ್ಲಿ ನಮ್ಮ ಪಕ್ಷದ ವತಿಯಿಂದ 592 ಭರವಸೆಗಳನ್ನು ನೀಡಲಾಗಿತ್ತು. 243 ಭರವಸೆಗಳನ್ನು ಈಡೇರಿಸಲಾಗಿದೆ. ಉಳಿದ ಅವಧಿಯಲ್ಲಿ ಮಿಕ್ಕ ಭರವಸೆಗಳನ್ನು ಈಡೇರಿಸಲಾಗುವುದು.

ಬಿಜೆಪಿ 2018 ರಿಂದ ಅಧಿಕಾರದಲ್ಲಿದ್ದು, ಅವರು ನೀಡಿದ್ದ 600 ಭರವಸೆಗಳಲ್ಲಿ 10% ಭರವಸೆಗಳನ್ನು ಕೂಡ ಈಡೇರಿಸಿರಲಿಲ್ಲ. ರಾಜ್ಯದಲ್ಲಿ 63 ಹೊಸ ತಾಲೂಕುಗಳನ್ನು ಘೋಷಣೆ ಮಾಡಲಾಗಿತ್ತು. ಬಿಜೆಪಿಯವರು 2018 ರಿಂದ 2023 ರವರೆಗೆ ನೂತನ ತಾಲ್ಲೂಕುಗಳಲ್ಲಿ ಕೇವಲ 14 ಕಡೆ ಮಾತ್ರ ತಾಲ್ಲೂಕು ಆಡಳಿತ ಕಚೇರಿ ನಿರ್ಮಾಣ ಮಾಡಿದ್ದರು. 2023ರಲ್ಲಿ ನಾವು ಅಧಿಕಾರಕ್ಕೆ ಬಂದ ನಂತರ 49 ತಾಲ್ಲೂಕುಗಳಲ್ಲಿ ಕೂಡ ಪ್ರಜಾಸೌಧಗಳನ್ನು ಮಂಜೂರು ಮಾಡಿದ್ದು, ನಿರ್ಮಾಣ ಮಾಡಲಾಗುತ್ತಿದೆ ಎಂದರು. ನಮ್ಮ ಸರ್ಕಾರದಲ್ಲಿ 17 ತಾಲ್ಲೂಕುಗಳು ಮಂಜೂರಾಗಿದ್ದು, 97 ನಾಡ ಕಚೇರಿಗಳು ಮಂಜೂರಾಗಿವೆ. ಕಲ್ಯಾಣ ಕರ್ನಾಟಕದಲ್ಲಿ 39 ಕಚೇರಿಗಳನ್ನು ಮಂಜೂರು ಮಾಡಲಾಗಿದೆ. ಎರಡನೇ ಹಂತದಲ್ಲಿ 53 ನಿರ್ಮಾಣವಾಗಿವೆ. ಕಲ್ಯಾಣ ಕರ್ನಾಟಕದ 25 ತಾಲ್ಲೂಕುಗಳಲ್ಲಿ ನಾಡ ಕಚೇರಿಗಳನ್ನು ನಮ್ಮ ಸರ್ಕಾರ ಮಂಜೂರು ಮಾಡಿದೆ.

ಈ ಬಾರಿ ಮಳೆ ಹೆಚ್ಚಾಗಿ ಬೆಳೆ ಹಾನಿಯಾಗಿರುವುದರಿಂದ ವೈಮಾನಿಕ ಸಮೀಕ್ಷೆ ಕೈಗೊಂಡು ಪರಿಶೀಲಿಸಿ ಪರಿಹಾರ ಕೊಡಲು ನಿರ್ಧರಿಸಿ ಎಸ್ ಡಿ.ಆರ್. ಎಫ್ ನಿಂದ 1,218 ಕೋಟಿ ಜೊತೆಗೆ ಸರ್ಕಾರದ ವತಿಯಿಂದ ಒಟ್ಟು 1,031ಕೋಟಿ ಹೆಚ್ಚುವರಿಯಾಗಿ ಒದಗಿಸಲಾಗಿದೆ. ರಾಜ್ಯದಲ್ಲಿ ಒಟ್ಟು 14.21 ಲಕ್ಷ ರೈತರ ಬೆಳೆ ಹಾನಿಯಾಗಿದ್ದು, ಕಲ್ಯಾಣ ಕರ್ನಾಟಕ ಭಾಗದಲ್ಲಿ 7,21,786 ರೈತರ ಬೆಳೆ ಹಾನಿಗೊಳಗಾಗಿದೆ. 1,072 ಕೋಟಿ ಬೆಳೆ ಹಾನಿಗೆ ಪರಿಹಾರ ನೀಡಿದೆ.

ಕಲಬುರ್ಗಿ ಜಿಲ್ಲೆಯಲ್ಲಿ 3,23,318 ರೈತರ ಬೆಳೆ ಹಾನಿಯಾಗಿದ್ದು, ₹498 ಕೋಟಿ ಪರಿಹಾರ ನೀಡಲಾಗಿದೆ. ರೈತರ ಖಾತೆಗಳಿಗೆ ಈ ಹಣವನ್ನು ತಲುಪಿಸುವ ಕೆಲಸ ಮಾಡಿದ್ದೇವೆ. ರೈತರ ಸಹಾಯಕ್ಕೆ ಸರ್ಕಾರ ಸದಾ ಮುಂದಾಗಿದೆ.

ನೆಟೆ ರೋಗಕ್ಕೆ ತುತ್ತಾದ ತೊಗರಿ ಬೆಳೆಗೆ 233 ಕೋಟಿ ರೂ. ಪರಿಹಾರ ಒದಗಿಸಲಾಗಿದೆ. ಕಬ್ಬಿನ ಬೆಲೆ ಕಡಿಮೆ ಎಂದು ರೈತರು ಪ್ರತಿಭಟಿಸಿದಾಗ ಅವರ ನೆರವಿಗೆ ಸರ್ಕಾರ ಧಾವಿಸಿ ಸರ್ಕಾರದಿಂದ ₹50 ಹಾಗೂ ಕಾರ್ಖಾನೆಯಿಂದ 50 ರೂ. ನಿಗದಿ ಮಾಡಿ 300 ಕೋಟಿಗಳನ್ನು ಸರ್ಕಾರದಿಂದ ಕಬ್ಬಿನ ಬೆಳೆಗಾರರಿಗೆ ನೀಡಲಾಗಿದೆ. ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಶರಣಪ್ರಕಾಶ ಪಾಟೀಲ್, ಪ್ರಿಯಾಂಕ್ ಖರ್ಗೆ, ಕೃಷ್ಣಬೈರೇಗೌಡ, ಮಧು ಬಂಗಾರಪ್ಪ, ಕೆಕೆಆರ್‌ಡಿಬಿ ಅಧ್ಯಕ್ಷರು, ಶಾಸಕರೂ ಆದ ಅಜಯ್ ಸಿಂಗ್, ಶಾಸಕರಾದ ಅಲ್ಲಮ ಪ್ರಭು ಪಾಟೀಲ್, ಎಂ.ವೈ.ಪಾಟೀಲ್, ಚಂದ್ರಕಾಂತ ಪಾಟೀಲ್ ಸೇರಿ ಹಲವು ಮುಖಂಡರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

## ಜೀವನದಲ್ಲಿ ಸಾಧನೆಗೆ ರಕ್ತದಾನ ಅಗತ್ಯ

• **ಮಲ್ಲಮ್ಮ ನುಡಿ ವಾರ್ತೆ ಪೀಣ್ಯ, ದಾಸರಹಳ್ಳಿ**

ರಕ್ತದಾನದಿಂದ ರಕ್ತದೊತ್ತಡ ಮಧುಮೇಹದಂತಹ ರೋಗಗಳು ನಿಯಂತ್ರಣಕ್ಕೆ ಬರುವುದರ ಜೊತೆಗೆ ಆತ್ಮತೃಪ್ತಿ ಸಿಗುತ್ತದೆ. ಮನುಷ್ಯನಿಗೆ ಎಲ್ಲ ಸಂಪತ್ತಿಗಿಂತ ಆರೋಗ್ಯ ಸಂಪತ್ತು ಪ್ರಮುಖವಾದದ್ದು. ಜೀವನದಲ್ಲಿ ಸಾಧನೆ ಮಾಡಲು ಸದೃಡ ಆರೋಗ್ಯ ಬಹಳ ಮುಖ್ಯ. ದೇಹವು ರೋಗಗಳ ನೆಲೆಯಾಗದಂತೆ ಎಚ್ಚರ ವಹಿಸಬೇಕು ಹಾಗೂ ದುಶ್ಚಟಗಳಿಂದ ದೂರವಿರಬೇಕು. ಜನರ ಆರೋಗ್ಯ ಜಾಗೃತಿಗೆ ಉಚಿತ ಆರೋಗ್ಯ ಶಿಬಿರಗಳು ಸಹಕಾರಿಯಾಗಲಿವೆ. ಬಡ ಜನತೆ ಆರೋಗ್ಯದ ಬಗ್ಗೆ ನಿರ್ಲಕ್ಷ ತೋರದೆ ಆರೋಗ್ಯ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು', ಎಂದು ದೊಡ್ಡಣ್ಣ ಕೈಗಾರಿಕಾ ಸಂಘದ ಅಧ್ಯಕ್ಷರಾದ ಎಸ್ ಮಂಜಪ್ಪ ಹೇಳಿದರು.

ದೊಡ್ಡಣ್ಣ ಕೈಗಾರಿಕಾ ಸಂಘದ ಕೇಂದ್ರ ಕಚೇರಿಯಲ್ಲಿ ದೊಡ್ಡಣ್ಣ ಕೈಗಾರಿಕಾ ಸಂಘದ ವತಿಯಿಂದ ರೋಟರಿ ಬೆಂಗಳೂರು ಉದ್ಯೋಗ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಬೃಹತ್ ಆರೋಗ್ಯ ಶಿಬಿರ ಹಾಗೂ ರಕ್ತದಾನ ಶಿಬಿರದಲ್ಲಿ ಅವರು ಮಾತನಾಡಿದರು.




ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರೋಟರಿ ಬೆಂಗಳೂರು ಉದ್ಯೋಗ್ ಅಧ್ಯಕ್ಷರಾದ ಸಂದೀಪ್ ಪಾರ್ವತಿಕರ್ ಮಾತನಾಡಿ, 'ಉತ್ತಮ ಆಹಾರ ಪದ್ಧತಿ ಅಳವಡಿಸಿಕೊಳ್ಳುವುದರ ಜೊತೆಗೆ ದಿನನಿತ್ಯ ಒಂದಿಲ್ಲೊಂದು ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವುದರಿಂದ ಆರೋಗ್ಯ ಕಾಪಾಡಿಕೊಳ್ಳಬಹುದು. ಪ್ರತಿಯೊಬ್ಬರೂ ಆರೋಗ್ಯ ಕಾಪಾಡಿಕೊಂಡು ಜೀವನಶೈಲಿ ಸಾಧ್ಯವಾದಷ್ಟು ಬದಲಿಸಿಕೊಳ್ಳುವುದು ಉತ್ತಮ', ಎಂದು ತಿಳಿಸಿದರು.

ದೊಡ್ಡಣ್ಣ ಕೈಗಾರಿಕಾ ಸಂಘದ ನಿಕಟಪೂರ್ವ ಅಧ್ಯಕ್ಷರಾದ ಸುಬ್ರಮಣ್ಯಂ ಮಾತನಾಡಿ, 'ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ಶಿಬಿರ ನಡೆಸುತ್ತಾ ಬಂದಿದ್ದೇವೆ. ವಿವಿಧ ರೋಗಗಳ ಬಗ್ಗೆ ಜಾಗೃತಿ ಮೂಡಿಸಿ ಅಗತ್ಯ ಇರುವವರಿಗೆ ಮುಂದಿನ ಚಿಕಿತ್ಸೆ ಅಥವಾ ಶಸ್ತ್ರಚಿಕಿತ್ಸೆಗೆ ನೆರವಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬರಿಗೂ ಬಿಪಿ, ಶುಗರ್, ಹೃದಯ ಸಂಬಂಧಿತ ಹಾಗೂ ಕಿಡ್ನಿ ಸಮಸ್ಯೆಗಳು ಸಾಮಾನ್ಯವಾಗಿವೆ. ಇವು ಶ್ರೀಮಂತ ಜನರ ಕಾಯಿಲೆಗಳಾಗಿದ್ದು ಸಾಮಾನ್ಯ ಜನರಿಂದ ಆರ್ಥಿಕವಾಗಿ ಭರಿಸಲು ಅಸಾಧ್ಯ. ಬಡ ಜನರಿಗೆ ಇಂತಹ ಉಚಿತ ಶಿಬಿರಗಳ ಮೂಲಕ ಚಿಕಿತ್ಸೆಗೊಳಪಡಿಸಿದಾಗ ಮಾತ್ರ ಸಂಕಷ್ಟದಿಂದ ಪಾರು ಮಾಡಲು ಸಾಧ್ಯ', ಎಂದು ಹೇಳಿದರು.

ಈ ಸಂದರ್ಭದಲ್ಲಿ ನಿಕಟಪೂರ್ವ ಅಧ್ಯಕ್ಷರಾದ ರೊಟೇರಿಯನ್ ರವಿರಾಜ್ ಶೆಟ್ಟಿ, ನಿಕಟಪೂರ್ವ ಅಧ್ಯಕ್ಷರಾದ ಸುಬ್ರಮಣ್ಯಂ , ದೊಡ್ಡಣ್ಣ ಕೈಗಾರಿಕಾ ಸಂಘದ ನಿಕಟಪೂರ್ವ ಅಧ್ಯಕ್ಷರಾದ ಸುಬ್ರಮಣ್ಯಂ ಟಿ, ಉಪಾಧ್ಯಕ್ಷರಾದ ಚಂದ್ರಶೇಖರ್ ಹೆಚ್. ಸಿ, ಗೌರವ ಕಾರ್ಯದರ್ಶಿ ಚಂದ್ರಶೇಖರ್ ಟಿ. ಸಿ, ಜಂಟಿ ಕಾರ್ಯದರ್ಶಿ ಪುಟ್ಟಪ್ಪ ನೇರ್ಲಿಗೆ, ಖಜಾಂಚಿ ಪಿ ಆರ್ ಚಂದ್ರಶೇಖರ್ ರೆಡ್ಡಿ, ಜಂಟಿ ಖಜಾಂಚಿ ರಾಜಕುಮಾರ್, ವಿಶೇಷ ಆಹ್ವಾನಿತರಾದ ಶಿವಕುಮಾರ ಸ್ವಾಮಿ, ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)